ಸಂಪುಟ: 05 ಸಂಚಿಕೆ: 182 ಪುಟಗಳು:08 ಸೋಮವಾರ 15 ಸೆಪ್ಟೆಂಬರ್ 2025 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

ಮುಂಜಾನೆ ಮಾತು

ನೋವಿಲ್ಲದೆ ಯಾವತ್ತು ಕಣ್ಣೀರು ಬರುವುದಿಲ್ಲ ಪ್ರೀತಿ ಇಲ್ಲದೆ ಯಾವುದೇ ಸಂಬಂಧ ಉಳಿಯುವದಿಲ್ಲ ಬದುಕಿನಲ್ಲಿ ಒಂದು ಮಾತು ಖಂಡಿತಾ ಸತ್ಯ ಯಾರನ್ನೇ ಆಗಲಿ ನೋಯಿಸಿ ನಾವು ಸುಖವಾಗಿ ಇರೋಕಾಗಲ್ಲ

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಹೆಚ್ಚಿನ ಪರಿಹಾರ ಕೊಡಲು ಸಾಧ್ಯವಾಗದಿದ್ದರೆ ರಾಜೀನಾಮೆ ನೀಡಿ : ಶೋಭಾ ಕರಂದ್ಲಾಜೆ

• ಉದಯವಾಹಿನಿ, ಶಿವಮೊಗ್ಗ,

ಹಾಸನದ ಮೊಸಳೆಹೊಸಳ್ಳಿಯಲ್ಲಿ ಗಣೇಶ ಮೆರವಣಿಗೆ ವೇಳೆ ಸಂಭವಿಸಿದ ದುರಂತದಲ್ಲಿ ಮೃತರು ಮತ್ತು ಗಾಯಾಳುಗಳಿಗೆ ಹೆಚ್ಚಿನ ಪರಿಹಾರ ನೀಡಲು ಸಾಧ್ಯವಾಗದಿದ್ದರೆ ಸಿಎಂ ಸಿದ್ದರಾಮಯ್ಯ ರಾಜೀನಾಮೆ ಕೊಡಲಿ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ವಾಗ್ದಾಳಿ ನಡೆಸಿದ್ದಾರೆ.

ರಾಜ್ಯದಲ್ಲಿ ಹಿಂದೂ ವಿರೋಧಿ ಸರ್ಕಾರ ಆಡಳಿತ ನಡೆಸುತ್ತಿದೆ. ಒಂದು ಸಮುದಾಯವನ್ನು ಓಲೈಕೆ ಮಾಡಲು ಮುಂದಾಗಿದೆ ಎಂದು ಆರೋಪಿಸಿದ್ದಾರೆ. ಕೇವಲ ಅಲ್ಪಸಂಖ್ಯಾತರು ಮಾತ್ರ ಕಾಣುತ್ತಿದ್ದಾರೆ. ಆದರೆ, ಬೇರೆ ಸಮುದಾಯದವರು ಅವರಿಗೆ ಕಾಣುತ್ತಿಲ್ಲ. ಹಾಸನದ ಮೊಸಳೆಹೊಸಳ್ಳಿಯಲ್ಲಿ ನಡೆದ ಘೋರ ದುರಂತದಲ್ಲಿ ಅಮಾಯಕರು ಮೃತಪಟ್ಟಿದ್ದಾರೆ. ಅವರಿಗೆ ಹೆಚ್ಚಿನ ಪರಿಹಾರ ನೀಡಿ ಎಂದರೆ ಆಗುತ್ತಿಲ್ಲ ಎನ್ನುತ್ತಾರೆ.

ಇದು ಎಷ್ಟರ ಮಟ್ಟಿಗೆ ಸರಿ. ಮಂಡ್ಯದ ಮದ್ದೂರಿನಲ್ಲಿ ಅನಧಿಕೃತವಾಗಿ ಪ್ರಾರ್ಥನಾ ಮಂದಿರ ನಿರ್ಮಿಸುತ್ತಿದ್ದಾರೆ. ಇದರ ಬಗ್ಗೆ ದೂರು ಕೊಟ್ಟರೂ ಯಾವುದೇ ಕ್ರಮ ಕೈಗೊಂಡಿಲ್ಲ, ರಾಜ್ಯದಲ್ಲಿ ನಡೆಯುತ್ತಿರುವ ಘಟನೆಗಳಿಗೆ ಸಿಎಂ ಸಿದ್ದರಾಮಯ್ಯ ಅವರೇ ಕಾರಣ ಎಂದು ಅವರು ಆರೋಪಿಸಿದರು.

## ಕೇಂದ್ರದಲ್ಲಿ ನಮ್ಮ ಸರ್ಕಾರ ಇದ್ದಿದ್ರೆ ಭಾರತ-ಪಾಕ್ ಮ್ಯಾಚ್ ರದ್ದು : ಪ್ರದೀಪ್ ಈಶ್ವರ್

• ಉದಯವಾಹಿನಿ, ಬೆಂಗಳೂರು

ಕೇಂದ್ರದಲ್ಲಿ ನಮ್ಮ ಸರ್ಕಾರ ಇದ್ದಿದ್ರೆ ಭಾರತ-ಪಾಕಿಸ್ತಾನ ಮ್ಯಾಚ್ ರದ್ದು ಮಾಡಿಸುತ್ತಿದ್ದೆವು ಎಂದು ಶಾಸಕ ಪ್ರದೀಪ್ ಈಶ್ವರ್ ಹೇಳಿದ್ದಾರೆ. ಭಾರತ-ಪಾಕಿಸ್ತಾನ ನಡುವಿನ ಹೈವೋಲ್ಟೇಜ್ ಪಂದ್ಯದ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಭಾರತ ಪಾಕಿಸ್ತಾನ ಮ್ಯಾಚ್ ರದ್ದು ಮಾಡಬೇಕು. ಯಾವ ಮುಖ ಇಟ್ಟುಕೊಂಡು ಮ್ಯಾಚ್ ನಡೆಸುತ್ತಿದ್ದಾರೆ? ಪೆಹಲ್ಗಾಮ್ ಘಟನೆಯ ನೋವು ನಮಗೆ ಇನ್ನೂ ಇದೆ. ಕೇಂದ್ರದ ಬಿಜೆಪಿ ಈ ಮ್ಯಾಚ್ ನಿಲ್ಲಿಸಬಹುದಿತ್ತು, ಆದ್ರೆ ನಿಲ್ಲಿಸಿಲ್ಲ ಎಂದು ಕಿಡಿಕಾರಿದರು.

ಅಮಿತಾ ಶಾ ಮಗ ಜೈ ಶಾ ಇದ್ದಾರೆ, ಅವರಿಗೆ ಬ್ಯುಸಿನೆಸ್ ಮುಖ್ಯ. ಇಲ್ಲಿ ಅಶೋಕ, ವಿಜಯೇಂದ್ರ, ಯತ್ನಾಳ್ ಹೇಳಿದ್ರು ಪಾಕಿಸ್ತಾನ ಅಂತ ಬೊಬ್ಬೆ ಹಾಕಿದ್ರು. ನಿಮಗೆ ಧಮ್ಮು, ತಾಕತ್ ಇದ್ರೆ ಕೇಂದ್ರ ಸರ್ಕಾರಕ್ಕೆ ಹೇಳಿ ಮ್ಯಾಚ್ ನಿಲ್ಲಿಸಿ. ನಾವಿನ್ನೂ ಪೆಹಲ್ಗಾಮ್ ಘಟನೆ ಮರೆತಿಲ್ಲ. ನಮಗೆ ನೋವಿದೆ, ಅದಕ್ಕೆ ನಾನು ಇವತ್ತಿನ ಮ್ಯಾಚ್ ನೋಡಲ್ಲ ಎಂದು ವಾಗ್ದಾಳಿ ನಡೆಸಿದರು.

## ಹಿಂದೂಗಳೇ ಟಾರ್ಗೆಟ್: ಪ್ರತಿಪಕ್ಷಗಳ ಒಗ್ಗಟ್ಟು, ಕಾಂಗ್ರೆಸ್ ಸರ್ಕಾರಕ್ಕೆ ಇಕ್ಕಟ್ಟು

• ಉದಯವಾಹಿನಿ, ಬೆಂಗಳೂರು

ರಾಜಕೀಯ ಪಕ್ಷಗಳಲ್ಲಿನ ಆಂತರಿಕ ಪೈಪೋಟಿ ಪ್ರತಿಷ್ಠೆಯಿಂದಾಗಿ ದಿನೇ ದಿನೇ ರಾಜ್ಯದಲ್ಲಿ ಕೋಮು ಸೂಕ್ಷ್ಮ ವಿಚಾರಗಳು ಬೃಹತ್ ಸಮಸ್ಯೆಗಳಾಗಿ ಪರಿವರ್ತನೆಯಾಗಿದ್ದು ಅದನ್ನು ನಿಭಾಯಿಸಲಾಗದೆ, ರಾಜ್ಯಸರ್ಕಾರ ಪರದಾಡುವಂತಾಗಿದೆ. ಗಣೇಶೋತ್ಸವದ ಗಲಾಟೆಗಳು ಕಾಂಗ್ರೆಸ್‌ಗೆ ಹಿಂದುತ್ವ ವಿರೋಧಿ ಎಂಬ ಹಣೆಪಟ್ಟಿಯನ್ನು ಗಟ್ಟಿಗೊಳಿಸುತ್ತಿವೆ. ವಿಷಯಾಂತರಿಸಲು ಸರ್ಕಾರ ನಡೆಸುತ್ತಿರುವ ನಾನಾ ರೀತಿಯ ಕಸರತ್ತುಗಳು ಪ್ರಯೋಜನವಾಗದೆ ಕಾಂಗ್ರೆಸ್ ಸರ್ಕಾರ ಹಿಂದೂ ವಿರೋಧಿ ಎಂದು ಬ್ರಾಂಡ್ ಆಗುತ್ತಿದೆ. ಒಂದೆಡೆ ಬಿಜೆಪಿಯ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಆರ್ಭಟ ಮಾಡುತ್ತಿದ್ದು, ಅವರ ಮುಂದೆ ಬಿಜೆಪಿಯ ರಾಜ್ಯಾಧ್ಯಕ್ಷರಾದ ಬಿ.ವೈ. ವಿಜಯೇಂದ್ರ, ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಮಂಕಾದಂತೆ ಕಂಡು ಬರುತ್ತಿದ್ದಾರೆ.

ತಮ್ಮ ವರ್ಚಸ್ಸನ್ನು ಹೆಚ್ಚಿಸಿಕೊಳ್ಳಲು ಮದ್ದೂರಿನ ಗಣೇಶೋತ್ಸವದ ಮೇಲೆ ಕಲ್ಲು ತೂರಾಟ ನಡೆಸಿದವರ ವಿರುದ್ಧ ವಿಜಯೇಂದ್ರ ಮತ್ತು ಅಶೋಕ್ ಅವರು ಬೃಹತ್ ಪ್ರತಿಭಟನೆ ಆಯೋಜಿಸಿದ್ದರು. ಪ್ರತಿಭಟನೆ ಯಶಸ್ವಿಯಾಗಿ ಮದ್ದೂರಿನ ಗಲಭೆ ಸರ್ಕಾರಕ್ಕೆ ಬಿಸಿ ತುಪ್ಪವಾಗುವ ಹಂತದಲ್ಲೇ ಸ್ಥಳೀಯ ಕಾರ್ಯಕರ್ತರು, ಬಸನಗೌಡ ಯತ್ನಾಳ್ ಸ್ಥಳಕ್ಕಾಗಮಿಸಬೇಕೆಂದು ಘೋಷಣೆ ಕೂಗಿದರು. ಅದನ್ನು ಅನುಸರಿಸಿ ಯತ್ನಾಳ್ ಸ್ಥಳಕ್ಕೆ ಬಂದು ಮತ್ತಷ್ಟು ಅಬ್ಬರ ಮಾಡಿದರು. ಅಶೋಕ್ ಮತ್ತು ವಿಜಯೇಂದ್ರ ಅವರ ಪ್ರಯತ್ನಗಳು ಯತ್ನಾಳ್ ಅವರ ವರ್ಚಸ್ಸು ಹೆಚ್ಚಳಕ್ಕೆ ಬಂಡವಾಳವಾಗಿ ಪರಿವರ್ತನೆಯಾದವು. ಬಿಜಾಪುರಕ್ಕಷ್ಟೇ ಸೀಮಿತವಾಗಿದ್ದ ಯತ್ನಾಳ್ ಉಚ್ಚಾಟನೆ ಬಳಿಕ ರಾಜ್ಯಾದ್ಯಂತ ಪ್ರವಾಸ ಆರಂಭಿಸಿದ್ದಾರೆ. ಅವರು ಹೋದ ಕಡೆಯಲೆಲ್ಲಾ ಭಾರಿ ಪ್ರಮಾಣದ ಬೆಂಬಲ ಸಿಗುತ್ತಿದೆ. ಇದಕ್ಕೆ ಕೌಂಟರ್ ನೀಡಲು ಬಿಜೆಪಿ ನಾಯಕರು ನಾನಾ ರೀತಿಯ ಪ್ರಯತ್ನಗಳನ್ನು ಮಾಡುತ್ತಿದ್ದಾರೆ.



# ಅಯ್ಯೋ... ಪಾಪ ಪಾಕ್‌ಗೆ ಸೋಲು

ಶತ್ರುಗೆ ಭಾನುವಾರ ಶನಿ

### ಫಲಿಸಿತು ಕೋಟ್ಯಾಂತರ ಭಾರತೀಯರ ಪ್ರಾರ್ಥನೆ: ಪಾಕ್ ಬಗ್ಗುಬಡಿದ ಭಾರತ

• ಉದಯವಾಹಿನಿ, ದುಬೈ

ದುಬೈ ಅಂತರರಾಷ್ಟ್ರೀಯ ಕ್ರಿಕೆಟ್ ಮೈದಾನದಲ್ಲಿ ನಡೆದ 2025 ರ ಏಷ್ಯಾಕಪ್‌ನ ಆರನೇ ಪಂದ್ಯದಲ್ಲಿ ಕೋಟ್ಯಾಂತರ ಭಾರತೀಯರು ಯಾವ ರೀತಿಯ ಫಲಿತಾಂಶ ಬರಬೇಕು ಎಂದು ದೇವರಲ್ಲಿ ಮೊರೆ ಇಟ್ಟಿದ್ದರೋ ಅದೇ ಫಲಿತಾಂಶ ಹೊರಬಿದ್ದಿದೆ. ಬದ್ಧವೈರಿಗಳ ಕದನದಲ್ಲಿ ಪಾಕಿಸ್ತಾನವನ್ನು ಏಕಪಕ್ಷೀಯ ರೀತಿಯಲ್ಲಿ ಸೋಲಿಸಿದ ಟೀಂ ಇಂಡಿಯಾ ಟೂರ್ನಿಯಲ್ಲಿ ಸತತ ಎರಡನೇ ಗೆಲುವು ದಾಖಲಿಸಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಪಾಕಿಸ್ತಾನ ತಂಡ ಭಾರತದ ಬೌಲಿಂಗ್ ಮುಂದೆ ಮಕಾಡೆ ಮಲಗಿ 127 ರನ್ ಗಳಿಸಲಷ್ಟೇ ಶಕ್ತವಾಯಿತು. ಈ ಗುರಿ ಬೆನ್ನಟ್ಟಿದ ಟೀಂ ಇಂಡಿಯಾ ಓವರ್‌ಗಳಲ್ಲಿ 3 ವಿಕೆಟ್‌ಗಳನ್ನು ಕಳೆದುಕೊಂಡು 15.5 ಓವರ್‌ನಲ್ಲಿ ಜಯದ ನಗೆಬೀರಿತು.

ಪಂದ್ಯದಲ್ಲಿ ಟಾಸ್ ಗೆದ್ದು ಬ್ಯಾಟಿಂಗ್ ಆರಂಭಿಸಿದ ಪಾಕ್ ತಂಡಕ್ಕೆ ಟೀಂ ಇಂಡಿಯಾ ವೇಗಿಗಳಾದ ಹಾರ್ದಿಕ್ ಪಾಂಡ್ಯ ಹಾಗೂ ಜಸ್ಪ್ರಿತ್ ಬುಮ್ರಾ ಎರಡು ಬ್ಯಾಕ್ ಟು ಬ್ಯಾಕ್ ಆಘಾತ ನೀಡಿದರು. ಬೌಲಿಂಗ್ ಆರಂಭಿಸಿದ ಹಾರ್ದಿಕ್ ಪಾಂಡ್ಯ ಮೊದಲ ಎಸೆತದಲ್ಲೇ ಸ್ಯಾಮ್ ಅಯೂಬ್ ಅವರನ್ನು ಶೂನ್ಯಕ್ಕೆ ಔಟ್ ಮಾಡಿದರು. ನಂತರ ಜಸ್ಪ್ರೀತ್ ಬುಮ್ರಾ ಪಂದ್ಯದ ಎರಡನೇ ಓವರ್‌ನಲ್ಲಿ ಮೊಹಮ್ಮದ್ ಹ್ಯಾರಿಸ್ ಅವರನ್ನು 3 ರನ್‌ಗಳಿಗೆ ಔಟ್ ಮಾಡಿದರು.

ನಂತರ ಸಾಹಿಬ್‌ಜಾದಾ ಮತ್ತು ಫಖರ್ ಜಮಾನ್ ಮೂರನೇ ವಿಕೆಟ್‌ಗೆ 39 ರನ್‌ಗಳ ಜೊತೆಯಾಟವನ್ನಾಡಿದರು. ಈ ವೇಳೆ ದಾಳಿಗಿಳಿದ ಅಕ್ಷರ್ ಪಟೇಲ್ 17 ರನ್ ಬಾರಿಸಿ ಇನ್ನಿಂಗ್ಸ್ ಕಟ್ಟುತ್ತಿದ್ದ ಫಖರ್ ಅವರನ್ನು ಔಟ್ ಮಾಡುವ ಮೂಲಕ ಈ ಜೊತೆಯಾಟವನ್ನು ಮುರಿದರು. ನಂತರ 10 ನೇ ಓವರ್‌ನ ಕೊನೆಯ ಎಸೆತದಲ್ಲಿ ಅಕ್ಷರ್ ಪಟೇಲ್ ಪಾಕ್ ನಾಯಕ ಸಲ್ಮಾನ್ ಆಘಾ ಅವರನ್ನು ಕೇವಲ 3 ರನ್‌ಗಳಿಗೆ ಪೆವಿಲಿಯನ್ ಸೇರುವಂತೆ ಮಾಡಿದರು. ನಂತರ 13 ನೇ ಓವರ್‌ನ ನಾಲ್ಕನೇ ಮತ್ತು ಐದನೇ ಎಸೆತಗಳಲ್ಲಿ ಕುಲ್ದೀಪ್ ಯಾದವ್ ಪಾಕಿಸ್ತಾನಕ್ಕೆ ಸತತ ಎರಡು ಹೊಡೆತಗಳನ್ನು ನೀಡಿದರು. ಮೊದಲು ಹಸನ್ ನವಾಜ್ (5) ವಿಕೆಟ್ ಪಡೆದ ಕುಲ್ದೀಪ್ ಆ ಬಳಿಕ ಮೊಹಮ್ಮದ್ ನವಾಜ್ (0) ಅವರನ್ನು ಔಟ್ ಮಾಡಿದರು.

ನಂತರ 17 ನೇ ಓವರ್‌ನ ಮೊದಲ ಎಸೆತದಲ್ಲಿ ಸಾಹಿಬ್‌ಜಾದಾ ಫರ್ಹಾನ್ ಅವರನ್ನು ಔಟ್ ಮಾಡುವ ಮೂಲಕ ಕುಲ್ದೀಪ್ 3 ವಿಕೆಟ್ ಪಡೆದ ಸಾಧನೆ ಮಾಡಿದರು. ಪಾಕ್ ಪರ ಅತ್ಯಧಿಕ ರನ್‌ಗಳ ಇನ್ನಿಂಗ್ಸ್ ಆಡಿದ ಸಾಹಿಬ್‌ಜಾದಾ 40 ರನ್ ಬಾರಿಸಿದರು. ನಂತರ ವರುಣ್ ಚಕ್ರವರ್ತಿ 11 ರನ್ ಗಳಿಸಿದ್ದ ಫಹೀಮ್ ಅಶ್ರಫ್ ಅವರನ್ನು ಎಲ್ಬಿಡಬ್ಲ್ಯೂ ಮಾಡುವ ಮೂಲಕ ತಮ್ಮ ಮೊದಲ ವಿಕೆಟ್ ಪಡೆದರು. ಬುಮ್ರಾ, ಸುಫಿಯಾನ್ ಮುಕಿಮ್ ಅವರನ್ನು ಕ್ಲೀನ್ ಔಟ್ ಮಾಡಿ ಪಾಕಿಸ್ತಾನಕ್ಕೆ ಒಂಬತ್ತನೇ ಹೊಡೆತ ನೀಡಿದರು. ಆದರೆ ಕೊನೆಯ ಕೆಲವು ಓವರ್‌ಗಳಲ್ಲಿ ಶಾಹೀನ್ ಅದ್ಭುತ ಪ್ರದರ್ಶನ ನೀಡಿ ಸಿಕ್ಸರ್‌ಗಳ ಮಳೆಗರೆದರು. ಶಾಹೀನ್ 16 ಎಸೆತಗಳಲ್ಲಿ 4 ಸಿಕ್ಸರ್‌ಗಳೊಂದಿಗೆ ಅಜೇಯ 33 ರನ್ ಬಾರಿಸಿದರು.



### ಸೂರ್ಯಕುಮಾರ್-ತಿಲಕ್ ಜವಾಬ್ದಾರಿಯುತ ಆಟ

ನಂತರ 3ನೇ ವಿಕೆಟ್‌ಗೆ ಒಂದಾದ ನಾಯಕ ಸೂರ್ಯಕುಮಾರ್ ಯಾದವ್ ಹಾಗೂ ತಿಲಕ್ ವರ್ಮಾ ವಿಕೆಟ್ ಉಳಿಸಲು ನಿಧಾನಗತಿ ಬ್ಯಾಟಿಂಗ್ ಮಾಡಿದರು. ಇವರಿಬ್ಬರು 3ನೇ ವಿಕೆಟ್‌ಗೆ 52 ಎಸೆತಗಳಲ್ಲಿ 56 ರನ್‌ಗಳ ಜೊತೆಯಾಟ ನಡೆಸಿದರು. ತಿಲಕ್ ವರ್ಮಾ 31 ಎಸೆತಗಳಲ್ಲಿ 2 ಬೌಂಡರಿ, 1 ಸಿಕ್ಸರ್ ಸಹಿತ 31 ರನ್ ಗಳಿಸಿ ಸೈಮ್ ಅಯೂಬ್ ಬೌಲಿಂಗ್‌ನಲ್ಲಿ ಬೌಲ್ಡ್ ಆದರು. 5ನೇ ಕ್ರಮಾಂಕದಲ್ಲಿ ಬಂದ ಶಿವಂ ದುಬೆ ನಾಯಕ ಸೂರ್ಯಕುಮಾರ್ ಯಾದವ್ ಜೊತೆ ಸೇರಿ 5ನೇ ವಿಕೆಟ್‌ಗೆ ಮುರಿಯದ 34 ರನ್‌ಗಳ ಜೊತೆಯಾಟ ನಡೆಸಿ ತಂಡವನ್ನು ಇನ್ನು 25 ಎಸೆತಗಳಿರುವಂತೆ ಗೆಲುವಿನ ಗಡಿ ದಾಟಿಸಿದರು. ಸೂರ್ಯಕುಮಾರ್ 37 ಎಸೆತಗಳಲ್ಲಿ 5 ಬೌಂಡರಿ, 1 ಸಿಕ್ಸರ್ ಸಹಿತ 47 ರನ್ ಗಳಿಸಿದರೆ, ಶಿವಂ ದುಬೆ 7 ಎಸೆತಗಳಲ್ಲಿ ಅಜೇಯ 11 ರನ್‌ಗಳಿಸಿದರು. ಪಾಕಿಸ್ತಾನದ ಪರ ಪಾರ್ಟ್ ಟೈಮ್ ಸ್ಪಿನ್ನರ್ ಸೈಮ್ ಅಯೂಬ್ 3 ವಿಕೆಟ್ ಪಡೆದು ಮಿಂಚಿದರು. ಇದು ಏಷ್ಯಾಕಪ್ ಟಿ20ಯಲ್ಲಿ ಭಾರತಕ್ಕೆ ಪಾಕಿಸ್ತಾನದ ವಿರುದ್ಧ ಸಿಕ್ಕಂತಹ 4ನೇ ಜಯವಾಗಿದೆ. 5 ಪಂದ್ಯಗಳ ಮುಖಾಮುಖಿಯಲ್ಲಿ ಪಾಕ್ ಕೇವಲ 1 ರಲ್ಲಿ ಮಾತ್ರ ಜಯ ಸಾಧಿಸಿದೆ.



### ಭಾರತದ ಬೌಲಿಂಗ್ ದಾಳಿಗೆ ಪಾಕಿಸ್ತಾನ ಧೂಳೀಪಟ

ಟಾಸ್ ಗೆದ್ದು ಬ್ಯಾಟಿಂಗ್ ಮಾಡಿದ ಪಾಕಿಸ್ತಾನ ತಂಡದ ಪರ ಕೇವಲ ಇಬ್ಬರು ಮಾತ್ರ 20ಕ್ಕೂ ಹೆಚ್ಚು ರನ್‌ಗಳಿಸಿದರು ಆರಂಭಿಕ ಬ್ಯಾಟರ್ ಫರ್ಹಾನ್ ಶಾಹಿಬ್ಜಾದಾ 40 ರನ್ ಎಸೆತಗಳಲ್ಲಿ 1 ಬೌಂಡರಿ, 3 ಸಿಕ್ಸರ್‌ಗಳ ಸಹಿತ 40 ರನ್‌ಗಳಿಸಿದರೆ, 9ನೇ ಕ್ರಮಾಂಕದಲ್ಲಿ ಬ್ಯಾಟಿಂಗ್ ಮಾಡಿದ ಶಾಹೀನ್ 16 ಎಸೆತಗಳಲ್ಲಿ 4 ಸಿಕ್ಸರ್ಗಗಳ ನೆರವಿನಿಂದ ಅಜೇಯತ 33 ರನ್‌ಗಳಿಸಿದರು. ಇವರನ್ನ ಹೊರೆತುಪಡಿಸಿದರೆ, ಫಖರ್ ಜಮಾನ್ 17, ಫಹೀಮ್ ಅಶ್ರಫ್ 11, ಸುಫಿಯಾನ್ ಮುಖೀಮ್ 10 ರನ್‌ಗಳಿಸಿದರು. ಉಳಿದವರೆಲ್ಲಾ ಒಂದಂಕಿ ಮೊತ್ತ ದಾಖಲಿಸಿದರು. ಭಾರತದ ಪರ ಕುಲ್ದೀಪ್ ಯಾದವ್ 18ಕ್ಕೆ 3 ವಿಕೆಟ್, ಅಕ್ಷರ್ ಪಟೇಲ್ 18ಕ್ಕೆ 2 ವಿಕೆಟ್, ಜಸ್ಪ್ರೀತ್ ಬುಮ್ರಾ 28ಕ್ಕೆ2 ವಿಕೆಟ್ ಪಡೆದು ಮಿಂಚಿದರೆ, ಹಾರ್ದಿಕ್ ಪಾಂಡ್ಯ 34ಕ್ಕೆ1, ವರುಣ್ ಚಕ್ರವರ್ತಿ 24ಕ್ಕೆ1 ವಿಕೆಟ್ ಪಡೆದರು.



### ಇತಿಹಾಸ ಸೃಷ್ಟಿಸಿದ ಹಾರ್ದಿಕ್ ಪಾಂಡ್ಯ


ಏಷ್ಯಾ ಕಪ್ 2025ರ ಟೂರ್ನಿಯ ಪಾಕ್ ವಿರುದ್ಧದ ಪಂದ್ಯದಲ್ಲಿ ಮೊದಲ ಎಸತೆದಲ್ಲೇ ವಿಕೆಟ್ ಪಡೆದು ಟೀಂ ಇಂಡಿಯಾ ಆಟಗಾರ ಹಾರ್ದಿಕ್ ಪಾಂಡ್ಯ ಇತಿಹಾಸ ಬರೆದಿದ್ದಾರೆ. ಟಾಸ್ ಗೆದ್ದ ಪಾಕಿಸ್ತಾನ ಮೊದಲು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿತು. ಹಾರ್ದಿಕ್ ಪಾಂಡ್ಯ ಮೊದಲ ಎಸೆತದಲ್ಲೇ ಸೈಮ್ ಅಯೂಬ್ ವಿಕೆಟ್ ಪಡೆದರು. ಆ ಮೂಲಕ ಪಾಕ್ ವಿರುದ್ಧದ ಪಂದ್ಯದ ಮೊದಲ ಎಸೆತದಲ್ಲೇ ವಿಕೆಟ್ ಬೀಳಿಸಿದ ಸ್ಟಾರ್ ಆಲ್‌ರೌಂಡರ್ ಎಂಬ ದಾಖಲೆ ಬರೆದಿದ್ದಾರೆ. ಪಾಕಿಸ್ತಾನ ವಿರುದ್ಧದ ಅಂತರರಾಷ್ಟ್ರೀಯ ಟಿ20 ಪಂದ್ಯದ ಮೊದಲ ಎಸೆತದಲ್ಲಿಸ ಭಾರತೀಯ ಆಟಗಾರನೊಬ್ಬ ವಿಕೆಟ್ ಪಡೆದಿರುವುದು ಇದೇ ಮೊದಲು. 2024 ರ ಟಿ20 ವಿಶ್ವಕಪ್‌ನಲ್ಲಿ ಯುಎಸ್‌ಎ ವಿರುದ್ಧ ಅರ್ಷದೀಪ್ ಸಿಂಗ್ ಈ ಸಾಧನೆ ಮಾಡಿದ್ದಾರೆ. ಪಂದ್ಯದ ಮೊದಲ ಎಸೆತದಲ್ಲಿ ವಿಕೆಟ್ ಪಡೆದ ಎರಡನೇ ಭಾರತೀಯ ಬೌಲರ್ ಎಂಬ ಹೆಗ್ಗಳಿಕೆಗೆ ಪಾಂಡ್ಯ ಪಾತ್ರರಾಗಿದ್ದಾರೆ.



2ನೇ ಭಾರತೀಯ ಬೌಲರ್ ಹೆಗ್ಗಳಿಕೆಗೆ ಪಾತ್ರ

### ಹ್ಯಾಂಡ್ ಶೇಕ್ ಮಾಡದ ಸೂರ್ಯಕುಮಾರ್

ಪೆಹಲ್ಗಾಮ್ ಭಯೋತ್ಪಾದಕ ದಾಳಿ, ಭಾರತದ ಆಪರೇಷನ್ ಸಿಂಧೂರ ಬಳಿಕ ಮೊದಲ ಬಾರಿಗೆ ಭಾರತ ಮತ್ತು ಪಾಕಿಸ್ತಾನ ಕ್ರಿಕೆಟ್ ತಂಡಗಳು ಮುಖಾಮುಖಿಯಾಗಿವೆ. ದುಬೈ ಅಂತರರಾಷ್ಟ್ರೀಯ ಕ್ರಿಕೆಟ್ ಮೈದಾನದಲ್ಲಿ ನಡೆಯುತ್ತಿರುವ ಏಷ್ಯಾ ಕಪ್ 2025ರ ಗ್ರೂಪ್ ಎ ಪಂದ್ಯದಲ್ಲಿ ಟಾಸ್ ಗೆದ್ದ ಪಾಕಿಸ್ತಾನ ಬ್ಯಾಟಿಂಗ್ ಆಯ್ದುಕೊಂಡಿದೆ. ಟಾಸ್ ಸಮಯದಲ್ಲಿ ಮೈದಾನದಲ್ಲಿ ಕುತೂಹಲಕಾರಿ ಘಟನೆಯೊಂದು ನಡೆದಿದೆ. ಟಾಸ್ ಬಳಿಕ ಭಾರತದ ನಾಯಕ ಸೂರ್ಯಕುಮಾರ್ ಯಾದವ್, ಪಾಕ್ ಕ್ಯಾಪ್ಟನ್ ಸಲ್ಮಾನ್ ಅಲಿ ಅಘಾ ಕೈ ಕುಲುಕಲಿಲ್ಲ. ಪಾಕ್ ಕ್ಯಾಪ್ಟನ್ ಕಡೆ ನೋಡದೇ ಸೂರ್ಯಕುಮಾರ್ ಮುಂದೆ ಸಾಗಿದ ಪ್ರಸಂಗ ನಡೆಯಿತು. ಸಾಮಾನ್ಯವಾಗಿ ಕ್ರಿಕೆಟ್ ಪಂದ್ಯಗಳಲ್ಲಿ ನಾಯಕರು ಟಾಸ್ ಸಮಯದಲ್ಲಿ ಕೈಕುಲುಕುವುದು ವಾಡಿಕೆ.



# ರಾಜಕೀಯ ಲಾಭಕ್ಕಾಗಿ ಜಾತಿಗಣತಿ ಸಮೀಕ್ಷೆ ಬಳಕೆ

### ● ಡಿಕೆ ಶಿವಕುಮಾರ್ ಸಿಎಂ ಆಗ್ಬಿಡ್ತಾರೆ ಎಂದು ಕುರ್ಚಿ ಗಟ್ಟಿ ಮಾಡಿಕೊಳ್ಳಲು ಜಾತಿ ಸಮೀಕ್ಷೆ: ಬೊಮ್ಮಾಯಿ

• ಉದಯವಾಹಿನಿ, ಬೆಂಗಳೂರು

ಜಾತಿ ಸಮೀಕ್ಷೆ ಮಾಡುವ ಅಧಿಕಾರ ಕರ್ನಾಟಕ ಸರ್ಕಾರಕ್ಕೆ ಇಲ್ಲ. ಕೇಂದ್ರಕ್ಕೆ ಅಷ್ಟೇ ಇರೋದು. ಡಿಕೆ ಶಿವಕುಮಾರ್ ಡಿಸೆಂಬರ್‌ನಲ್ಲಿ ಸಿಎಂ ಆಗುತ್ತಾರೆ. ಹೀಗಾಗಿ ಕುರ್ಚಿ ಗಟ್ಟಿ ಮಾಡಿಕೊಳ್ಳಲು ಸಿದ್ದರಾಮಯ್ಯ ಜಾತಿ ಗಣತಿ ಸಮೀಕ್ಷೆ ಮಾಡಿಸುತ್ತಿದ್ದಾರೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಸಂವಿಧಾನದಲ್ಲಿ ಕೇವಲ ಆರು ಧರ್ಮಗಳು ಇವೆ, ಅಷ್ಟೇ ಧರ್ಮಗಳ ಹೆಸರು ಬರೆಯಬೇಕು. ರಾಜ್ಯದಲ್ಲಿ ಮತಾತಂತರಗೊಂಡ ಕ್ರೈಸ್ತರು ಅನ್ನುವ ಹೊಸ ಕಾಲಂ ಮಾಡಿದ್ದಾರೆ. ಇದೊಂದು ಧರ್ಮದ ರೀತಿ ಕಾಲಂ ಮಾಡಿದ್ದಾರೆ. ಇದು ಕಾನೂನು ಬಾಹಿರ, ಸಂವಿಧಾನ ಬಾಹಿರ, ರಾಜಕೀಯ ಪ್ರೇರಿತವಾಗಿದೆ. ಎರಡೂ ಕಡೆಯೂ ಮತಾಂತರ ಆಗಿರುತ್ತದೆ. ಆದರೆ, ಸಿಎಂ ಕ್ರೈಸ್ತ ಧರ್ಮದ ಮತಾಂತರಕ್ಕೆ ಮಾತ್ರ ಮನ್ನಣೆ ಕೊಟ್ಟಿರೋದೇಕೆ? ಸಿಎಂ ಅವರು ಒಂದು ಹೆಜ್ಜೆ ಮುಂದೆ ಹೋಗಿ ಮತಾಂತರ ಅವರ ಹಕ್ಕು ಅಂದಿದ್ದಾರೆ? ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಸಿಎಂ ಕ್ರೈಸ್ತ ಧರ್ಮದ ಮತಾಂತರಕ್ಕೆ ಮಾತ್ರ ಮನ್ನಣೆ ಕೊಟ್ಟಿರೋದೇಕೆ?

ರಾಜ್ಯದಲ್ಲಿ ಮತಾಂತರ ನಿಷೇಧ ಕಾಯ್ದೆ ಜಾರಿಯಲ್ಲಿದೆ. ಹಿಂದೂ ಧರ್ಮದಲ್ಲಿ ಸಮಾನತೆ ಇಲ್ಲ ಅಂತ ಸಿಎಂ ಹೇಳಿದ್ದಾರೆ. ಇದು ಸಮಾನತೆ ಪ್ರಶ್ನೆ ಅಲ್ಲ, ಆಸೆ ಆಮಿಷ ಒಡ್ಡಿ ಮತಾಂತರ ಆಗಿದ್ದಾರೆ. ಅವರ ಬಡತನ, ಶಿಕ್ಷಣ ಇಲ್ಲದಿರುವುದನ್ನು ದುರುಪಯೋಗ ಪಡಿಸಿಕೊಂಡು ಮತಾಂತರ ಮಾಡಲಾಗಿದೆ. ಹಲವರು ಕ್ರೈಸ್ತಧರ್ಮದಿಂದ ವಾಪಸ್ ಬಂದಿದ್ದಾರೆ. ಈ ಮತಾತಂತರ ಬಗ್ಗೆಯೇ ಹಲವು ಅನುಮಾನಗಳಿವೆ. ಇವರಿಗೆ ಜಾತಿ ಕಾಲಂನಲ್ಲಿ ಮತಾತಂತರಗೊಂಡವರಿಗೆ ಹೊಸ ಕಾಲಂ ಮಾಡಲು ಯಾರು ಅಧಿಕಾರ ಕೊಟ್ಟರು? ಯಾವ ಕಾನೂನಿನಲ್ಲಿದೆ? ತಮ್ಮ ಅಕ್ಕಪಕ್ಕ ಹಿಂದೆ ಮುಂದೆ ಇರುವವರು ಸಲಹೆ ಪಡೆದು ಅದನ್ನು ಸೇರಿಸಿದ್ದಾರೆ ಎಂದು ಬೊಮ್ಮಾಯಿ ನುಡಿದರು.

ಇದು ಧರ್ಮಧರ್ಮ ಗಳ ನಡುವೆ, ವಿಷ ಬೀಜ ಬಿತ್ತುವ, ಗಲಭೆ ಮಾಡಿಸುವ ಕೆಲಸ ಈಗಾಗಲೇ 350 ಕೋಟಿ ರೂ ಪೋಲು ಮಾಡಿದ್ದರು, ಈಗ 420 ಕೋಟಿ ಮತ್ತೆ ಪೋಲು ಮಾಡಲು ಹೊರಟಿದ್ದಾರೆ. ಸಾಮಾಜಿಕ, ಆರ್ಥಿಕ ಸಮೀಕ್ಷೆಗೆ ಜಾತಿ ಏಕೆ ಬೇಕು? ಡಿಸೆಂಬರ್ ನಲ್ಲಿ ಜಾತಿ ಜನಗಣತಿ ವರದಿ ಕೊಡಿ ಅಂತ ಆಯೋಗಕ್ಕೆ ಸಿಎಂ ಹೇಳಿದ್ದಾರೆ. ಈ ಕಡೆ ಡಿಸೆಂಬರ್ ನಲ್ಲಿ ನಾಯಕತ್ವ ಬದಲಾವಣೆ ಆಗಬೇಕು ಅಂತ

### ಹೆಚ್ಚಿನ ಪರಿಹಾರ ಕೊಡಲಿ

ಹಾಸನ ದುರಂತದಲ್ಲಿ ಮಡಿದವರ ಕುಟುಂಬಗಳಿಗೆ ಹೆಚ್ಚಿನ ಪರಿಹಾರ ನೀಡಬೇಕು ಎಂದು ಬೊಮ್ಮಾಯಿ ಆಗ್ರಹಿಸಿದರು. ಹಿಂದೆ ನಡೆದ ಹಲವು ಪ್ರಕರಣಗಳಲ್ಲಿ ಇದೇ ಸಿಎಂ ಹೆಚ್ಚು ಪರಿಹಾರ ಕೊಟ್ಟಿದ್ದಾರೆ. ಹಾಸನದಲ್ಲಿ ಸತ್ತವರು ಅಮಾಯಕರು, ಯುವಕರು ಅವರ ಕುಟುಂಬಗಳು ಕಷ್ಟದಲ್ಲಿದ್ದಾರೆ, ಇದೆಲ್ಲ ನೋಡಿಕೊಂಡು ಹೆಚ್ಚು ಪರಿಹಾರ ಕೊಡಲಿ. ದಾಖಲೆ ಪ್ರಮಾಣದ ಪರಿಹಾರವನ್ನು ಸಿಎಂ ಕೊಡಬೇಕು ಎಂದು ಆಗ್ರಹಿಸಿದರು.

- ರಾಜಕೀಯ ಲಾಭಕ್ಕಾಗಿ ಜಾತಿಗಣತಿ ಸಮೀಕ್ಷೆ ಬಳಕೆ: ಬಸವರಾಜ ಬೊಮ್ಮಾಯಿ
- ಹಾಸನ ದುರಂತದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ಹೆಚ್ಚು ಪರಿಹಾರ ನೀಡಬೇಕು
- ಸಿದ್ದರಾಮಯ್ಯರಿಗೆ ಡಿಕೆ ಶಿವಕುಮಾರ್ ಸಿಎಂ ಆಗುತ್ತಾರೆ ಎನ್ನುವ ಭಯ

ಡಿ. ಕೆ. ಶಿವಕುಮಾರ ಬಣ ಹೇಳುತ್ತಿದೆ, ಡಿಕೆಶಿ ಸಿಎಂ ಆಗುತ್ತಾರೆ ಅಂತಿದ್ದಾರೆ. ಹೀಗಾಗಿ ತಮ್ಮ ಕುರ್ಚಿ ಗಟ್ಟಿ ಮಾಡಿಕೊಳ್ಳಲು ಸಿಎಂ ಜಾತಿ ಸಮೀಕ್ಷೆ ವರದಿಯನ್ನು ರಾಜಕೀಯವಾಗಿ ಬಳಸಲು ಮುಂದಾಗಿದ್ದಾರೆ ಎಂದು ಬಸವರಾಜ ಬೊಮ್ಮಾಯಿ ಅವರು ಆರೋಪಿಸಿದರು.

**ರಾಜಕೀಯ ಅಸ್ತ್ರ:** ಜಾತಿ ಜನಗಣತಿ ಸಮೀಕ್ಷೆ ಮೂಲಕ ಗ್ಯಾರಂಟಿ ಫಲಾನುಭವಿಗಳ ಡೇಟಾ ಸಂಗ್ರಹಕ್ಕೆ ಸರ್ಕಾರ ಮುಂದಾಗಿರುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಗ್ಯಾರಂಟಿ ಯೋಜನೆಗಳಿಗೂ ಸಾಮಾಜಿ ಆರ್ಥಿಕ ಸಮೀಕ್ಷೆಗೂ ಏನು ಸಂಬಂಧ. ಇದು ರಾಜಕೀಯ ಪ್ರೇರಿತವಾದ ಸಮೀಕ್ಷೆ. ಗ್ಯಾರಂಟಿ ಫಲಾನುಭವಿಗಳ ಪರಿಶೀಲನೆಗೆ ಮಾಹಿತಿ ಸಂಗ್ರಹ ಜಾತಿ ಜನಗಣತಿಯನ್ನು ರಾಜಕೀಯ ಅಸ್ತ್ರವಾಗಿ ಬಳಸಲು ಡಿಸಿಎಂ ಡಿ.ಕೆ. ಶಿವಕುಮಾರ್ ಬಣ ಮುಂದಾಗಿದೆ ಎಂದು ಹೇಳಿದರು.

ಜಾತಿ ಜನಗಣತಿ ಸಮೀಕ್ಷೆಯಲ್ಲಿ ನಾಸ್ತಿಕ ಕಾಲಂ ಸೇರಿಸಿರುವ ಕುರಿತು ಕೇಳಿದ ಪ್ರಶ್ನೆಗೆ ಈ ಕಾಲಂ ಅನ್ನು ಸಿದ್ದರಾಮಯ್ಯಗಾಗಿ ಮಾಡಿದ್ದಾರೆ ಎಂದು ವ್ಯಂಗ್ಯವಾಡಿದರು.

### ತಕ್ಕ ನಿರ್ಧಾರ ತೆಗೆದುಕೊಂಡಿಲ್ಲ

ಭಾರತ - ಪಾಕ್ ನಡುವೆ ಕ್ರಿಕೆಟ್ ಮ್ಯಾಚ್ ನಡೆಯುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಪೆಹಲ್ಗಾಮ್ ಹತ್ಯಾಕಾಂಡ, ಆಪರೇಷನ್ ಸಿಂಧೂರ, ಭಾರತ ಬಗ್ಗೆ ಪಾಕ್ ಹೇಳಿಕೆಗಳನ್ನು ಪರಿಗಣಿಸಬೇಕು. ಇದೆಲ್ಲದರ ಹಿನ್ನೆಲೆಯಲ್ಲಿ ಈ ಮ್ಯಾಚ್ ಅನ್ನು ನಡೆಸದಿದ್ದರೆ ಚೆನ್ನಾಗಿತ್ತು. ಕ್ರೀಡೆ ಇರಬೇಕು, ಆದರೆ ದೇಶ, ದೇಶದ ಜನರ ಭಾವನೆ ಬಹಳ ಮುಖ್ಯ ಬಿಸಿಸಿಐ ದೇಶದ ಜನರ ಭಾವನೆಗಳಿಗೆ ತಕ್ಕ ನಿರ್ಧಾರ ತೆಗೆದುಕೊಂಡಿಲ್ಲ ಎಂದರು.

ಈ ದಿನದ ದರ | ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹11,117/Gram24ct ₹10,190/Gram22ct | ಬೆಳ್ಳಿ: ₹133.00/Gram

# ಹಳೇ ಏರ್‌ಪೋರ್ಟ್ ಪುನರಾರಂಭಕ್ಕೆ ತಯಾರಿ

## 2ನೇ ವಿಮಾನ ನಿಲ್ದಾಣಕ್ಕೂ ಮುನ್ನವೇ ಕೇಂದ್ರ, ರಾಜ್ಯ ಸರ್ಕಾರದಿಂದ ದೊಡ್ಡ ನಿರ್ಧಾರ

• **ಉದಯವಾಹಿನಿ, ಬೆಂಗಳೂರು**

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ದೂರದ ದೇವನಹಳ್ಳಿಗೆ ಹೋಗಬೇಕು ಎಂದು ಗೊಣಗುವ ಬೆಂಗಳೂರಿನ ಜನಕ್ಕೆ ಗುಡ್ ನ್ಯೂಸ್ ಸಿಕ್ಕಿದೆ. ಬೆಂಗಳೂರು 2ನೇ ವಿಮಾನ ನಿಲ್ದಾಣ ನಿರ್ಮಾಣಕ್ಕೂ ಮುನ್ನವೇ ಹಳೆಯದಾದ ಎಚ್‌ಎಎಲ್ ವಿಮಾನ ನಿಲ್ದಾಣದಲ್ಲಿ ಸಾರ್ವಜನಿಕ ಸೇವೆ ಶುರುವಾಗಲಿದೆ.

ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿಯಮಿತದ ಜೊತೆಗಿನ ಒಪ್ಪಂದ 2033ರಲ್ಲಿ ಮುಗಿಯುವುದಕ್ಕೂ ಮುನ್ನವೇ ಎಚ್‌ಎಎಲ್ ವಿಮಾನ ನಿಲ್ದಾಣವನ್ನು ಪುನಃ ಆರಂಭಿಸಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಬಿರುಸಿನ ಸಿದ್ಧತೆ ನಡೆಸಿವೆ. ದಶಕಗಳ ಕಾಲ ಬೆಂಗಳೂರಿನ ಏವಿಯೇಷನ್ ಗೇಟ್‌ವೇ ಆಗಿದ್ದ ಎಚ್‌ಎಎಲ್ ಏರ್‌ಪೋರ್ಟ್‌ನಲ್ಲಿ ಮತ್ತೆ ಪ್ರಯಾಣಿಕ ವಿಮಾನಗಳ ಸದ್ದು ಕೇಳಿಬರಲಿದೆ. ಬೆಂಗಳೂರಿಗೆ ಎರಡನೇ ಗ್ರೀನ್‌ಫೀಲ್ಡ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಬಗ್ಗೆ ಚರ್ಚೆ ನಡೆಯುತ್ತಿದೆ. ಇದರ ನಡುವೆ ಈಗ ಎಲ್ಲರ ಗಮನ 2008ರವರೆಗೂ ಸಿಲಿಕಾನ್ ಸಿಟಿಯ ವೈಮಾನಿಕ ಕೇಂದ್ರವಾಗಿದ್ದ ಹಳೇ ವಿಮಾನ ನಿಲ್ದಾಣ ಎಚ್‌ಎಎಲ್ ಕಡೆ ಹರಿದಿದೆ. ಎಚ್‌ಎಎಲ್ ವಿಮಾನ ನಿಲ್ದಾಣವನ್ನು 2033ರ ಒಳಗಡೆಯೇ ಪುನಃ ವಾಣಿಜ್ಯ ಸಂಚಾರಕ್ಕೆ ತೆರೆಯುವ ಬಗ್ಗೆ ಚರ್ಚೆಯಾಗುತ್ತಿದ್ದು, ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ



ನಿಲ್ದಾಣ ನಿಯಮಿತದ ಜೊತೆಗೆ ಮಾತುಕತೆ ನಡೆಯುತ್ತಿದೆ.

ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿಯಮಿತದ ಜೊತೆಗಿನ ಸರ್ಕಾರದ ವಿಶೇಷ ಒಪ್ಪಂದ 2033ರ ಮೇ ತಿಂಗಳಲ್ಲಿ ಮುಕ್ತಾಯಗೊಳ್ಳಲಿದೆ. ಆ ಒಪ್ಪಂದದ ಪ್ರಕಾರ, ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ 150 ಕಿಲೋ ಮೀಟರ್ ವ್ಯಾಪ್ತಿಯಲ್ಲಿ ಬೇರೊಂದು ವಿಮಾನ ನಿಲ್ದಾಣ ಕಾರ್ಯನಿರ್ವಹಿಸುವಂತಿಲ್ಲ. ಅದು ಹೊಸ ವಿಮಾನ ನಿಲ್ದಾಣ ಶುರುವಿಗೆ ಅಡ್ಡಿಯಾಗಿತ್ತು. ಆದರೆ, ಈಗ ಆ ಒಪ್ಪಂದ ಮುಗಿಯುವ ಮೊದಲೇ ಎಚ್‌ಎಎಲ್ ವಿಮಾನ ನಿಲ್ದಾಣವನ್ನು ತೆರೆಯಲು ತೀವ್ರ ಪ್ರಯತ್ನಗಳು ನಡೆದಿವೆ. ಇತ್ತೀಚೆಗೆ ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರ, ನಾಗರಿಕ ವಿಮಾನಯಾನ ಸಚಿವಾಲಯ, ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ ಮತ್ತು ಬಿಐಎಎಲ್ ನಡುವೆ ಉನ್ನತ ಮಟ್ಟದ ಸಭೆ ನಡೆದಿದ್ದು, ಅದರಲ್ಲಿ ಈ ಕುರಿತು ಗಂಭೀರ ಚರ್ಚೆ ನಡೆದಿದೆ. ಕೇಂದ್ರದ ಪ್ರಸ್ತಾಪಕ್ಕೆ ರಾಜ್ಯ ಸರ್ಕಾರದ ಸಮ್ಮತಿ ಇನ್ನು, ಎಚ್‌ಎಎಲ್ ಏರ್‌ಪೋರ್ಟ್ ಅನ್ನು ಪುನಃ ಪ್ರಾರಂಭಿಸುವ ಪ್ರಸ್ತಾಪಕ್ಕೆ ಕರ್ನಾಟಕ ಸರ್ಕಾರ ಸಂಪೂರ್ಣ ಬೆಂಬಲವನ್ನು ಸೂಚಿಸಿದೆ. ಒಂದು ವೇಳೆ ಎಚ್‌ಎಲ್ ವಿಮಾನ ನಿಲ್ದಾಣವನ್ನು ತೆರೆಯುವುದರಿಂದ ಬಿಐಎಎಲ್‌ಗೆ ಯಾವುದೇ ನಷ್ಟವಾದರೆ, ಅದನ್ನು ರಾಜ್ಯ ಸರ್ಕಾರವೇ ಭರಿಸಲಿದೆ ಎಂದು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರು ಬಿಐಎಎಲ್‌ಗೆ ಭರವಸೆ ನೀಡಿದ್ದಾರೆ. ಅದಲ್ಲದೇ, ವಾಣಿಜ್ಯ ಹಾರಾಟಕ್ಕೆ ಅನುಮತಿ ನೀಡಲು ಶೀಘ್ರವಾಗಿ ನಿರಾಕ್ಷೇಪಣಾ ಪತ್ರ ನೀಡುವಂತೆ ಅವರು ಬಿಐಎಎಲ್ ಅನ್ನು ಒತ್ತಾಯಿಸಿದ್ದಾರೆ ಎಂದು ವಿಮಾನ ನಿಲ್ದಾಣಗಳ ಪ್ರಾಧಿಕಾರದ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

### ಹೊಸ ಟರ್ಮಿನಲ್ ಕಟ್ಟಡ, ಬೃಹತ್ ಯೋಜನೆ

**ಎಚ್‌ಎಎಲ್ ವಿಮಾನ ನಿಲ್ದಾಣದಲ್ಲಿ ಮತ್ತೆ ವಾಣಿಜ್ಯ ವಿಮಾನಗಳ ಕಾರ್ಯಾಚರಣೆಯನ್ನು ಶುರು ಮಾಡಲು ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ ಈಗಾಗಲೇ 10 ವರ್ಷಗಳ ಬೃಹತ್ ಮಾಸ್ಟರ್ ಪ್ಲಾನ್ ಅನ್ನು ಹಾಕಿಕೊಂಡಿದೆ. 2030ರಲ್ಲಿ ಎಚ್‌ಎಎಲ್‌ನ ಹಳೇ ಟರ್ಮಿನಲ್ ಅನ್ನು ಕೆಡವಿ, ಹೊಸ ಮತ್ತು ಅತ್ಯಾಧುನಿಕ ಟರ್ಮಿನಲ್ ನಿರ್ಮಾಣ ಮಾಡುವುದು ಈ ಯೋಜನೆಯ ಮೊದಲ ಹಂತ. 2033ರ ಗಡುವಿನೊಳಗೆ ಹೊಸ ಟರ್ಮಿನಲ್ ಕಟ್ಟಡವನ್ನು ಸಿದ್ಧಪಡಿಸುವ ಗುರಿಯನ್ನು ಹೊಂದಲಾಗಿದೆ. ನವೀಕೃತ ವಿಮಾನ ನಿಲ್ದಾಣದಲ್ಲಿ ಏಳು ಅಂತಸ್ತಿನ ಬೃಹತ್ ಕಾರ್ ಪಾರ್ಕಿಂಗ್ ಸೌಲಭ್ಯ ಮತ್ತು ಒಂದು ವಾಣಿಜ್ಯ ಸಂಕೀರ್ಣವನ್ನು ನಿರ್ಮಿಸಲು ಪ್ಲಾನ್ ಮಾಡಲಾಗಿದೆ. ಟರ್ಮಿನಲ್ ಮುಂದಿನ ರಸ್ತೆಯನ್ನು ಕೂಡ ಅಗಲೀಕರಣ ಮಾಡಲಾಗುತ್ತದೆ. ಇದಾದ ಬಳಿಕ ವಿಮಾನ ನಿಲ್ದಾಣದ ಸಂಚಾರ ದಟ್ಟಣೆ ಮತ್ತು ಭೂಸ್ವಾಧೀನ ಪ್ರಕ್ರಿಯೆಯನ್ನು ಅವಲಂಭಿಸಿ ಮುಂದೆ ಅಗತ್ಯವಿರುವ ಯೋಜನೆಗಳನ್ನು ಕೈಗೊಳ್ಳಲು ವಿಮಾನ ನಿಲ್ದಾಣ ಪ್ರಾಧಿಕಾರ ಯೋಚನೆ ಮಾಡುತ್ತಿದೆ.**

# ಹಿಮಾಚಲ ಪ್ರದೇಶದಲ್ಲಿ ಭೀಕರ ಪ್ರವಾಹ ದುರಂತ

• **ಉದಯವಾಹಿನಿ, ಬೆಂಗಳೂರು**

ಹಿಮಾಚಲ ಪ್ರದೇಶದಲ್ಲಿ ಈ ವರ್ಷ ಮಳೆ, ಪ್ರವಾಹ, ಭೂಕುಸಿತದಂತಹ ಪ್ರಾಕೃತಿಕ ದುರಂತಗಳಿಂದ ನೂರಾರು ಮಂದಿ ಮೃತಪಟ್ಟಿದ್ದಾರೆ. ಹಿಮಾಚಲ ಪ್ರದೇಶದಲ್ಲಿ ನೈಸರ್ಗಿಕ ದುರಂತಕ್ಕೆ ಸಂತಾಪ ಸೂಚಿಸಿರುವ ಸಿದ್ದರಾಮಯ್ಯ ವಿಪತ್ತು ಪರಿಹಾರ ಮತ್ತು ಪುನರ್ವಸತಿಗೆ 5 ಕೋಟಿ ರೂಪಾಯಿ ಆರ್ಥಿಕ ನೆರವು ಪ್ರಕಟಿಸಿದ್ದಾರೆ. ಹಿಮಾಚಲ ಪ್ರದೇಶ ರಾಜ್ಯದಲ್ಲಿ ಇತ್ತೀಚೆಗೆ ಉಂಟಾದ ಪ್ರವಾಹಕ್ಕೆ ಅಮೂಲ್ಯ ಜೀವಗಳು ಬಲಿಯಾಗಿವೆ, ಸಾವಿರಾರು ಮನೆಗಳು ಕೊಚ್ಚಿಹೋಗಿವೆ, ಮೂಲಸೌಕರ್ಯಗಳು ನಾಶವಾಗಿವೆ. ಇದಕ್ಕೆ ಕರ್ನಾಟಕದ ಜನರು ತೀವ್ರ ಸಂತಾಪ ಸೂಚಿಸುತ್ತಾರೆ. ಪ್ರಕೃತಿ ನಮ್ಮ ಮೇಲೆ ಮುನಿಸಿಕೊಂಡಾಗ, ಇಂತಹ ಪ್ರಾಕೃತಿಕ ವಿಕೋಪಗಳು ಸಂಭವಿಸಿದಾಗ ಒಗ್ಗಟ್ಟಾಗಿ ಅದನ್ನು ಎದುರಿಸಬೇಕು. ಹೀಗಾಗಿ, ಕರ್ನಾಟಕ ಹಿಮಾಚಲ ಪ್ರದೇಶದ ಜನರ ಜೊತೆ ಹೆಗಲಿಗೆ ಹೆಗಲಾಗಿ ನಿಲ್ಲುತ್ತದೆ. ನಿಮ್ಮ ಕಷ್ಟಕಾಲದಲ್ಲಿ ನಾವು ನಿಮ್ಮೊಂದಿದ್ದೇವೆ ಎಂದು ಸಿಎಂ ಹಿಮಾಚಲ ಪ್ರದೇಶದ ಮುಖ್ಯಮಂತ್ರಿ ಸುಖ್ವಿಂದರ್ ಸಿಂಗ್ ಸುಖು ಅವರಿಗೆ ಪತ್ರ ಬರೆದಿದ್ದಾರೆ. ವಿಪತ್ತಿಗೀಡಾದ ಹಿಮಾಚಲ ಪ್ರದೇಶಕ್ಕೆ ಕರ್ನಾಟಕ ಸರ್ಕಾರದಿಂದ 5 ಕೋಟಿ ರೂ. ಹಣವನ್ನು ನೀಡುವುದಾಗಿ ಸಿದ್ದರಾಮಯ್ಯ ಘೋಷಿಸಿದ್ದಾರೆ.

# ಹಣ ನೀಡದಿದ್ದಕ್ಕೆ ಡೆಲಿವರಿ ಬಾಯ್ ಅಪಹರಿಸಿ ಕೊಲೆ

• **ಉದಯವಾಹಿನಿ, ಬೆಂಗಳೂರು**

ಹಣ ನೀಡದ ಕಾರಣಕ್ಕೆ 18 ವರ್ಷದ ಡೆಲಿವರಿ ಬಾಯ್‌ನನ್ನು ಅಪಹರಿಸಿ ಕೊಲೆ ಮಾಡಲಾಗಿದೆ. ಮೃತನನ್ನು ಅನ್ನಪೂರ್ಣೇಶ್ವರಿನಗರ ನಿವಾಸಿ ಕೆ. ದೀಪಕ್ ರಾಜ್ ಎಂದು ಗುರುತಿಸಲಾಗಿದೆ. ಪೊಲೀಸರು ಇಬ್ಬರು ಆರೋಪಿಗಳನ್ನು ಬಂಧಿಸಿದ್ದು, ಉಳಿದವರಿಗಾಗಿ ಹುಡುಕಾಟ ನಡೆಸಿದ್ದಾರೆ. ರಾಜ್‌ನನ್ನು ಅಪಹರಿಸಿದ ನಂತರ, ಆರೋಪಿಯು ದೀಪಕ್ ಅಣ್ಣ ಪ್ರವೀಣ್ (20) ಎಂಬಾತನನ್ನು ತಾವರೆಕೆರೆ ಪ್ರದೇಶದ ಮಾಗನಹಳ್ಳಿಯ ಮಾಗನಹಳ್ಳಿ ಗುಡ್ಡೆ ಬಳಿ ಕರೆಸಿ, ಹಣ ನೀಡದಿದ್ದಕ್ಕಾಗಿ ಇಬ್ಬರ ಮೇಲೆ ಹಲ್ಲೆ ನಡೆಸಿದ್ದಾನೆ. ನಂತರ ಆತ ಇಬ್ಬರು ಸಹೋದರರನ್ನು ಮನೆಗೆ ಹೋಗಲು ಬಿಟ್ಟಿದ್ದಾನೆ. ಬೆಳಗ್ಗೆ ದೀಪಕ್ ರಾಜ್ ಪದೇ ಪದೇ ವಾಂತಿ ಮಾಡಲು ಪ್ರಾರಂಭಿಸಿದಾಗ, ಆತನನ್ನು ಆಸ್ಪತ್ರೆಗೆ ಕರೆದೊಯ್ಯಲಾಯಿತು, ಅಲ್ಲಿ ಆತ ದಾರಿಯಲ್ಲಿಯೇ ಸಾವನ್ನಪ್ಪಿದ್ದಾನೆ. ಆನಂತರ ಸಂತ್ರಸ್ತನ ತಾಯಿ ಯಶೋದಾ ಮಂಗಳವಾರ ಜ್ಞಾನಭಾರತಿ ಪೊಲೀಸರನ್ನು ಸಂಪರ್ಕಿಸಿ ಕೊಲೆ ದೂರು ದಾಖಲಿಸಿದರು. ಈ ಸಂಬಂಧ ಇಬ್ಬರು ಆರೋಪಿಗಳನ್ನು ಬಂಧಿಸಲಾಗಿದೆ. ಪರಾರಿಯಾಗಿರುವ ಮತ್ತೊಬ್ಬ ಆರೋಪಿಯ ಬಳಿ ಇರುವ ಮೃತನ ದ್ವಿಚಕ್ರ ವಾಹನ ಇನ್ನೂ ಪತ್ತೆಯಾಗಿಲ್ಲ. ಆರೋಪಿಗಳು ಸಹೋದರರಿಗೆ ಪರಿಚಿತರು. ಅವರು ಪ್ರವೀಣ್‌ಗೆ ಕರೆ ಮಾಡಿ ಹಣ ನೀಡುವಂತೆ ಒತ್ತಾಯಿಸಿದರು.

# ವಯ್ಯಾಲಿಕಾವಲ್ ಟಿಟಿಡಿಯಲ್ಲಿ ಶಿಶಿರ ಗಾಯನ ಸೇವೆ



• **ಉದಯವಾಹಿನಿ, ಬೆಂಗಳೂರು**

ತಿರುಮಲ ತಿರುಪತಿ ದೇವಸ್ಥಾನಗಳು ಹಿಂದೂಧರ್ಮ ಪ್ರಚಾರ ಪರಿಷತ್ ವತಿಯಿಂದ ವಯ್ಯಾಲಿಕಾವಲಿನ 16ನೇ ಅಡ್ಡರಸ್ತೆಯಲ್ಲಿರುವ ಶ್ರೀ ವೆಂಕಟೇಶ್ವರ ಸ್ವಾಮಿ ದೇವಸ್ಥಾನ(ಟಿಟಿಡಿ)ದಲ್ಲಿ ಏರ್ಪಡಿಸಿದ್ದ ಊಂಜಲ್ ಸಂಗೀತೋತ್ಸವ ಕಾರ್ಯಕ್ರಮದಲ್ಲಿ ಶ್ರೀ ಶಿಶಿರ್ ಕೆ.ಪಿ. ಅವರು ಹರಿದಾಸರ ಪದಗಳನ್ನು ಪ್ರಸ್ತುತ ಪಡಿಸಿದರು. ವಿ|| ಶ್ರೀ ಎಂ.ಎಸ್. ಗೋವಿಂದಸ್ವಾಮಿ (ಪಿಟೀಲು), ಶ್ರೀ ಅನಿರುದ್ಧ ವಾಸುದೇವ್ (ಮೃದಂಗ) ಮತ್ತು ಶ್ರೀ ಅವೀಕ್ಷಿತ್ ಶ್ರೀನಿವಾಸನ್ (ತಬಲಾ) ಸಾಥ್ ನೀಡಿದರು. ಟಿ ಟಿ ಡಿ ಹೆಚ್.ಡಿ.ಪಿ.ಪಿ. ಸಂಚಾಲಕರಾದ ಡಾ|| ಪಿ. ಭುಜಂಗರಾವ್ ಅವರು ಸ್ವಾಗತ ಮತ್ತು ವಂದನಾರ್ಪಣೆ ಮಾಡಿದರು.

# ಶಾಲಾ ಬಾಲಕನ ಮೇಲೆ ಲೈಂಗಿಕ ದೌರ್ಜನ್ಯ: ವಾರ್ಡನ್ ಮತ್ತು 6 ವಿದ್ಯಾರ್ಥಿಗಳ ಬಂಧನ

• **ಉದಯವಾಹಿನಿ, ಬೆಂಗಳೂರು**

ಶಾಲಾ ಬಾಲಕನಿಗೆ ಲೈಂಗಿಕ ಕಿರುಕುಳ ನೀಡಿದ ಹಾಗೂ ರ‍್ಯಾಗಿಂಗ್ ಮಾಡಿದ ಆರೋಪದ ಮೇಲೆ ಎಲೆಕ್ಟ್ರಾನಿಕ್ಸ್ ಸಿಟಿ ಸಮೀಪದ ಇಂಟರ್ ನ್ಯಾಷನಲ್ ಸ್ಕೂಲ್‌ನ ಹಾಸ್ಟೆಲ್ ವಾರ್ಡನ್, ಆರು ವಿದ್ಯಾರ್ಥಿಗಳನ್ನು ಬಂಧಿಸಲಾಗಿದೆ. ಪ್ರಕರಣ ಸಂಬಂಧ ವಿಚಾರಣೆಗೆ ಹಾಜರಾಗುವಂತೆ ಸಂಸ್ಥೆಯ ಪ್ರಾಂಶುಪಾಲರಿಗೆ ಸೂಚಿಸಲಾಗಿದೆ. ಮಗನ ಮೇಲೆ ದೈಹಿಕ, ಮಾನಸಿಕ ದೌರ್ಜನ್ಯ ನಡೆದ ಬಗ್ಗೆ ಸಂತ್ರಸ್ತನ ಪೋಷಕರು ನೀಡಿದ ದೂರಿನ ಮೇರೆಗೆ ಬನ್ನೇರುಘಟ್ಟ ಠಾಣೆ ಪೊಲೀಸರು ಪೋಕ್ಸೋ ಕಾಯ್ದೆ ಅಡಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ. ದೌರ್ಜನ್ಯದ ಬಗ್ಗೆ ತಿಳಿದಿದ್ದರೂ ಸೂಕ್ತ ಕ್ರಮ ಕೈಗೊಳ್ಳಲು ವಿಫಲವಾದ ಕಾರಣ ಹಾಸ್ಟೆಲ್ ವಾರ್ಡನ್ ಅವರನ್ನು ಬಂಧಿಸಿ ವಿಚಾರಣೆಗೆ ಒಳಪಡಿಸಲಾಗಿದೆ. ಶಾಲೆಯ ಆರು ಹಿರಿಯ ವಿದ್ಯಾರ್ಥಿಗಳು 15 ವರ್ಷದ ಬಾಲಕನನ್ನು ಗುರಿಯಾಗಿಸಿಕೊಂಡು ಸೆಪ್ಟೆಂಬರ್ ಮೊದಲ ವಾರದಲ್ಲಿ ನಾಲ್ಕು ದಿನ ದೈಹಿಕ ಮತ್ತು ಮಾನಸಿಕವಾಗಿ ಕಿರುಕುಳ ನೀಡಿದ್ದಾರೆ. ವಿವಸ್ತ್ರಗೊಳಿಸಿ ನೃತ್ಯ ಮಾಡುವಂತೆ ಒತ್ತಾಯಿಸಿದ್ದಾರೆ.

# ಇಂದಿರಾ ಕ್ಯಾಂಟೀನ್ ಸುತ್ತ ಸ್ವಚ್ಛತೆಗೆ ಸೂಚನೆ



• **ಉದಯವಾಹಿನಿ, ಬೆಂಗಳೂರು**

ಇಂದಿರಾ ಕ್ಯಾಂಟೀನ್ ಒಳಗೆ ಹಾಗೂ ಸುತ್ತಮುತ್ತ ಸ್ವಚ್ಛತೆ ಕಾಪಾಡಬೇಕು ಎಂದು ಬೆಂಗಳೂರು ಪಶ್ಚಿಮ ನಗರ ಪಾಲಿಕೆ ಆಯುಕ್ತ ಡಾ. ಕೆ.ವಿ. ರಾಜೇಂದ್ರ ಸೂಚಿಸಿದರು.ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯ ವಿವಿಧ ಸ್ಥಳಗಳಿಗೆ ಶನಿವಾರ ಭೇಟಿ ನೀಡಿ. ಇಂದಿರಾ ಕ್ಯಾಂಟೀನ್‌ನಲ್ಲಿ ಆಹಾರ ಸೇವಿಸಿದ ನಂತರ, ಸ್ವಚ್ಛತೆ ಕಾಪಾಡಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ವಾರ್ಡ್ 35ರ ಪೌರಕಾರ್ಮಿಕರ ಮಸ್ಟರಿಂಗ್ ಸ್ಥಳಕ್ಕೆ ಭೇಟಿ ಕೊಟ್ಟ ಆಯುಕ್ತರು, ಪೌರಕಾರ್ಮಿಕರ ಹಾಜರಾತಿ ಪರಿಶೀಲಿಸಿ, ಅವರೊಡನೆ ಸಮಾಲೋಚಿಸಿ, ಸಿಬ್ಬಂದಿಗೆ ವ್ಯವಸ್ಥಿತವಾಗಿ ತ್ಯಾಜ್ಯ ನಿರ್ವಹಣೆ ಮಾಡಲು ಹೇಳಿದರು. ಹೆಚ್ಚುವರಿ ಆಯುಕ್ತ ದಿಗ್ವಿಜಯ್ ಬೋಡ್ಕ ಅವರು ವಾರ್ಡ್ 162ರ ಗಿರಿನಗರದ ಆಟೋ ಟಿಪ್ಪರ್ ಮಸ್ಟರಿಂಗ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ, ಸಮಯಕ್ಕೆ ಸರಿಯಾಗಿ ಮಸ್ಟರಿಂಗ್ ಸ್ಥಳಕ್ಕೆ ಬರುವಂತೆ ಸೂಚಿಸಿದರು. ವಾರ್ಡ್ 198 ಆದರ್ಶ ಲೇಔಟ್, ವಾರ್ಡ್ 126 ಮಾರುತಿ ಮಂದಿರ, ವಾರ್ಡ್ 101 ರ ಕೆ.ಎಚ್.ಬಿ ಕಾಲೋನಿ, ಸಿದ್ದಯ್ಯ ಪುರಾಣಿಕ ರಸ್ತೆ, ವಾರ್ಡ್ 156ರ ಗಾಳಿ ಆಂಜನೇಯ ರಸ್ತೆ. ವಿಜಯನಗರ ವಿಭಾಗ, ಗೋವಿಂದರಾಜ ನಗರ, ವಿದ್ಯಾಪೀಠ ವಾರ್ಡ್‌ನಲ್ಲಿ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮ ನಡೆಯಿತು.

# ಎಂ ಚಿನ್ನಸ್ವಾಮಿ ಕ್ರೀಡಾಂಗಣಕ್ಕೆ ಮತ್ತೊಂದು ಸಂಕಷ್ಟ

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕ ರಾಜ್ಯ ಕ್ರಿಕೆಟ್ ಅಸೋಸಿಯೇಷನ್ ಕ್ರೀಡಾಂಗಣ ಎಂದೂ ಕರೆಯಲ್ಪಡುವ ಚಿನ್ನಸ್ವಾಮಿ ಕ್ರೀಡಾಂಗಣಕ್ಕೆ ವಿದ್ಯುತ್ ಸರಬರಾಜು ಶೀಘ್ರದಲ್ಲೇ ಪುನಃಸ್ಥಾಪನೆಯಾಗುವ ಸಾಧ್ಯತೆಯಿಲ್ಲ. ನಿಯಮ ಉಲ್ಲಂಘನೆಗಳನ್ನು ಉಲ್ಲೇಖಿಸಿ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ ಕೋರಿಕೆ ಮೇರೆಗೆ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ಲಿಮಿಟೆಡ್ (ಬೆಸ್ಕಾಂ) ಜೂನ್ 30 ರಂದು ಕ್ರೀಡಾಂಗಣಕ್ಕೆ ವಿದ್ಯುತ್ ಸರಬರಾಜನ್ನು ಕಡಿತಗೊಳಿಸಿತು.

ಜೂನ್ 4 ರಂದು ಆರ್‌ಸಿಬಿ ತಂಡದ ವಿಜಯೋತ್ಸವದ ಸಂದರ್ಭದಲ್ಲಿ ಕ್ರೀಡಾಂಗಣದ ಬಳಿ ಸಂಭವಿಸಿದ ಭೀಕರ ಕಾಲ್ತುಳಿತದ ನಂತರ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಈ ಘಟನೆಯಲ್ಲಿ 11 ಜನರು ಸಾವಿಗೀಡಾದರು ಮತ್ತು 71 ಜನರು ಗಾಯಗೊಂಡರು. ಈಗ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯೂ ಸಹ ಕ್ರೀಡಾಂಗಣದ ನಿಯಮ ಉಲ್ಲಂಘನೆಗಳನ್ನು ಪರಿಶೀಲಿಸುತ್ತಿದೆ.

'ಅಗ್ನಿ ಸುರಕ್ಷತಾ ನಿಯಮಗಳನ್ನು ಪಾಲಿಸಿಲ್ಲ'

ದೊಡ್ಡ ಶ್ರೇಣಿಯ ಸೌರ ಫಲಕಗಳಿಂದ ತನ್ನ ವಿದ್ಯುತ್ ಬೇಡಿಕೆಯ ಒಂದು ಭಾಗವನ್ನು ಪೂರೈಸಿದ ನಂತರವೂ ಕ್ರೀಡಾಂಗಣದಲ್ಲಿ ಹೆಚ್ಚಿನ ಸಂಖ್ಯೆಯ ಡೀಸೆಲ್ ಜನರೇಟರ್‌ಗಳನ್ನು ಬಳಸಲಾಗುತ್ತಿದೆ ಎಂಬುದನ್ನು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಕಂಡುಕೊಂಡಿದೆ. 'ನಾವು ಈ ಜನರೇಟರ್‌ಗಳಿಂದ ಉಂಟಾಗುವ ವಾಯು ಮತ್ತು ಶಬ್ದ ಮಾಲಿನ್ಯದ ಮಟ್ಟವನ್ನು ಪರಿಶೀಲಿಸುತ್ತಿದ್ದೇವೆ ಮತ್ತು



ಡೇಟಾವನ್ನು ಸಂಗ್ರಹಿಸುತ್ತಿದ್ದೇವೆ' ಎಂದು ಹೆಸರು ಹೇಳಲು ಇಚ್ಛಿಸದ KSPCB ಅಧಿಕಾರಿಯೊಬ್ಬರು ಹೇಳಿದರು.

ಅಗ್ನಿಶಾಮಕ ಇಲಾಖೆಯ ಕೋರಿಕೆಯ ಮೇರೆಗೆ ಕ್ರೀಡಾಂಗಣಕ್ಕೆ ವಿದ್ಯುತ್ ಸರಬರಾಜನ್ನು ಕಡಿತಗೊಳಿಸಲಾಯಿತು. ಕ್ರೀಡಾಂಗಣದ ಆಡಳಿತ ಮಂಡಳಿಯು ವಿದ್ಯುತ್ ಸರಬರಾಜನ್ನು ಪುನಃಸ್ಥಾಪಿಸುವಂತೆ ವಿನಂತಿ ಮಾಡಿದೆ. ಆದರೆ, ನಾವು ಇನ್ನೂ ವಿದ್ಯುತ್ ಪುನಃಸ್ಥಾಪಿಸಿಲ್ಲ. ಅವರು ನ್ಯಾಯಾಲಯವನ್ನು ಸಹ ಸಂಪರ್ಕಿಸಿದ್ದರು. ಆದರೆ, ಅನುಮತಿ ನೀಡಿಲ್ಲ. ಅವರು ಸೌರಶಕ್ತಿ ಮತ್ತು ಡೀಸೆಲ್ ಜನರೇಟರ್‌ಗಳನ್ನು ಬಳಸುತ್ತಿದ್ದಾರೆ. ಸರ್ಕಾರ ಅಥವಾ ನ್ಯಾಯಾಲಯದ ಆದೇಶಗಳು ಬಂದ ನಂತರ ವಿದ್ಯುತ್ ಸರಬರಾಜನ್ನು ಪುನಃಸ್ಥಾಪಿಸಲಾಗುತ್ತದೆ' ಎಂದು ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಎನ್. ಶಿವಶಂಕರ ಹೇಳಿದರು.

ಕ್ರೀಡಾಂಗಣದ ಆಡಳಿತ ಮಂಡಳಿಯು ಅಗ್ನಿ ಸುರಕ್ಷತಾ ನಿಯಮಗಳನ್ನು ಪಾಲಿಸಿಲ್ಲ ಮತ್ತು ಆಕ್ಷೇಪಣೆ ರಹಿತ ಪ್ರಮಾಣಪತ್ರವನ್ನು ಹೊಂದಿಲ್ಲ ಎಂದು ಬೆಸ್ಕಾಂಗೆ ನೀಡಿದ ನಿರ್ದೇಶನದಲ್ಲಿ ಅಗ್ನಿಶಾಮಕ ಇಲಾಖೆ ತಿಳಿಸಿತ್ತು. ಕ್ರೀಡಾಂಗಣದ ಪ್ರವೇಶ ಮತ್ತು ನಿರ್ಗಮನ ಜಾಗಗಳಲ್ಲಿ ಅಗ್ನಿಶಾಮಕ ವಾಹನಗಳಿಗೆ ಸಾಕಷ್ಟು ಸ್ಥಳಾವಕಾಶವಿಲ್ಲ ಎಂಬುದು ಅಗ್ನಿಶಾಮಕ ಇಲಾಖೆ ಎತ್ತಿದ ಸಮಸ್ಯೆಗಳಲ್ಲಿ ಒಂದಾಗಿದೆ. ದೊಡ್ಡ ಕಾರ್ಯಕ್ರಮಗಳಿಗೆ ಅವಕಾಶ ಕಲ್ಪಿಸುವ ಸ್ಥಳದಲ್ಲಿ ಇಂತಹ ನಿಯಮಾವಳಿಗಳು ಅತ್ಯಗತ್ಯ ಎಂದು ಅದು ಹೇಳಿದೆ.

> **ಕ್ರೀಡಾಂಗಣವು 400kW ಸೌರಶಕ್ತಿಯನ್ನು ಉತ್ಪಾದಿಸುತ್ತದೆ ಮತ್ತು ಬೆಸ್ಕಾಂ ಗ್ರಿಡ್‌ನಿಂದ ಇನ್ನೂ 60,000 ಯೂನಿಟ್‌ಗಳನ್ನು ಬಳಸುತ್ತದೆ. ಅಗ್ನಿಶಾಮಕ ಇಲಾಖೆಯ ಅಧಿಕಾರಿಗಳು ಪ್ರತಿಕ್ರಿಯೆಗೆ ಲಭ್ಯವಿಲ್ಲದಿದ್ದರೂ, ಸದ್ಯ ಯಾವುದೇ ನಿರ್ಧಾರಗಳನ್ನು ತೆಗೆದುಕೊಳ್ಳಲು ಕ್ರೀಡಾಂಗಣದಲ್ಲಿಯೂ ಮ್ಯಾನೇಜ್ಮೆಂಟ್ ಇಲ್ಲ. ಯಾವುದೇ ವಾಯು ಅಥವಾ ಶಬ್ದ ಮಾಲಿನ್ಯ ಉಲ್ಲಂಘನೆಯ ಬಗ್ಗೆ ತಮಗೆ ತಿಳಿದಿಲ್ಲ ಮತ್ತು ತಮ್ಮ ದೈನಂದಿನ ಬೇಡಿಕೆಯನ್ನು ಪೂರೈಸಲು ಜನರೇಟರ್‌ಗಳು ಮತ್ತು ಸೌರಶಕ್ತಿಯನ್ನು ಬಳಸುತ್ತಿದ್ದೇವೆ ಎಂದು ಕ್ರೀಡಾಂಗಣದ ಸಿಬ್ಬಂದಿ ಹೇಳಿದರು.**

# ರೇಸ್ ಆರಂಭವಾದ ನಂತರವೂ ನೀವು ಬಾಜಿ ಕಟ್ಟಬಹುದು



• **ಉದಯವಾಹಿನಿ, ಬೆಂಗಳೂರು**

ಕುದುರೆಗಳು ಗೆಲ್ಲುವ ಕಡೆಗೆ ಓಡುವಾಗ ಸೆಕೆಂಡುಗಳು ಕೂಡ ಬಹಳ ಮುಖ್ಯವಾಗುತ್ತದೆ. ಜನರು ರೇಸ್‌ಗಳ ಫಲಿತಾಂಶದ ಮೇಲೆ ಬಾಜ್ ಕಟ್ಟಿದಾಗ ಹೆಮ್ಮೆ, ಅದೃಷ್ಟ ಮತ್ತು ಅನೇಕ ಜೀವಗಳನ್ನು ಸಹ ಪಣಕ್ಕಿಡಲಾಗುತ್ತದೆ. ಈಗ, ರೇಸ್ ಪ್ರಾರಂಭವಾದ ಒಂದು ಗಂಟೆಯ ನಂತರವೂ ಜನರು ಬಾಜಿ ಕಟ್ಟಲು ಅನುಮತಿಸುವ ರೇಸಿಂಗ್ ಕ್ಲಬ್ ಬಗ್ಗೆ ನಿಮಗೆ ಅಂದಾಜಿದೆಯೇ? ಹೌದು, ಇದೆಲ್ಲವೂ ಬೆಂಗಳೂರು ಟರ್ಫ್ ಕ್ಲಬ್ ಬಿಟಿಸಿನಲ್ಲಿ ನಡೆಯುತ್ತಿದೆ.

ಪ್ರತಿಷ್ಠಿತ ಖಾಸಗಿ ಸಂಸ್ಥೆಯೊಂದು ನಡೆಸಿದ ವಿಧಿವಿಜ್ಞಾನ ಲೆಕ್ಕಪರಿಶೋಧನೆಯು ಬಿಟಿಸಿಯಲ್ಲಿ ರೇಸ್ ಸಮಯದ ನಂತರ ಬೆಟ್ಟಿಂಗ್ ಕಟ್ಟಲು ಅನುಮತಿ ನೀಡುತ್ತಿದೆ, ಹೆಚ್ಚಿನ ಜನರನ್ನು ಒಳಗೆ ಬಿಡಲು ಟಿಕೆಟ್‌ಗಳ ಮರುಬಳಕೆ ಮಾಡುತ್ತಿದೆ. ಮೂಲಸೌಕರ್ಯ, ಸೇವೆಗಳ ಒಪ್ಪಂದಗಳಲ್ಲಿ ಪಾರದರ್ಶಕತೆಯ ಕೊರತೆ ಸೇರಿದಂತೆ ಅನೇಕ ಅಕ್ರಮಗಳನ್ನು ಬಹಿರಂಗಪಡಿಸಿದೆ. ವರದಿಯು ಏಪ್ರಿಲ್ 1, 2019 ರಿಂದ ಮಾರ್ಚ್ 31, 2024 ರವರೆಗೆ ಬಿಟಿಸಿಯಲ್ಲಿ ಆದಾಯ ಮತ್ತು ವೆಚ್ಚವನ್ನು ನೋಡಿದೆ. ಖಾಸಗಿ ಸಂಸ್ಥೆಯು ಇತ್ತೀಚೆಗೆ ಬಿಟಿಸಿ ನಿರ್ವಹಣೆಗೆ ವರದಿಯನ್ನು ಸಲ್ಲಿಸಿದೆ ಎಂದು ಮೂಲಗಳು ತಿಳಿಸಿವೆ.

# ಸೆ.22ಕ್ಕೆ ಹೈಕೋರ್ಟ್‌ನಲ್ಲಿ ಬೈಕ್ ಟ್ಯಾಕ್ಸಿ ಭವಿಷ್ಯ: ಚಾಲಕರಿಗೆ ಸಿಹಿ ಸುದ್ದಿ ಸಿಗುತ್ತಾ?

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ಸಾರಿಗೆ ಇಲಾಖೆ ಹಾಗೂ ಬೈಕ್ ಟ್ಯಾಕ್ಸಿ ಚಾಲಕರ ಜಟಾಪಟಿ ಮುಂದುವರೆದಿದ್ದು, ಇದೇ 22ಕ್ಕೆ ಬೈಕ್ ಟ್ಯಾಕ್ಸಿ ಭವಿಷ್ಯ ನಿರ್ಧಾರವಾಗಲಿದೆ.

ರಾಜ್ಯದಲ್ಲಿ ಬೈಕ್ ಟ್ಯಾಕ್ಸಿ ಸೇವೆ ಕಾರ್ಯಾಚರಣೆ ಬಗ್ಗೆ ತನ್ನ ನಿಲುವು ತಿಳಿಸಲು ಹೈಕೋರ್ಟ್ ಸರ್ಕಾರಕ್ಕೆ ಸೂಚನೆ ನೀಡಿದೆ. ಈ ನಿಟ್ಟಿನಲ್ಲಿ ಬೈಕ್ ಟ್ಯಾಕ್ಸಿ ಸಾಧಕ-ಭಾದಕಗಳ ಬಗ್ಗೆ ವರದಿ ಸಲ್ಲಿಸಲು ಸರ್ಕಾರ ಉನ್ನತ ಮಟ್ಟದ ಸಮಿತಿ ರಚನೆ ಮಾಡಿದೆ. ಈ ಕಮಿಟಿಯನ್ನು ಸರ್ಕಾರದ ಸಾರಿಗೆ ಇಲಾಖೆಯ ಕಾರ್ಯದರ್ಶಿ ಅಧ್ಯಕ್ಷತೆಯಲ್ಲಿ ರಚಿಸಲಾಗಿದೆ. ಒಟ್ಟು 11



ಜನ ಈ ಕಮಿಟಿಯ ಸದಸ್ಯರಿದ್ದಾರೆ.

ಈ ಕಮಿಟಿಯಲ್ಲಿ ಬೆಂಗಳೂರು ನಗರ ಭೂಸಾರಿಗೆ ಅಭಿವೃದ್ಧಿ ಇಲಾಖೆ (ಡಲ್ಟ್)ನ ಆಯುಕ್ತರು, ಕಾರ್ಮಿಕ ಇಲಾಖೆ ಆಯುಕ್ತರು, ಸಾರಿಗೆ ಹಾಗೂ ರಸ್ತೆ ಸುರಕ್ಷತೆ ಇಲಾಖೆಯ ಆಯುಕ್ತರು, ಬಿಎಂಟಿಸಿ ಎಂಡಿ, ಬೆಂಗಳೂರು ಜಂಟಿ ಸಂಚಾರ ಪೊಲೀಸ್ ಆಯುಕ್ತರು, ಬೆಂಗಳೂರು ನಗರ ಜಂಟಿ ಪೊಲೀಸ್ ಆಯುಕ್ತರು, ಬಿಎಂಆರ್‌ಸಿಎಲ್‌ನ ಹಿರಿಯ ಪ್ರತಿನಿಧಿ, ಬೃಹತ್ ಬೆಂಗಳೂರು ಪ್ರಾಧಿಕಾರದ ಹಿರಿಯ ಪ್ರತಿನಿಧಿ, ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಹಿರಿಯ ಅಧಿಕಾರಿ, ಸಾರಿಗೆ ಇಲಾಖೆಯ ಆಯುಕ್ತರು ಹಾಗೂ ಕಾರ್ಯದರ್ಶಿಗಳು ಸೇರಿದಂತೆ ಒಟ್ಟು 11 ಜನರ ಕಮಿಟಿ ರಚಿಸಲಾಗಿದೆ.

### ಉನ್ನತ ಮಟ್ಟದ ಕಮಿಟಿಯಲ್ಲಿ ಯಾರಿದ್ದಾರೆ?

- ಬೆಂಗಳೂರು ನಗರ ಭೂ ಸಾರಿಗೆ ಅಭಿವೃದ್ಧಿ ಇಲಾಖೆ ಆಯುಕ್ತರು
- ಕಾರ್ಮಿಕ ಇಲಾಖೆ ಆಯುಕ್ತರು
- ಸಾರಿಗೆ ಹಾಗೂ ರಸ್ತೆ ಸುರಕ್ಷತೆ ಇಲಾಖೆಯ ಆಯುಕ್ತರು
- ಬಿಎಂಟಿಸಿ ಎಂಡಿ
- ಬೆಂಗಳೂರು ಜಂಟಿ ಸಂಚಾರ ಪೊಲೀಸ್ ಆಯುಕ್ತರು

# ಇನ್ಸ್‌ಪೆಕ್ಟರ್ ವಿರುದ್ಧದ ಆರೋಪಗಳು ಸುಳ್ಳು

• **ಉದಯವಾಹಿನಿ, ಬೆಂಗಳೂರು**

ಅಮೃತಹಳ್ಳಿ ಠಾಣಾ ವ್ಯಾಪ್ತಿಯಲ್ಲಿ ಅಕ್ರಮ ಚಟುವಟಿಕೆಗಳಿಗೆ ಅವಕಾಶ ನೀಡಲಾಗಿದೆ ಎಂಬ ಆರೋಪದಲ್ಲಿ ಸತ್ಯಾಂಶವಿಲ್ಲ ಎಂಬ ವಿಚಾರ ಇಲಾಖೆಯ ಆಂತರಿಕ ತನಿಖೆಯಲ್ಲಿ ದೃಢಪಟ್ಟಿದೆ.

ಅಮೃತಹಳ್ಳಿ ಠಾಣೆ ಇನ್ಸ್‌ಪೆಕ್ಟರ್ ವಿರುದ್ಧ ಭ್ರಷ್ಟಾಚಾರ ಅವ್ಯವಹಾರ ಆರೋಪ ಸಂಬಂಧ ಅಮೃತಹಳ್ಳಿ ಪ್ರದೇಶದ ಸಮಾಜ ಚಿಂತಕರು ಹೆಸರಿನಲ್ಲಿ ಮುಖ್ಯಮಂತ್ರಿಗೆ ದೂರು ಸಲ್ಲಿಕೆಯಾಗಿತ್ತು.



ಈ ದೂರಿನ ಅನ್ವಯ ಯಲಹಂಕ ಉಪವಿಭಾಗದ ಎಸಿಪಿ ನಡೆಸಿದ ಆಂತರಿಕ ತನಿಖೆಯಲ್ಲಿ, ಇನ್ಸ್‌ಪೆಕ್ಟರ್ ಅಂಬರೀಶ್ ವಿರುದ್ಧ ನೀಡಿದ ದೂರಿನಲ್ಲಿ ಸತ್ಯಾಂಶವಿಲ್ಲ. ದುರುದ್ದೇಶಪೂರಕವಾಗಿ ಅನಾಮಧೇಯರ ಹೆಸರಿನಲ್ಲಿ ದೂರು ನೀಡಿರುವುದು ಕಂಡು ಬಂದಿದೆ ಎಂದು ಇಲಾಖೆಯ ಉನ್ನತ ಮೂಲಗಳು ತಿಳಿಸಿವೆ. ತನಿಖೆ ಪೂರ್ಣಗೊಳಿಸಿರುವ ಎಸಿಪಿ ಅವರು, ಈಶಾನ್ಯ ವಿಭಾಗದ ಡಿಸಿಪಿಗೆ ವರದಿ ಸಲ್ಲಿಸಿದ್ದಾರೆ. ಇನ್ಸ್‌ಪೆಕ್ಟರ್ ವಿರುದ್ಧ ದೂರು ನೀಡಿದವರು ಪೂರಕ ದಾಖಲೆಗಳನ್ನು ಸಲ್ಲಿಸಿಲ್ಲ. ಜತೆಗೆ, ಅವರ ಹೆಸರು, ವಿಳಾಸ ನೀಡಿಲ್ಲ. ಹೀಗಾಗಿ, ಸರ್ಕಾರದ ಸುತ್ತೋಲೆಯಂತೆ ದೂರು ಅರ್ಜಿ ಮುಕ್ತಾಯಗೊಳಿಸುವಂತೆ' ಡಿಸಿಪಿಗೆ ಎಸಿಪಿ ಪ್ರಸ್ತಾವನೆ ಸಲ್ಲಿಸಿದ್ದಾರೆ.

**ಡ್ರಗ್ಸ್ ದಂಧೆ ಕೋರರ ಪಿತೂರಿ:** ಎರಡು ವರ್ಷಗಳ ಅವಧಿಯಲ್ಲಿ ಠಾಣಾ ವ್ಯಾಪ್ತಿಯಲ್ಲಿ ವಿದೇಶಿ ಡ್ರಗ್ ಪೆಡ್ಲರ್‌ಗಳು ಸೇರಿ 44 ಮಂದಿಯನ್ನು ಬಂಧಿಸಲಾಗಿದೆ. ರೂ.4.29 ಕೋಟಿಗೂ ಅಧಿಕ ಮೌಲ್ಯದ ಮಾದಕ ವಸ್ತು ಜಪ್ತಿ ಮಾಡಲಾಗಿದೆ.

ಈ ಪೈಕಿ ಅರ್ಧ ಕ್ವಿಂಟಲ್ ಗಾಂಜಾ, ಎಂಡಿಎಂಎ ಸೇರಿ ಇತರ ಡ್ರಗ್ಸ್ ಕೂಡ ಸೇರಿದೆ. ಡ್ರಗ್ಸ್ ದಂಧೆ ವಿರುದ್ಧದ ಕಾರ್ಯಾಚರಣೆ ನಡೆಯುತ್ತಿದ್ದರಿಂದ ದಂಧೆಕೋರರೇ ಅಧಿಕಾರಿ ವಿರುದ್ಧ ಅನಾಮಧೇಯರ ಹೆಸರಿನಲ್ಲಿ ಸುಳ್ಳು ದೂರು ನೀಡಿರುವ ಸಾಧ್ಯತೆಯಿದೆ. ದೂರಿನ ಹಿಂದೆ ಯಾರ ಕೈವಾಡವಿದೆ ಎಂಬುದು ಸೇರಿದಂತೆ ಇನ್ನಿತರ ವಿಚಾರಗಳ ಬಗ್ಗೆಯೂ ಮಾಹಿತಿ ಕಲೆಹಾಕಲಾಗುತ್ತಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದರು.

# ಬೆಂಗಳೂರಿನಲ್ಲಿ 3 ದಿನ ಕಾವೇರಿ ನೀರು ಬರಲ್ಲ: ಜಲಮಂಡಳಿ ಮಾಹಿತಿ

• **ಉದಯವಾಹಿನಿ, ಬೆಂಗಳೂರು**

ನಿಯಮಿತ ತುರ್ತು ನಿರ್ವಹಣಾ ಕಾಮಗಾರಿಗಳನ್ನು ಕೈಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ಸೆ. 15, 16 ಮತ್ತು 17 ರಂದು ಕಾವೇರಿ ನೀರು ಸರಬರಾಜನ್ನು ಸ್ಥಗಿತಗೊಳಿಸಲಾಗುತ್ತಿದೆ ಎಂದು ಬೆಂಗಳೂರು ಜಲಮಂಡಳಿ ಅಧ್ಯಕ್ಷ ಡಾ.ವಿ.ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ.

ಕಾವೇರಿ ನೀರು ಸರಬರಾಜು ಯೋಜನೆಯ ವಿವಿಧ ಹಂತಗಳ ಜಲರೇಚಕ ಯಂತ್ರಾಗಾರಗಳನ್ನು ಸೆ.15, 16, 17 ರಂದು ಸ್ಥಗಿತಗೊಳಿಸಲಾಗುತ್ತಿದೆ. ಈ ಜಲರೇಚಕ ಯಂತ್ರಗಾರಗಳ ಸ್ಥಗಿತತೆಯಿಂದ ಕಾವೇರಿ ನೀರು ಸರಬರಾಜಿನಲ್ಲಿ ವ್ಯತ್ಯಯ



ಉಂಟಾಗಲಿದೆ. ಆ 3 ದಿನಗಳಲ್ಲಿ ಸಂಚಾರಿ ಕಾವೇರಿಯ ಯೋಜನೆಯ ಟ್ಯಾಂಕರ್‌ಗಳ ಮೂಲಕ ನೀರು ಸರಬರಾಜು ಸೇವೆಯನ್ನು ಸ್ಥಗಿತಗೊಳಿಸಿ, ಈ ಟ್ಯಾಂಕರ್‌ಗಳನ್ನು ತುರ್ತು ನೀರು ಸರಬರಾಜಿಗಾಗಿ ಬಳಸಿಕೊಳ್ಳಲಾಗುವುದು ಎಂದಿದ್ದಾರೆ.

# ನೀಲಿ ಮಾರ್ಗದ ಮೆಟ್ರೊದಲ್ಲಿರಲಿದೆ ಲಗೇಜ್ ರ‍್ಯಾಕ್

## ಶುಲ್ಕ ಪಾವತಿಸದವರಿಗೆ ರೂ.250ರವರೆಗೆ ದಂಡ ವಿಧಿಸಲು ಅವಕಾಶ

• **ಉದಯವಾಹಿನಿ, ಬೆಂಗಳೂರು**

ದೇವನಹಳ್ಳಿಯಲ್ಲಿರುವ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಸಂಪರ್ಕಿಸುವ ನಮ್ಮ ಮೆಟ್ರೊ ಮಾರ್ಗದಲ್ಲಿ ಸಂಚರಿಸಲಿರುವ ಮೆಟ್ರೊ ರೈಲುಗಳಲ್ಲಿ ಲಗೇಜ್ ರ‍್ಯಾಕ್‌ಗಳು ಇರಲಿವೆ. ಬೇರೆ ಯಾವುದೇ ಮಾರ್ಗದ ಮೆಟ್ರೊಗಳಲ್ಲಿ ಇಲ್ಲದ ಈ ಸೌಲಭ್ಯ ವಿಮಾನ ನಿಲ್ದಾಣಕ್ಕೆ ಸಂಚರಿಸುವ ಪ್ರಯಾಣಿಕರಿಗೆ ದೊರೆಯಲಿದೆ. ಈಗಿರುವ ಮೆಟ್ರೊ ರೈಲುಗಳಲ್ಲಿ ಲಗೇಜ್‌ಗಾಗಿ ಪ್ರತ್ಯೇಕ ವ್ಯವಸ್ಥೆ ಇಲ್ಲ. 60 ಸೆಂಟಿ ಮೀಟರ್ ಉದ್ದ, 45 ಸೆಂಟಿ ಮೀಟರ್ ಅಗಲ ಮತ್ತು 25 ಸೆಂಟಿ ಮೀಟರ್ ಎತ್ತರದ ಬ್ಯಾಗ್‌ಗಳಲ್ಲಿ ಗರಿಷ್ಠ 15 ಕೆ.ಜಿ. ತೂಕದ ವಸ್ತುಗಳನ್ನು ಉಚಿತವಾಗಿ ಒಯ್ಯಬಹುದು.

ಒಬ್ಬರು ಇಂಥ ಒಂದು ಬ್ಯಾಗ್ ಮಾತ್ರ ಕೊಂಡೊಯ್ಯಬಹುದಾಗಿದ್ದು, ಅದಕ್ಕಿಂತ ಭಾರವಿರುವ ಮತ್ತು ಅಧಿಕ ಬ್ಯಾಗ್‌ಗಳಿದ್ದರೆ ರೂ.30 ಶುಲ್ಕ ನೀಡಬೇಕು. ಶುಲ್ಕ ಪಾವತಿಸದವರಿಗೆ ರೂ. 250ರವರೆಗೆ ದಂಡ ವಿಧಿಸಲು ಅವಕಾಶವಿದೆ. ದುಪ್ಪಟ್ಟು ಭಾರಕ್ಕಿಂತ ಅಧಿಕ ಇರುವ ಬ್ಯಾಗ್‌ಗಳನ್ನು ಒಯ್ಯುವಂತಿಲ್ಲ.



ನೀಲಿ ಮಾರ್ಗದಲ್ಲಿ ಸಂಚರಿಸಲಿರುವ ಮೆಟ್ರೊ ರೈಲಿನಲ್ಲಿ ಲಗೇಜ್‌ಗಾಗಿಯೇ ಪ್ರತ್ಯೇಕ ರ‍್ಯಾಕ್ ಬರಲಿದೆ. ಪ್ರತಿ ಬೋಗಿಯ ಎರಡು ತುದಿಗಳಲ್ಲಿ ಈಗ ಇಬ್ಬರು ಕುಳಿತುಕೊಳ್ಳಬಹುದಾದ ತಲಾ ಎರಡು ಸೀಟುಗಳಿವೆ. ಆ ಜಾಗದಲ್ಲಿ ಯಾಕ್ ಬರಲಿದೆ ಎಂದು ನಮ್ಮ ಮೆಟ್ರೊ ಅಧಿಕಾರಿಗಳು ತಿಳಿಸಿದ್ದಾರೆ.

ನೀಲಿ ಮಾರ್ಗ: ಕೇಂದ್ರ ರೇಷ್ಮೆ ಸಂಸ್ಥೆಯಿಂದ ಸೆಂಟ್ರಲ್ ಸಿಲ್ಕ್ ಬೋರ್ಡ್ ಕೆ.ಆರ್.ಪುರದವರೆಗೆ (ಹಂತ 2ಎ) ಮತ್ತು ಕೆ.ಆರ್. ಪುರದಿಂದ ವಿಮಾನ ನಿಲ್ದಾಣದವರೆಗೆ (ಹಂತ 2ಬಿ) ಎರಡು ಹಂತದಲ್ಲಿ ಕಾಮಗಾರಿ ನಡೆಯುತ್ತಿದೆ. ಹಂತ 2ಎ ಭಾಗದಲ್ಲಿ 2026ರ ಸೆಪ್ಟೆಂಬರ್‌ನಲ್ಲಿ ಮೆಟ್ರೊ ಸಂಚಾರ ಆರಂಭಿಸುವ ಗುರಿಯನ್ನು ಬಿಎಂಆರ್‌ಸಿಎಲ್ ಇಟ್ಟುಕೊಂಡಿದೆ. ಹಂತ 2ಬಿಯಲ್ಲಿ 2027ರ ಅಂತ್ಯಕ್ಕೆ ಸಂಚಾರ ಆರಂಭಗೊಳ್ಳುವ ನಿರೀಕ್ಷೆ ಇದೆ.

**ಉಳಿದ ಮಾರ್ಗಗಳಲ್ಲೂ ಬೇಕು'**: ಜನದಟ್ಟಣೆ ಸಮಯದಲ್ಲಿ ಮೆಟ್ರೊಗಳಲ್ಲಿ ಬ್ಯಾಗ್ ಹಾಕಿಕೊಂಡು ನಿಲ್ಲಲೂ ಸಾಧ್ಯವಿಲ್ಲದ ಪರಿಸ್ಥಿತಿ ಇರುತ್ತದೆ. ಲಗೇಜ್‌ಗಾಗಿ ಪ್ರತ್ಯೇಕ ವ್ಯವಸ್ಥೆಯು ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಸಂಪರ್ಕಿಸುವ ಮೆಟ್ರೊಗಳಲ್ಲಿ ಮಾತ್ರವಲ್ಲ ಉಳಿದ ಮಾರ್ಗಗಳಲ್ಲಿಯೂ ಅಗತ್ಯ ವಿದೆ ಎಂದು ಮೆಟ್ರೊ ಪ್ರಯಾಣಿಕರೂ ಆಗಿರುವ ಐಟಿ ಉದ್ಯೋಗಿ ಪ್ರಜ್ವಲ್ ಕುಮಾರ್ ಅಭಿಪ್ರಾಯಪಟ್ಟರು.

> **ಕೇಂದ್ರ ರೇಷ್ಮೆ ಮಂಡಳಿಯಿಂದ ಹಳದಿ ಮಾರ್ಗವನ್ನು, ಕೆ.ಆರ್. ಪುರದಲ್ಲಿ ನೇರಳೆ ಮಾರ್ಗವನ್ನು, ನಾಗವಾರದಲ್ಲಿ ಗುಲಾಬಿ ಮಾರ್ಗವನ್ನು, ಕೆಂಪಾಪುರದಲ್ಲಿ ಕಿತ್ತಳೆ ಮಾರ್ಗವನ್ನು ಹಾಗೂ ಅಗರದಲ್ಲಿ ಪ್ರಸ್ತಾವಿತ ಕೆಂಪು ಮಾರ್ಗವನ್ನು ನೀಲಿ ಮಾರ್ಗವು ಸಂಪರ್ಕಿಸುವುದರಿಂದ ನಗರದ ಎಲ್ಲಾ ಭಾಗಗಳಿಂದ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಸುಲಭವಾಗಿ ಮೆಟ್ರೊದಲ್ಲಿ ಬರಲು ಸಾಧ್ಯವಾಗಲಿದೆ. ಈಗಿರುವ ಲಗೇಜ್ ನಿಯಮವನ್ನು ನೀಲಿ ಮಾರ್ಗಕ್ಕೆ ಬದಲಾವಣೆ ಮಾಡಿಕೊಳ್ಳಬೇಕಾಗುತ್ತದೆ. ಸದ್ಯ ಕಾಮಗಾರಿಗಳು ನಡೆಯುತ್ತಿದ್ದು, ಮುಂದಿನ ವರ್ಷ ಪಾರ್ಶ್ವ ಸಂಚಾರ ಆರಂಭವಾಗಲಿದೆ. ಆಗ ಲಗೇಜ್ ನಿಯಮ ಪರಿಷ್ಕರಿಸಲಾಗುವುದು ಎಂದು ಮಾಹಿತಿ ನೀಡಿದ್ದಾರೆ.**

# ಪ್ರಮೋದಾದೇವಿ ಒಡೆಯರ್‌ಗೆ ಅಧಿಕೃತ ಆಹ್ವಾನ ನೀಡಿದ ಸಚಿವ

## 2025 ಸೆಪ್ಟೆಂಬರ್ 22 ರಂದು ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವ ಆರಂಭ

• **ಉದಯವಾಹಿನಿ, ಮೈಸೂರು**

ವಿಶ್ವವಿಖ್ಯಾತ ದಸರಾ ಮಹೋತ್ಸವ 2025 ಸೆ.22 ಆರಂಭವಾಗಲಿದೆ. ಈ ಅದ್ದೂರಿ ಸಮಾರಂಭಕ್ಕೆ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್ ಸಿ ಮಹದೇವಪ್ಪರವರ ನೇತೃತ್ವದಲ್ಲಿ ಯದುವಂಶದವರಿಗೆ ದಸರಾಗೆ ಅಧಿಕೃತ ಆಹ್ವಾನ ನೀಡಲಾಗಿದೆ.

ಸೆ.22 ರಂದು ನಾಡಹಬ್ಬ ದಸರಾ ಅದ್ದೂರಿಯಾಗಿ ಪ್ರಾರಂಭವಾಗಲಿದೆ. ಈ ಹಿನ್ನೆಲೆ, ರಾಜವಂಶಸ್ಥೆ ಪ್ರಮೋದಾ ದೇವಿ ಒಡೆಯರ್‌ಗೌರವ ಧನ ನೀಡಿ ನಾಡಹಬ್ಬಕ್ಕೆ ಆಹ್ವಾನ ನೀಡಲಾಗಿದೆ. ಈಗಾಗಲೇ ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವ 2025ಕ್ಕೆ ಭರ್ಜರಿ ಸಿದ್ಧತೆಗಳು ನಡೆಯುತ್ತಿವೆ.

ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಹೆಚ್ ಸಿ ಮಹದೇವಪ್ಪ ಅವರು ಯದುವಂಶದ ರಾಜಮಾತೆ ಪ್ರಮೋದಾದೇವಿ ಒಡೆಯರ್ ಅವರನ್ನು ಅಧಿಕೃತವಾಗಿ ಆಹ್ವಾನಿಸಿದ್ದಾರೆ. ಗೌರವ ಧನ ನೀಡಿ ಬರಮಾಡಿಕೊಂಡಿದ್ದಾರೆ. ದಸರಾ ಮಹೋತ್ಸವಕ್ಕೆ ಯದುವಂಶದ ಸಹಕಾರವನ್ನು ಸಚಿವರು ಸ್ವಾಗತಿಸಿದ್ದಾರೆ. ಈ ಬಾರಿ ಯಾವುದೇ ಗೊಂದಲವಿಲ್ಲದೆ, ಯಶಸ್ವಿಯಾಗಿ ದಸರಾ ನಡೆಸಲು ಜಿಲ್ಲಾಡಳಿತ ಸಜ್ಜಾಗಿದೆ.


ಉದಯವಾಹಿನಿ ಚಿತ್ರ

**ದಸರಾ ಧರ್ಮಕ್ಕೆ ಸೇರಿದ ಕಾರ್ಯಕ್ರಮವಲ್ಲ:** ದಸರಾ ಉದ್ಘಾಟನೆಗೆ ಸಾಹಿತಿ ಬಾನು ಮುಷ್ತಾಕ್ ಅವರಿಗೆ ಅವಕಾಶ ಕೊಡಬಾರದು ಎಂದು ಪ್ರತಾಪ್ ಸಿಂಹ ಅವರು ನ್ಯಾಯಾಲಯಕ್ಕೆ ಅರ್ಜಿ ಹಾಕಿದ್ದಾರೆ.

ನ್ಯಾಯಾಲಯದಲ್ಲಿ ವಿಷಯ ಇತ್ಯರ್ಥವಾಗಲಿ. ದಸರಾ ಒಂದು ಧರ್ಮಕ್ಕೆ ಸೇರಿದ ಕಾರ್ಯಕ್ರಮವಲ್ಲ. ಸಾಂಸ್ಕೃತಿಕವಾಗಿ ಎಲ್ಲಾ ಧರ್ಮದ ಜನರು ಇದರಲ್ಲಿ ಭಾಗವಹಿಸುತ್ತಾರೆ. ದಸರಾ ನಾಡಹಬ್ಬವಾಗಿದ್ದು, ಒಂದು ಧರ್ಮದವರು ಮಾತ್ರ ಭಾಗವಹಿಸಬೇಕು ಎಂದೇನೂ ಇಲ್ಲ. ಸಾರ್ವತ್ರಿಕ ಹಬ್ಬದಲ್ಲಿ ಎಲ್ಲಾ ಜಾತಿ ಮತ್ತು ಧರ್ಮದವರು ಭಾಗವಹಿಸಬಹುದು. ಬಿಜೆಪಿಯ ಮಾಜಿ ಸಂಸದ ಪ್ರತಾಪ್ ಸಿಂಹ ಸಮಾಜದ ಶಾಂತಿಭಂಗ ಮಾಡುವ ಕೆಲಸ ಮಾಡಿದರೆ ಪೊಲೀಸರು ಕ್ರಮ ಕೈಗೊಳ್ಳುತ್ತಾರೆ ಎಂದು ಸಿದ್ದರಾಮಯ್ಯನವರು ತಮ್ಮ ಟ್ವೀಟ್‌ನಲ್ಲಿ ಪೋಸ್ಟ್ ಹಂಚಿಕೊಂಡಿದ್ದಾರೆ.

**ದಲಿತರನ್ನು ಯಾಕೆ ಆಚೆ ಇಡ್ತೀರಾ?:** ಒಬ್ಬ ದಲಿತ ಮಹಿಳೆ ದಸರಾ ಉದ್ಘಾಟನೆ ಮಾಡಲಿ. ನಮ್ಮ ಕಲ್ಬುರ್ಗಿಯ ಕ್ಯಾನ್ಸರ್ ವೈದ್ಯ ಡಾಕ್ಟರ್ ವಿಜಯಲಕ್ಷ್ಮಿ ದೇಶಮಾನೆ ಅವರು ಮಾಡಲಿ. ದಲಿತರನ್ನು ಅಚೆ ಇಟ್ಟು ಮುಸ್ಲಿಮರ ಕೈಯಲ್ಲಿ ಯಾಕೆ ಉದ್ಘಾಟನೆ ಮಾಡಿಸಬೇಕು ಎಂದು ಶಾಸಕ ಯತ್ನಾಳ್ ಹೇಳಿದರು.

### ಎಚ್‌ಸಿ ಮಹದೇವಪ್ಪ ಏನಂದ್ರು?

**ಮೈಸೂರು ದಸರಾ ಎಂದರೆ ಅದು ಕೇವಲ ಹಬ್ಬವಲ್ಲ. ಅದು ನಮ್ಮ ಸಂಸ್ಕೃತಿಯ ಪ್ರತೀಕ. ದಸರಾಗೆ ಯಾವತ್ತೂ ಯದುವಂಶದಿಂದ ಕಿರಿಕಿರಿ ಆಗಿಲ್ಲ ಯದುವಂಶದವರು ಪ್ರತಿವರ್ಷವೂ ದಸರಾಕ್ಕೆ ಬೆಂಬಲ ನೀಡಿದ್ದಾರೆ. ಯಾವುದೇ ತೊಂದರೆ ಉಂಟು ಮಾಡಿಲ್ಲ ಎಂದು ಸಚಿವ ಎಚ್‌ಸಿ ಮಹದೇವಪ್ಪನವರು ಮಾಧ್ಯಮಗಳ ಮುಂದೆ ಮಾತನಾಡಿದರು. ಪ್ರತಿ ವರ್ಷವೂ ಯದುವಂಶದವರು ದಸರಾಕ್ಕೆ ಸಹಕಾರ ನೀಡುತ್ತಾರೆ. ಈ ಬಾರಿಯೂ ಉತ್ತಮ ಸಹಕಾರ ನೀಡುತ್ತೇವೆ ಎಂದು ಪ್ರಮೋದಾದೇವಿ ಒಡೆಯರ್ ಭರವಸೆ ನೀಡಿದ್ದಾರೆ. ಕಳೆದ ಬಾರಿ ಆದ ಒಂದೆರಡು ಸಣ್ಣಪುಟ್ಟ ಗೊಂದಲಗಳ ಬಗ್ಗೆ ಅವರು ಜಿಲ್ಲಾಡಳಿತದ ಗಮನಕ್ಕೆ ತಂದಿದ್ದಾರೆ. ಕೆಲವು ಸಲಹೆಗಳನ್ನು ಸಹ ನೀಡಿದ್ದಾರೆ. ಆ ಸಲಹೆಗಳನ್ನು ಸ್ವೀಕರಿಸುವುದಾಗಿ ಸಚಿವರು ತಿಳಿಸಿದ್ದಾರೆ. ಅದನ್ನು ಬಿಟ್ಟರೆ, ದಸರಾ ಉದ್ಘಾಟಕರ ಬಗ್ಗೆ ವಿರೋಧ ವ್ಯಕ್ತವಾಗಿರುವ ಬಗ್ಗೆ ಮಾತನಾಡಿಲ್ಲ ಎಂದು ಸಚಿವ ಮಹದೇವಪ್ಪ ಹೇಳಿದರು.**

# ಮೇಕೆದಾಟು ಯೋಜನೆಗೆ ಅನುಮತಿ ನೀಡಿ: ಕೇಂದ್ರಕ್ಕೆ ಸಿಎಂ ಮನವಿ

• **ಉದಯವಾಹಿನಿ, ಮಂಡ್ಯ**

ಮೇಕೆದಾಟು ಯೋಜನೆಗೆ ಅನುಮತಿ ಕೊಡಿ ಎಂದು ಕೇಂದ್ರ ಸರ್ಕಾರಕ್ಕೆ ಮುಖ್ಯಮಂತ್ರಿ ಮನವಿ ಮಾಡಿದ್ದಾರೆ. ಮಳವಳ್ಳಿ ತಾಲ್ಲೂಕಿನ ಗಗನಚುಕ್ಕಿಯಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಪ್ರವಾಸೋದ್ಯಮ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಗಗನಚುಕ್ಕಿ ಜಲಪಾತೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ್ದಾರೆ.

ಮೇಕೆದಾಟು ಯೋಜನೆಗೆ ಅನಗತ್ಯವಾಗಿ ತಕರಾರು ಮಾಡಬೇಡಿ. ಮೇಕೆದಾಟು ವಿಚಾರವಾಗಿ ತಮಿಳುನಾಡು ಹಾಗೂ ಕೇಂದ್ರ ಸರ್ಕಾರ ರಾಜಕೀಯ ಮಾಡಬಾರದು. ಯೋಜನೆ ನಿರ್ಮಾಣವಾದರೆ ತಮಿಳುನಾಡು, ಕರ್ನಾಟಕ ಎರಡು ರಾಜ್ಯಗಳಿಗೂ ಅನುಕೂಲವಾಗಲಿದೆ. ಮೇಕೆದಾಟು ಯೋಜನೆ ಜಾರಿಯಾದರೆ, 66 ಟಿಎಂಸಿ ನೀರನ್ನು ನಾವು ಶೇಖರಣೆ ಮಾಡಿಕೊಳ್ಳಬಹುದು. ಅಗತ್ಯ ಬಿದ್ದಾಗ ಈ ನೀರನ್ನು ನಾವು ಬಳಸಿ ಕೊಳ್ಳಬಹುದು ಎಂದು ತಿಳಿಸಿದ್ದಾರೆ.

ಒಪ್ಪಂದದ ಪ್ರಕಾರ ತಮಿಳುನಾಡಿಗೆ 177.25 ಟಿಎಂಸಿ ನೀರು ಕೊಡಬೇಕು. ಪ್ರಸಕ್ತ ಸಾಲಿನಲ್ಲಿ ಈವರೆಗೆ 98 ಟಿಎಂಸಿ ನೀರು ಹರಿಸಬೇಕಿತ್ತು. ಉತ್ತಮ ಮಳೆಯಾಗಿರುವುದರಿಂದ 221 ಟಿಎಂಸಿ ನೀರನ್ನು ಹರಿಸಿದ್ದೇವೆ. ಹೆಚ್ಚುವರಿಯಾಗಿ 122 ಟಿಎಂಸಿ ನೀರು ಹರಿಸಿದ್ದೇವೆ. ಹಾಗಾಗಿ, ನೀರಿನ ಸಮಸ್ಯೆ ಇಲ್ಲ ಎಂದು ಹೇಳಿದ್ದಾರೆ.


ಉದಯವಾಹಿನಿ ಚಿತ್ರ

**ಮೈಶುಗರ್ ಕಾರ್ಖಾನೆ ಬಗ್ಗೆ ಮಾತನಾಡಿ, ರೈತರ ಜಿಲ್ಲೆಯಾಗಿರುವ ಮಂಡ್ಯದಲ್ಲಿ ಸರ್ಕಾರ ಸ್ವಾಮ್ಯದಲ್ಲಿ ನಡೆಯುತ್ತಿರುವ ಸಕ್ಕರೆ ಕಾರ್ಖಾನೆ ಲಾಭದಾಯಕವಾಗಿ ನಡೆಯಬೇಕು ಎಂಬ ದೃಷ್ಟಿಯಿಂದ ಮೈಶುಗರ್ ಕಾರ್ಖಾನೆಗೆ ಬಾಯ್ಲರ್ ಹೌಸ್ ನೀಡಲಾಗುವುದು. ಈಗಾಗಲೇ ಮೈಶುಗರ್ ಕಾರ್ಖಾನೆಯ ಅಭಿವೃದ್ಧಿಗಾಗಿ 112 ಕೋಟಿ ರೂ. ಅನುದಾನ ನೀಡಲಾಗಿದೆ. ಸಚಿವರು ಹಾಗೂ ಶಾಸಕರು ಚರ್ಚೆ ನಡೆಸಿ ಮುಂದಿನ ದಿನಗಳಲ್ಲಿ ಲಾಭದಾಯಕವಾಗಿ ನಡೆಯುವ ರೀತಿ ಯೋಜಿಸಬೇಕು ಎಂದಿದ್ದಾರೆ.**

# ವಿಚ್ಛೇದನಕ್ಕೆ ಬಂದು ಒಂದಾಗಿ ಹೋದರು!

• **ಉದಯವಾಹಿನಿ, ರಾಮನಗರ**

ಕೌಟುಂಬಿಕ ಕಲಹದ ಹಿನ್ನೆಲೆಯಲ್ಲಿ ಪ್ರತ್ಯೇಕಗೊಂಡು ವಿಚ್ಛೇದನಕ್ಕಾಗಿ ನ್ಯಾಯಾಲಯದ ಮೆಟ್ಟಿಲೇರಿದ್ದ ದಂಪತಿ ನಗರದಲ್ಲಿ ನಡೆದ ಲೋಕ ಅದಾಲತ್ ನಲ್ಲಿ ಮತ್ತೆ ಒಂದಾದರು. ಸುನೀಲ್ ಕುಮಾರ್, ನಾಗವೇಣಿ ದಂಪತಿ ಮನಸ್ತಾಪ ಮರೆತು ನ್ಯಾಯಾಧೀಶರ ಸಮ್ಮುಖದಲ್ಲಿ ಪರಸ್ಪರ ಹಾರ ಬದಲಿಸಿಕೊಂಡು ಹೊಸ ಜೀವನಕ್ಕೆ ಅಡಿ ಇಟ್ಟರು. ಐದು ವರ್ಷದ ಹಿಂದೆ ಮದುವೆಯಾಗಿದ್ದ ದಂಪತಿಗೆ ಒಂದೂವರೆ ವರ್ಷದ ಮಗು ಇದೆ.

ಆರಂಭದಲ್ಲಿ ಹೊಂದಾಣಿಕೆಯಿಂದ ಇದ್ದ ದಂಪತಿ ನಡುವೆ ಭಿನ್ನಾಭಿಪ್ರಾಯ ಮತ್ತು ಕೌಟುಂಬಿಕ ಕಲಹ ಶುರುವಾಗಿತ್ತು. ನಂತರ, ಇಬ್ಬರೂ ವಿಚ್ಛೇದನಕ್ಕೆ ಮುಂದಾಗಿದ್ದರು. ಅದಾಲತ್‌ನಲ್ಲಿ ದಂಪತಿ ಅರ್ಜಿ ವಿಚಾರಣೆ ನಡೆಸಿದ ಜಿಲ್ಲಾ ಪ್ರಧಾನ ಮತ್ತು ಸೆಷನ್ಸ್ ನ್ಯಾಯಾಧೀಶೆ ಬಿ.ವಿ. ರೇಣುಕ ಅವರು ಒಣ ಪ್ರತಿಷ್ಠೆ ಮತ್ತು ಭಿನ್ನಾಭಿಪ್ರಾಯ ಬದಿಗಿಟ್ಟು ಕೂಡಿ ಬಾಳುವಂತೆ ತಿಳಿ ಹೇಳಿದರು.


ಉದಯವಾಹಿನಿ ಚಿತ್ರ

ನ್ಯಾಯಾಧೀಶರ ಮಾತಿಗೆ ಒಪ್ಪಿಕೊಂಡ ದಂಪತಿ ತಮ್ಮ ವಕೀಲರು, ಕೋರ್ಟ್ ಸಿಬ್ಬಂದಿ ಸಮ್ಮುಖದಲ್ಲಿ ಪರಸ್ಪರ ಹಾರ ಬದಲಿಸಿಕೊಂಡರು.

ಕೊನೆಯವರೆಗೂ ಒಂದಾಗಿ ಬಾಳುವುದಾಗಿ ನ್ಯಾಯಾಧೀಶರಿಗೆ ಭರವಸೆ ನೀಡಿದರು. ಹಿರಿಯ ಸಿವಿಲ್ ನ್ಯಾಯಾಧೀಶ ಸವಿತ ಪಿ.ಆರ್ ಹಾಗೂ ಇತರರು ಈ ಕ್ಷಣಗಳಿಗೆ ಸಾಕ್ಷಿಯಾದರು.

# ಶ್ರೀ ಕೃಷ್ಣ ಜಯಂತಿಯ ಅದ್ದೂರಿ ಆಚರಣೆ : ಕಳೆಗಟ್ಟಿದ ಜಾನಪದ ಕುಣಿತ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಜಿಲ್ಲಾಡಳಿತ, ಯಾದವ ಸಮುದಾಯದ ಸಹಯೋಗದಲ್ಲಿ ನಡೆದ ಶ್ರೀಕೃಷ್ಣ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಿದ್ದು ವೇಣುಗೋಪಾಲಸ್ವಾಮಿ ದೇವಾಲಯದಿಂದ ಕನ್ನಡ ಭವನದವರೆಗೆ ತಮಟೆ, ಕೀಲು ಕುದುರೆ, ಡೊಳ್ಳು ಕುಣಿತ ಮೊದಲಾದ ಜಾನಪದ ಕಲಾತಂಡಗಳ ಮೆರವಣಿಗೆಯಲ್ಲಿ ಶ್ರೀಕೃಷ್ಣಮೂರ್ತಿಯನ್ನು ತರಲಾಯಿತು.

ಮೆರವಣಿಗೆಯಲ್ಲಿ ಯಾದವ ಸಮುದಾಯದ ಮುಖಂಡರಾದ ಕೆ.ಎಂ.ಮುನೇಗೌಡ, ಕೇಶವಮೂರ್ತಿ, ಯಾದವ ಸಂಘದ ಜಿಲ್ಲಾಧ್ಯಕ್ಷ ಆರ್.ವೆಂಕಟೇಶ್, ತಾಲ್ಲೂಕು ಗೌರವಾಧ್ಯಕ್ಷ ಜಿ.ನರಸಿಂಹಯ್ಯ, ತಾಲ್ಲೂಕು ಅಧ್ಯಕ್ಷ ವಿ.ಮುನಿಕೃಷ್ಣ, ಖಜಾಂಚಿ ಬನ್ನಿಕುಪ್ಪೆ ವಿ ಶ್ರೀನಿವಾಸಮೂರ್ತಿ, ಪ್ರಧಾನ ಕಾರ್ಯದರ್ಶಿ ಸಿ.ಎಂ. ಶ್ರೀನಿವಾಶ್, ತಾಲ್ಲೂಕು ಉಪಾಧ್ಯಕ್ಷ ಎನ್.ಮುನಿರಾಜು,ಸಹಕಾರ್ಯದರ್ಶಿ ಪಿ.ಮೋಹನ್‌ಕುಮಾರ್,ಸಮುದಾಯದ ಮುಖಂಡರು ಡಿಜೆ ಹಾಡಿಗೆ ಕುಣಿದು ಕುಪ್ಪಳಿಸಿದರು.


ಉದಯವಾಹಿನಿ ಚಿತ್ರ

ಮೆರವಣಿಗೆಯ ನಂತರ ಕನ್ನಡ ಭವನದಲ್ಲಿ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ಮಾತನಾಡಿದ ಚಿತ್ರದುರ್ಗದ ಶ್ರೀಜಗದ್ಗುರು ಕೃಷ್ಣ ಯಾದವಾನಂದ ಮಹಾಸ್ವಾಮಿ ಮಾತನಾಡಿ ಒಳಿತು ಮಾಡಲು ಯಾರ ಮನಸ್ಸು ಪರಿಶುದ್ಧತೆಯಿಂದ ಶ್ರದ್ಧೆ,ಭಕ್ತಿ ಸಹನೆ ಹಾಗೂ ನಿಷ್ಠೆಯಿಂದ ಇರುತ್ತದೋ ಅಂತವರಿಗೆ ಭಗವಂತ ಆಶೀರ್ವದಿಸುತ್ತಾರೆ ಎಂದು ತಿಳಿಸಿದರು.

ಹಿಂದೂ ಧರ್ಮೀಯರು ಶ್ರೀಕೃಷ್ಣನನ್ನು ಆರಾಧಿಸುವ, ಪೂಜಿಸುವ ಸಂಪ್ರದಾಯವನ್ನು ಅನಾದಿ ಕಾಲದಿಂದಲೂ ಪಾಲಿಸುತ್ತಿದ್ದಾರೆ. ಶ್ರೀಕೃಷ್ಣ ದೇವರು ವಿಶೇಷವಾಗಿ ಬಡವರ ಕಷ್ಟಗಳಿಗೆ ಕಾಣುವ ದೇವರಾಗಿದ್ದಾರೆ. ಸತ್ಯ, ಪರಿಶುದ್ದ ಮನಸ್ಸು, ಸಹನೆ, ನಿಷ್ಠೆಯಿಂದಿರುವ ಭಕ್ತನಾದ ಪಂಡರಾಪುರದ ತುಕಾರಾಂ, ಸಂತ ನಾಮದೇವ ಇನ್ನು ಮುಂತಾದವರಿಗೆ ಪ್ರತ್ಯಕ್ಷವಾಗಿ ಆಶೀರ್ವದಿಸಿದರು. ಅಂತಹ ಭಗವಂತನಾದ ಶ್ರೀಕೃಷ್ಣನಿಗೆ ಪ್ರಪಂಚದದ್ಯಂತ ಭಕ್ತರಿದ್ದಾರೆ. ವರ್ಷಕ್ಕೊಮ್ಮೆ ಜಯಂತಿಗಳ ರೂಪದಲ್ಲಿ ಶ್ರೀಕೃಷ್ಣ ನನ್ನು ನೆನಪಿಸಿಕೊಳ್ಳದೆ, ಪ್ರತಿನಿತ್ಯವೂ ಶ್ರೀಕೃಷ್ಣನ ನೆನಪು ನಮ್ಮಲ್ಲಿರಬೇಕು. ದೇವಾಲಯಕ್ಕೆ ಹೋದಾಗ ಕನಿಷ್ಠ 5 ನಿಮಿಷಗಳ ಕಾಲ ಪ್ರಾರ್ಥನೆ ಮಾಡುವ ಮೂಲಕ ನಮ್ಮ ಧಾರ್ಮಿಕ ಜೀವನವನ್ನು ಪಾಲಿಸೋಣ. ಅದು ಶ್ರೀ ಕೃಷ್ಣನಿಗೆ ಅರ್ಪಣೆಯಾಗುತ್ತದೆ.

ಶ್ರೀ ಕೃಷ್ಣನ ಮೆರವಣಿಗೆಯಲ್ಲಿ ಧ್ವನಿವರ್ಧಕಗಳನ್ನು ಉಪಯೋಗಿಸಿ ಕುಣಿದು ಕುಪ್ಪಳಿಸುವ ಬದಲು ಕನಕದಾಸರ, ಪುರಂದರದಾಸರ, ಕೀರ್ತನೆಗಳನ್ನು ಅದರ ಜೊತೆ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಉಪನ್ಯಾಸಕ ಪಿ.ಎನ್‌ನರಸಿಂಹರೆಡ್ಡಿ ಅವರು ಭಗವಾನ್ ಶ್ರೀಕೃಷ್ಣ ದೇವರ ಜೀವನ ಚರಿತ್ರೆಯನ್ನು ತಿಳಿಸಿಕೊಟ್ಟರು. ಕಾರ್ಯಕ್ರಮದಲ್ಲಿ ಸಮುದಾಯದ ಸಾಧಕರಿಗೆ ಹಾಗೂ ಅತಿ ಹೆಚ್ಚು ಅಂಕಗಳಿಸಿದ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತಿಭಾಪುರಸ್ಕಾರ ನೀಡಿ ಸನ್ಮಾನಿಸಲಾಯಿತು.

# ಈಗ ಸಿದ್ದರಾಮಯ್ಯ ಕಾಲ; ಮುಂದೆ ನಮ್ಮ ಕಾಲ

• **ಉದಯವಾಹಿನಿ, ಕೋಲಾರ**

ಬಿಜೆಪಿ ಕೇವಲ ಚುನಾವಣೆ ಹಾಗೂ ರಾಜಕೀಯಕ್ಕೆ ಸಿಮೀತವಾಗಿಲ್ಲ. ಸಾಮಾಜಿಕ ಚಟುವಟಿಕೆಗಳಿಗೂ ಒತ್ತು ನೀಡುತ್ತಿದೆ. ಇವು ಸಾಕಾರಗೊಳ್ಳುವಂತೆ ಕಾರ್ಯಕರ್ತರು ಮಾಡಬೇಕು ಎಂದು ವಿಧಾನ ಪರಿಷತ್ ಸದಸ್ಯ ಹಾಗೂ ಬಿಜೆಪಿ ಜಿಲ್ಲಾ ಉಸ್ತುವಾರಿ ಕೇಶವಪ್ರಸಾದ್ ಹೇಳಿದರು. ನಗರ ಹೊರವಲಯದಲ್ಲಿ ಬಿಜೆಪಿ ಹಮ್ಮಿಕೊಂಡಿದ್ದ ಸೇವಾ ಪಾಕ್ಷಿಕ ಜಿಲ್ಲಾ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ದೇಶಕ್ಕಾಗಿ ಶ್ರಮಿಸಿದ ಗಣ್ಯರ ಹೆಸರಿನಲ್ಲಿ ಅಭಿಯಾನ ನಡೆಯುತ್ತಿದ್ದು. ಇದರ ಯಶಸ್ಸಿಗೆ ಸಹಕರಿಸಬೇಕು ಎಂದರು. ಸೆ. 17ರಂದು ಪ್ರಧಾನಿ ನರೇಂದ್ರ ಮೋದಿ ಜನ್ಮದಿನ. ಸೆ. 23ರಂದು ದೀನ್ ದಯಾಳ್ ಉಪಾಧ್ಯಾಯ ಜಯಂತಿ ಹಾಗೂ ಅ. 2ರಂದು ಲಾಲ್ ಬಹದ್ದೂರ್ ಶಾಸ್ತ್ರಿ ಮತ್ತು ಗಾಂಧಿ ಜಯಂತಿ ಇರುವುದರಿಂದ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಇದು ರಾಜಕೀಯ ರಹಿತ ಕಾರ್ಯಕ್ರಮವಾಗಿದ್ದು, ಪಕ್ಷಾತೀತವಾಗಿ ಸಮುದಾಯಗಳನ್ನು ಭಾಗಿಯಾಗಿಸಿಕೊಂಡು ಕಾರ್ಯಕ್ರಮ ರೂಪಿಸಬೇಕು ಎಂದು ಸಲಹೆ ನೀಡಿದರು. ಮಂಡಲದಿಂದ ಜಿಲ್ಲಾ ಮಟ್ಟದ ತನಕ ಆರೋಗ್ಯ ಶಿಬಿರ, ಸಸಿ ನಡೆಯುವ ಕಾರ್ಯಕ್ರಮ, ರಕ್ತದಾನ ಶಿಬಿರ ನಡೆಸಬೇಕು, ದೇವಾಲಯ, ಬಸ್ ನಿಲ್ದಾಣದಲ್ಲಿ ಸ್ವಚ್ಛತಾ ಅಭಿಯಾನ, ಕಲ್ಯಾಣಿ ಸ್ವಚ್ಛತೆ ಕಾರ್ಯಕ್ರಮ ಕೈಗೊಳ್ಳಬೇಕು. ಇದನ್ನು ಬಿಜೆಪಿ ಮಾಡಿದ ಕಾರ್ಯ ಎಂದು ಶಾಶ್ವತವಾಗಿ ಜನರ ಮನಸ್ಸಿನಲ್ಲಿ ಉಳಿಯುವಂತೆ ಮಾಡಬೇಕು ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

ಈ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಲು ಪ್ರತಿ ವಲಯದಲ್ಲಿ ತೊಡಗಿಸಿಕೊಂಡಿರುವ ವ್ಯಕ್ತಿಗಳು ವಿವಿಧ ಮೋರ್ಚಾಗಳಲ್ಲಿ ಇದ್ದಾರೆ. ಅವರು ಸಲಹೆ ಸೂಚನೆಗಳನ್ನು ಪಡೆದುಕೊಂಡು ಮಂಡಲ ಮಟ್ಟದಿಂದ ಜಿಲ್ಲಾ ಮಟ್ಟದ ತನಕ ಅಭಿಯಾನ ನಡೆಸಬೇಕು ಎಂದರು.

**ಬಿಜೆಪಿ ಜಿಲ್ಲಾಧ್ಯಕ್ಷ ಓಂಶಕ್ತಿ ಚಲಪತಿ ಮಾತನಾಡಿ, ಸೇವಾ ಪಾಕ್ಷಿಕ ಅಭಿಯಾನದ ಅವಧಿಯಲ್ಲಿ ವಿವಿಧ ಸೇವಾ ಚಟುವಟಿಕೆಗಳ ಮೂಲಕ ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ತಲುಪುವುದು ನಮ್ಮ ಉದ್ದೇಶವಾಗಿದೆ. ಪ್ರತಿ ವರ್ಷದಂತೆ ಈ ವರ್ಷವು ಅಭಿಯಾನ ಯಶಸ್ವಿಗೊಳಿಸಬೇಕು, ಇದರ ಜವಾಬ್ದಾರಿ ಮಂಡಲ ಹಾಗೂ ಪದಾಧಿಕಾರಿಗಳ ಮೇಲಿದೆ’ ಎಂದು ನುಡಿದರು.**

ರಾಜಕೀಯ ಬಿಟ್ಟು ನಾಯಕರ ಜನ್ಮ ದಿನಾಚರಣೆಯ ಪ್ರಯುಕ್ತ ಸೇವಾ ಪಾಕ್ಷಿಕ ಅಡಿಯಲ್ಲಿ ನಾಯಕರಾದ ದಿನ್ ದಯಾಳ್, ನರೇಂದ್ರ ಮೋದಿ, ಗಾಂಧಿ ಜಯಂತಿ ಅಂಗವಾಗಿ ಸಾಮಾಜಿಕ ಕಾರ್ಯ ಹಮ್ಮಿಕೊಳ್ಳಲಾಗಿದೆ. ಕೇವಲ ರಾಜಕೀಯಕ್ಕೆ ಸಿಮೀತಗೊಳ್ಳದೆ ಜನರೊಂದಿಗೆ ಬೆರೆತು ಸಮಸ್ಯೆಗಳನ್ನು ಪಟ್ಟಿ ಮಾಡಲಾಗುವುದು. ಆನಂತರ ಸರ್ಕಾರದ ಗಮನಕ್ಕೆ ತಂದು ಇತ್ಯರ್ಥಪಡಿಸುವ ಕೆಲಸ ಮಾಡಲಾಗುವುದು ಎಂದರು.

# ಅರ್ಹ ಫಲಾನುಭವಿಗಳಿಗೆ ಸಾಗುವಳಿ ಚೀಟಿ

• **ಉದಯವಾಹಿನಿ, ಮುಳಬಾಗಿಲು**

ದರಖಾಸ್ತು ಯೋಜನೆಯಡಿ ಕೃಷಿ ಜಮೀನು ಮಂಜೂರಾತಿಗಾಗಿ ಅರ್ಜಿ ಸಲ್ಲಿಸಿದವರ ಫಲಾನುಭವಿಗಳು ಉಳುಮೆ ಮಾಡುತ್ತಿರುವ ಜಮೀನುಗಳಿಗೆ ಶಾಸಕ ಸಮೃದ್ಧಿ ಮಂಜುನಾಥ್, ತಹಶೀಲ್ದಾರ್ ವಿ. ಗೀತಾ ಮತ್ತು ದರಖಾಸ್ತು ಸಮಿತಿ ಸದಸ್ಯರು ಹಾಗೂ ಅಧಿಕಾರಿಗಳು ಖುದ್ದಾಗಿ ಭೇಟಿ ನೀಡಿದರು. ರಾಮೇನಲ್ಲೂರು, ಮಜರಾ ಅತ್ತಿಕುಂಟೆ, ರಾಮರಾಯನಕೋಟೆ ಸೇರಿದಂತೆ ಇನ್ನಿತರ ಕಡೆಗಳಲ್ಲಿ ಜಮೀನು ಉಳುಮೆ ಮಾಡುತ್ತಿರುವ ಜಮೀನುಗಳಿಗೆ ಈ ತಂಡ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಶಾಸಕ ಸಮೃದ್ಧಿ ಮಂಜುನಾಥ್ ಮಾತನಾಡಿ, ಈ ಹಿಂದಿನ ಅವಧಿಯಲ್ಲಿನ ಸಾಗುವಳಿ ಚೀಟಿಗಳ ವಿತರಣೆಯಲ್ಲಿ ಅವ್ಯವಹಾರ ನಡೆದಿದ್ದು, ಬಲಾಢ್ಯರುಲ ಜಮೀನುಗಳನ್ನು ಅಕ್ರಮವಾಗಿ ಪಡೆದಿದ್ದಾರೆ. ಇದರಿಂದ ಅರ್ಹ ಫಲಾನುಭವಿಗಳಿಗೆ ಅನ್ಯಾಯವಾಗಿದೆ. ಇದೀಗ ಜಮೀನುರಹಿತ ಬಡ ರೈತರಿಗೆ ಅನುಕೂಲ ಕಲ್ಪಿಸಲು ಸರ್ಕಾರದ ನಿಯತ ಪ್ರಕಾರ ಸಾಗುವಳಿ ಚೀಟಿ ವಿತರಿಸಲಾಗುವುದು ಎಂದರು.


ಉದಯವಾಹಿನಿ ಚಿತ್ರ

ತಾಲ್ಲೂಕಿನ 160 ಅರ್ಹ ಫಲಾನುಭವಿಗಳಿಗೆ ಒಂದು ತಿಂಗಳಿನಲ್ಲಿ ಸಾಗುವಳಿ ಚೀಟಿ ವಿತರಿಸಲಾಗುವುದು.

ಈ ವಿಷಯದಲ್ಲಿ ಯಾರಿಗೂ ಅನ್ಯಾಯವಾಗದಂತೆ ನೋಡಿಕೊಳ್ಳಲಾಗುವುದು ಎಂದರು. ದರಖಾಸ್ತು ಸಮಿತಿ ಸದಸ್ಯ ಗುಜ್ಜನಹಳ್ಳಿ ಮಂಜುನಾಥ್ ಹಾಗೂ ಜಮ್ಮನಹಳ್ಳಿ ಕೃಷ್ಣಪ್ಪ ಮಾತನಾಡಿ, ತಾಲ್ಲೂಕಿನಲ್ಲಿ ಜಮೀನು ಇಲ್ಲದ ಬಡ ರೈತರನ್ನು ಗುರುತಿಸಲು ಖುದ್ದಾಗಿ ಜಮೀನುಗಳಿಗೆ ಭೇಟಿ ನೀಡಿದ್ದೇವೆ. ಭ್ರಷ್ಟಾಚಾರಕ್ಕೆ ಅಸ್ಪದವಿಲ್ಲ ಎಂದರು.

# ಶಿಕ್ಷಣ ಆತ್ಮವಿಶ್ವಾಸದ ಪ್ರತೀಕ: ಮುಖ್ಯಮಂತ್ರಿ ಸಿದ್ದರಾಮಯ್ಯ

## ಜೆಎಸ್‌ಎಸ್ ಪ್ರಸಾದ ನಿಲಯಗಳ ಹಿರಿಯ ವಿದ್ಯಾರ್ಥಿಗಳ ಗೃಹ ನಿರ್ಮಾಣ ಸಹಕಾರ ಸಂಘದ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮ

• **ಉದಯವಾಹಿನಿ, ಮೈಸೂರು**

ಶಿವರಾತ್ರಿ, ದೇಶಿ ಕೇಂದ್ರ, ಶ್ರೀಗಳು ಮಕ್ಕಳ ಶಿಕ್ಷಣಕ್ಕಾಗಿ ತಮ್ಮ ಜೀವನವನ್ನೇ ಮುಡಿಪಾಗಿ ಇಟ್ಟವರು. ಓದಿನಿಂದ ಬದುಕಿನಲ್ಲಿ ಸ್ವಾಭಿಮಾನ, ಆತ್ಮವಿಶ್ವಾಸ ಬೆಳೆಯಲಿದ್ದು, ಪ್ರತಿಯೊಬ್ಬರೂ ಶಿಕ್ಷಣ ಪಡೆಯಲೇಬೇಕು ಎಂದು ಸಿದ್ದರಾಮಯ್ಯ ಹೇಳಿದರು.

ತಾಲ್ಲೂಕಿನ ವರುಣ ಕೆರೆಯ ಪಕ್ಕದಲ್ಲಿರುವ ಶಿವರಾತ್ರಿ ರಾಜೇಂದ್ರ ನಗರದಲ್ಲಿ ಜೆಎಸ್‌ಎಸ್ ಪ್ರಸಾದ ನಿಲಯಗಳ ಹಿರಿಯ ವಿದ್ಯಾರ್ಥಿಗಳ ಗೃಹ ನಿರ್ಮಾಣ ಸಹಕಾರ ಸಂಘದ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಶಿವರಾತ್ರಿ ರಾಜೇಂದ್ರ ಅನುಭವ ಮಂಟಪ ಹಾಗೂ ಸಂಘದ ಕಚೇರಿ ಉದ್ಘಾಟಿಸಿ ಮಾತನಾಡಿದರು.

’ಜಾತಿ ವ್ಯವಸ್ಥೆ ಬಾವಿಯೊಳಗಿನ ಸತ್ತೆ (ಕಳೆ) ಇದ್ದ ಹಾಗೆ. ಬಾವಿಗೆ ಬಿಂದಿಗೆ ಹಾಕಿದಾಗ ಸತ್ತೆ ದೂರ ಸರಿಯುತ್ತದೆ. ಬಿಂದಿಗೆ ಮೇಲೆತ್ತಿದ್ದರೆ ಸತ್ತೆ ಮತ್ತೆ ಕೂಡಿಕೊಳ್ಳುತ್ತದೆ. ಇದು ಗೊತ್ತಿದ್ದರೂ ವಿದ್ಯಾವಂತರಾದ ನಾವೂ ನೀವು ಯಾವ ಜಾತಿಗೆ ಸೇರಿದವರು ಎಂದು ಕೇಳುವುದು ಸಾಮಾನ್ಯವಾಗಿದೆ ಎಂದು ಬೇಸರ ವ್ಯಕ್ತಪಡಿಸಿದ ಅವರು, ಬಸವಣ್ಣನವರು ಹೇಳಿದಂತೆ ಜಾತಿ ರಹಿತ, ವರ್ಗ ರಹಿತ ಸಮಾಜ ನಿರ್ಮಾಣ ಆಗಬೇಕು. ಎಲ್ಲರೂ ಮನುಷ್ಯರಾಗಿ ಬಾಳಬೇಕು. ಸಮಾನತೆ, ಸ್ವಾತಂತ್ರ್ಯ, ಭ್ರಾತೃತ್ವ ಒಳಗೊಂಡಿರುವ ಸಂವಿಧಾನದ ಆಶಯವೂ ಇದೇ ಆಗಿದೆ’ ಎಂದರು.


ಉದಯವಾಹಿನಿ ಚಿತ್ರ

ಜಾತಿ ವ್ಯವಸ್ಥೆಗೆ ಚಲನೆ ಇಲ್ಲ. ಆರ್ಥಿಕ, ಸಾಮಾಜಿಕ ಶಕ್ತಿ ಬಂದಾಗ ಮಾತ್ರ ಈ ವ್ಯವಸ್ಥೆಗೆ ಚಲನೆ ಬರುತ್ತದೆ. ಆದರೆ ನಮ್ಮ ನಡುವಿನ ಪಟ್ಟಭದ್ರ ಹಿತಾಸಕ್ತಿಗಳು ಈ ಜಾತಿ ವ್ಯವಸ್ಥೆಗೆ ಸಾಮಾಜಿಕ, ಆರ್ಥಿಕ ಶಕ್ತಿ ಬರದ ಹಾಗೆ ನೋಡಿಕೊಳ್ಳುತ್ತಿದ್ದಾರೆ’ ಎಂದು ಅಸಮಾಧಾನ ಹೊರಹಾಕಿದರು. ಡಾ.ಬಿ.ಆರ್. ಅಂಬೇಡ್ಕರ್ ಹೇಳಿದಂತೆ, ಸಮಾಜದ ಎಲ್ಲರಿಗೂ ಸಾಮಾಜಿಕ ಹಾಗೂ ಆರ್ಥಿಕ ಸ್ವಾವಲಂಬನೆ ಸಿಕ್ಕಾಗ ಮಾತ್ರ ದೇಶದ ಸ್ವಾತಂತ್ರ್ಯಕ್ಕೆ ಸಾರ್ಥಕತೆ ಸಿಗುತ್ತದೆ. ಇಲ್ಲದಿದ್ದರೆ ಅದು ನಿರರ್ಥಕ ಎಂದರು. ’ಬಸವಾದಿ ಶರಣರ ಅನುಭವ ಮಂಟಪ ಜಗತ್ತಿನ ಮೊದಲ ಸಂಸತ್ತು. ಸ್ವತಂತ್ರ ಭಾರತದಲ್ಲಿ ಅದೇ ಸಂಸತ್ತು, ವಿಧಾನಸಭೆಗಳಾಗಿವೆ. ನಾನು ಹಿಂದೆ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಬಸವಣ್ಣನವರ ಭಾವಚಿತ್ರವನ್ನು ಕಡ್ಡಾಯವಾಗಿ ಹಾಕಲು ಆದೇಶ ಹೊರಡಿಸಿದ್ದೆ. ಈಗ ಬಾರಿ ಬಸವಣ್ಣನವರನ್ನು ಕರ್ನಾಟಕದ ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಲಾಗಿದೆ’ ಎಂದರು. ಸುತ್ತೂರು ಮಠವು ಶಿವರಾತ್ರಿ, ದೇಶಿಕೇಂದ್ರ, ಸ್ವಾಮೀಜಿ ನೇತೃತ್ವದಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಅಂತರರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡಿದೆ. ಇದಕ್ಕೆ ಶಿವರಾತ್ರಿ ರಾಜೇಂದ್ರ, ಸ್ವಾಮೀಜಿ ಹಾಕಿದ ಅಡಿಪಾಯವೇ ಕಾರಣ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು

**ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಸಿ. ಮಹದೇವಪ್ಪ, ಪಶು ಸಂಗೋಪನೆ ಹಾಗೂ ರೇಷ್ಮೆ ಸಚಿವ ಕೆ.ವೆಂಕಟೇಶ್ ಮಾತನಾಡಿದರು. ಸುತ್ತೂರು ಮಠದ ಶಿವರಾತ್ರಿ, ದೇಶಿಕೇಂದ್ರ ಸ್ವಾಮೀಜಿ ಸಾನ್ನಿಧ್ಯ ಹಾಗೂ ಸಂಘದ ಅಧ್ಯಕ್ಷ ಎಲ್. ರೇವಣಸಿದ್ದಯ್ಯ ಅಧ್ಯಕ್ಷತೆ ವಹಿಸಿದ್ದರು. ಕಾಡಾ ಅಧ್ಯಕ್ಷ ಮರಿಸ್ವಾಮಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷೆ ಡಾ. ಪುಷ್ಪಾ ಅಮರನಾಥ್, ಉಪಾಧ್ಯಕ್ಷ ಎ.ಎಸ್. ಚನ್ನಬಸಪ್ಪ, ನಿರ್ದೇಶಕರಾದ ಬಸವರಾಜಯ್ಯ, ನಂಜುಂಡಪ್ಪ, ಸುಬ್ಬಯ್ಯ, ಮಲ್ಲಿಕಾರ್ಜುನ ಸ್ವಾಮಿ ಪಾಲ್ಗೊಂಡರು.**

### ನನಗೂ ನಿವೇಶನ ಕೊಡಿ’

**144 ಎಕರೆ ಪ್ರದೇಶದಲ್ಲಿ ಬಡಾವಣೆ ನಿರ್ಮಿಸಿ 1400ಕ್ಕೂ ಹೆಚ್ಚು ಸದಸ್ಯರಿಗೆ ನಿವೇಶನ ಹಂಚಿಕೆ ಒಳ್ಳೆಯ ಕೆಲಸ. ನಾನು ಕೂಡ ಜೆಎಸ್‌ಎಸ್ ಹಳೆಯ ವಿದ್ಯಾರ್ಥಿ ಪಿಯುಸಿ ಜೆಎಸ್‌ಎಸ್‌ನಲ್ಲೇ ಓದಿದ್ದು ನಾನು ಸಂಘದ ಸದಸ್ಯನಾಗಿದ್ದರೆ ನನಗೂ ಸೈಟು ಸಿಗುತ್ತಿತ್ತು ಅನಿಸುತ್ತದೆ. ಈಗಲೂ ನನಗೆ ಸದಸ್ಯತ್ವ ಕೊಟ್ಟರೆ ನಿವೇಶನ ಪಡೆದುಕೊಳ್ಳುವೆ’ ಎಂದು ಸಚಿವ ಕೆ. ವೆಂಕಟೇಶ್ ನಗೆಚಟಾಕಿ ಹಾರಿಸಿದರು. ಸಂಘವು 15 ವರ್ಷದ ಹಿಂದೆ ಜಮೀನು ಖರೀದಿಸಿ ಅಂದು ನಿಗದಿಯಾಗಿದ್ದ ದರದಲ್ಲೇ ಸದಸ್ಯರಿಗೆ ನಿವೇಶನಗಳನ್ನು ಹಂಚಿಕೆ ಮಾಡಿರುವುದು ಸಹಕಾರ ಸಂಘಗಳ ಇತಿಹಾಸದಲ್ಲಿಯೇ ಪ್ರಥಮ ಎನಿಸುತ್ತದೆ ಎಂದು ಸಿದ್ದರಾಮಯ್ಯ ಮೆಚ್ಚುಗೆ ವ್ಯಕ್ತಪಡಿಸಿದರು.**

## ಮಿನಿ ನ್ಯೂಸ್

### ನಾಯಕತ್ವದ ಗುಣಗಳು ಶಾಲಾ ಹಂತದಲ್ಲೇ ಮಕ್ಕಳಿಗೆ ಪರಿಚಯವಾಗಬೇಕಿದೆ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಪ್ರಜಾಪ್ರಭುತ್ವದ ರಕ್ಷಕರಾಗಿರುವ ಜನಪ್ರತಿನಿಧಿಗಳು ಹೇಗಿರಬೇಕು? ನಾಯಕತ್ವ ಎಂದರೆ ಏನು ಎಂಬ ಬಗ್ಗೆ ಮಕ್ಕಳಿಗೆ ಶಾಲಾ ಹಂತದಲ್ಲೇ ಪರಿಚಯ ಮಾಡುವುದರಿಂದ ಸದೃಢ ಸಮಾಜ ನಿರ್ಮಾಣ ಸಾಧ್ಯ ಎಂದು ಪೂರ್ಣಪ್ರಜ್ಞ ಶಾಲೆಯ ಕಾರ್ಯದರ್ಶಿ ಶೈಲಜಾ ವೆಂಕಟೇಶ್ ತಿಳಿಸಿದರು. ನಗರದ ಪೂರ್ಣಪ್ರಜ್ಞ ಶಾಲೆಯಲ್ಲಿ ಆಯೋಜಿಸಿದ್ದ ಸ್ಟುಡೆಂಟ್ ಕೌನ್ಸಿಲ್ ಇನ್ವೆಸ್ಟಿಟ್ಯುರ್ ಸೆರೆಮನಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಶಾಲಾ ಹಂತದಲ್ಲಿ ನೀಡುವ ಔಪಚಾರಿಕ ಶಿಕ್ಷಣದ ಜೊತೆಗೆ ವಿದ್ಯಾರ್ಥಿಗಳಿಗೆ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಪರಿಚಯಿಸುವ ಅಗತ್ಯವಿದೆ.

ಸಂವಿಧಾನದ ಆಶಯಗಳನ್ನು ಬಿಂಬಿಸುವಂತಹ ಶಾಸಕಾಂಗ ಆದರ ಕಾರ್ಯವೈಖರಿಯನ್ನು ಮಕ್ಕಳಿಗೆ ಪರಿಚಯಿಸುವ ಮೂಲಕ ಆರೋಗ್ಯವಂತ ಸದೃಢ ಸಮಾಜ ನಿರ್ಮಾಣ ಮಾಡಲು ಸಾಧ್ಯವಾಗಲಿದೆ ಎಂದರು. ಪೂರ್ಣ ಪ್ರಜ್ಞ ವಿದ್ಯಾಸಂಸ್ಥೆಯಲ್ಲಿ ಕಾಲಕಾಲಕ್ಕೆ ನಾನಾ ರೀತಿಯ ಕಾರ್ಯಕ್ರಮಗಳನ್ನು ಆಯೋಜಿ ಸುತ್ತಾ ಬರಲಾಗಿದೆ. ಆಯೋಜಿಸಿದ್ದ ನಾಯಕತ್ವ ತರಬೇತಿ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಲ್ಲಿ ನಾಯಕತ್ವದ ಗುಣಗಳನ್ನು ಹೇಗೆ ತುಂಬಬೇಕು ಎಂಬುದನ್ನು ಪ್ರಾಯೋಗಿಕವಾಗಿ ತೋರಿಸಿ ಕೊಡಲಾಯಿತು ಎಂದರು.

### ಟಿಎಪಿಸಿಎಂಎಸ್ ವಜ್ರ ಮಹೋತ್ಸವಕ್ಕೆ ಸಜ್ಜು: ಎಚ್.ಎನ್.ಅಶೋಕ್

• **ಉದಯವಾಹಿನಿ, ಮಾಗಡಿ**

ತಾಲ್ಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘ ಸ್ಥಾಪನೆಯಾಗಿ 75 ವರ್ಷ ಕಳೆದಿದೆ. ಈ ಸಂದರ್ಭದಲ್ಲಿ ವಜ್ರ ಮಹೋತ್ಸವ ಏರ್ಪಡಿಸಲು ಸಂಘದ ಆಡಳಿತ ಮಂಡಳಿ ಸಜ್ಜಾಗುತ್ತಿದೆ ಎಂದು ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ಹಾಗೂ ಬಮೂಲ್ ನಿರ್ದೇಶಕ ಎಚ್.ಎನ್.ಅಶೋಕ್ ತಿಳಿಸಿದರು. ಪಟ್ಟಣದ ಸಿದ್ದಾರೂಢಾಶ್ರಮ ಸಮುದಾಯ ಭವನದಲ್ಲಿ ತಾಲ್ಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘದ ವಾರ್ಷಿಕ ಸದಸ್ಯರ ಸಭೆ ಉದ್ಘಾಟಿಸಿ ಮಾತನಾಡಿದರು. ಪಟ್ಟಣದ ಹೊಸಪೇಟೆ ವೃತ್ತದಲ್ಲಿ ಗೋದಮು ನಿರ್ಮಾಣ ಕಾಮಗಾರಿ ಪ್ರಗತಿ ಹಂತದಲ್ಲಿದೆ. ಮುಂದಿನ ಜನವರಿ ತಿಂಗಳಲ್ಲಿ ಲೋಕಾರ್ಪಣೆ ಮಾಡಲಾಗುತ್ತದೆ. ಇದೇ ಸಂದರ್ಭದಲ್ಲಿ ತಾಲ್ಲೂಕಿನ ರೈತರ ಅನುಕೂಲಕ್ಕೆ ರೈತ ಭವನ ನಿರ್ಮಿಸುವ ಆಶಯವನ್ನು ಆಡಳಿತ ಮಂಡಳಿ ವ್ಯಕ್ತಪಡಿಸಿದೆ ಎಂದು ತಿಳಿಸಿದರು. ಸಹಕಾರಿ ಸಂಘರ ಅಧ್ಯಕ್ಷ ಶಿವಪ್ರಸಾದ್ ಮಾತನಾಡಿ, ಈ ಬಾರಿ ಸಂಘ ರೂ.29.50 ಲಕ್ಷ ಲಾಭಾಂಶದಲ್ಲಿದೆ. ಮುಂದಿನ ಬಾರಿ ಲಾಭಾಂಶ ದುಪ್ಪಟ್ಟು ಮಾಡಲು ನಿರ್ದೇಶಕರು, ಅಧಿಕಾರಿಗಳಿಂದ ಸಲಹೆ ಪಡೆದು ಕಾರ್ಯನಿರ್ವಹಿಸಲಾಗುವುದು ತಿಳಿಸಿದರು.

### ಬರಹಗಳು ವ್ಯಕ್ತಿ ಜೀವನದ ನೆನಪಲ್ಲ, ದಾಖಲೆ

• **ಉದಯವಾಹಿನಿ, ಮೈಸೂರು**

ಪಿ.ಬೋರೇಗೌಡ ಅವರ ಕೃತಿಯಲ್ಲಿನ ಬರಹ ವ್ಯಕ್ತಿ ಜೀವನದ ನೆನಪಲ್ಲ. ಇವು ಆಡಳಿತ, ಆರೋಗ್ಯ, ಕೃಷಿ ಕ್ಷೇತ್ರಗಳಿಗೆ ದಾರಿ ತೋರಿಸುವ ದಾಖಲೆಗಳು ಎಂದು ಎಚ್‌ಸಿಜಿ ಆಸ್ಪತ್ರೆಗಳ ಸಮೂಹದ ಅಧ್ಯಕ್ಷ ಅಜಯ್ ಕುಮಾರ್ ಹೇಳಿದರು.

ನಗರದ ಕಲಾಮಂದಿರದಲ್ಲಿ ಮಾಣಿಕ್ಯ ಫಾರ್ಮ್ ವತಿಯಿಂದ ನಡೆದ ನಿವೃತ್ತ ವಿಶೇಷ ಕಾರ್ಯದರ್ಶಿ ಪಿ.ಬೋರೇಗೌಡ ಅವರ ಗೌಂಡ್ ಗವರ್ನೆನ್ಸ್, ಗ್ರೇಂಡ್ ಗವರ್ನೆನ್ಸ್ ವಾಲ್ಯೂಮ್ 2 ಶೂನ್ಯದಿಂದ ಶಿಖರದೆಡೆಗೆ (ಆತ್ಮಕಥೆ) ಮಾಣಿಕ್ಯ ಫಾರ್ಮ್ ಮಾಣಿಕ್ಯ ಫಾರ್ಮ್ ಹಣ್ಣುಗಳ ತೋಟ’ ಪುಸ್ತಕಗಳ ಬಿಡುಗಡೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಪಿ.ಬೋರೇಗೌಡ ಸಮಾಜಕ್ಕೆ ಮಾದರಿ ವ್ಯಕ್ತಿ. ಅವರ ಜೀವನಯಾನ, ಆಡಳಿತಾನುಭವ ಮತ್ತು ಕೃಷಿ, ಆರೋಗ್ಯ ಕ್ಷೇತ್ರಗಳಲ್ಲಿ ಮಾಡಿದ ಮಹತ್ವದ ಸಾಧನೆ ಒಳಗೊಂಡ ಪ್ರಮುಖ ಕೃತಿಗಳು ಬಿಡುಗಡೆಗೊಂಡಿರುವುದು ವಿಶೇಷ. ಇವು ಕೇವಲ ಕೃತಿಗಳಾಗಿ ಉಳಿಯಬಾರದು. ಪ್ರತಿಯೊಬ್ಬರೂ ಓದಬೇಕು ಎಂದರು.

ಗೌಂಡ್ ಗವರ್ನೆನ್ಸ್ ಕೃತಿ ಬಡವರನ್ನು ಕಠಿಣ ವೈದ್ಯಕೀಯ ವೆಚ್ಚದಿಂದ ಹೇಗೆ ರಕ್ಷಿಸುತ್ತದೆ. ಆರೋಗ್ಯ ಸೇವೆ ಅಗತ್ಯವಿರುವವರಿಗೆ ಹೇಗೆ ಪರಿವರ್ತಿಸಿತು ಎಂಬುದರ ಕಥೆಯನ್ನು ಹೇಳುತ್ತದೆ ಎಂದು ತಿಳಿಸಿದರು. ಶೂನ್ಯದಿಂದ ಶಿಖರದೆಡೆಗೆ ಪರಿಷ್ಕೃತ ಕೃತಿ ಬಿಡುಗೊಡೆಗೊಳಿಸಿದ ಸೆಸ್ಕ್ ವ್ಯವಸ್ಥಾಪಕ ನಿರ್ದೇಶಕ ಕೆ.ಎಂ.ಮುನಿಗೋಪಾಲರಾಜು, ಹಳ್ಳಿಯ ಸರಳ ಆರಂಭದಿಂದ ರಾಜ್ಯದ ಆಡಳಿತದ ಶಿಖರದವರೆಗಿನ ಪಯಣವನ್ನು ಲೇಖಕರು ಕೃತಿಯಲ್ಲಿ ಚಿತ್ರಿಸಿದ್ದಾರೆ ಎಂದರು.

### ಗೃಹಭಾಗ್ಯ ಯೋಜನೆ ಜಾರಿಗೆ ಸರ್ಕಾರ ಆಡಳಿತಾತ್ಮಕ ಅನುಮೋದನೆ

• **ಉದಯವಾಹಿನಿ, ಚಾಮರಾಜನಗರ**

ಹಾಡಿ ಪೋಡು, ಕಾಡಂಚಿನ ಗ್ರಾಮಗಳಲ್ಲಿ ಬದುಕು ಕಟ್ಟಿಕೊಂಡಿರುವ ಪರಿಶಿಷ್ಟ ಪಂಡಗಳಿಗೆ ಸೇರಿರುವ ವಸತಿ ರಹಿತ ಅರಣ್ಯ, ಅರಣ್ಯಾಧಾರಿತ, ಸೂಕ್ಷ್ಮ ಸಮುದಾಯಗಳಿಗೆ ಮನೆಗಳನ್ನು ನಿರ್ಮಾಣ ಮಾಡಿಕೊಡುವ ಉದ್ದೇಶದಿಂದ ಮುಖ್ಯಮಂತ್ರಿಗಳ ಆದಿವಾಸಿ ಗೃಹಭಾಗ್ಯ ಯೋಜನೆ ಜಾರಿಗೆ ಸರ್ಕಾರ ಆಡಳಿತಾತ್ಮಕ ಅನುಮೋದನೆ ನೀಡಿದೆ.ಈಚೆಗೆ ನಡೆದ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ರಾಜ್ಯದ ವಿವಿಧ ಭಾಗಗಳಲ್ಲಿ ನೆಲೆಸಿರುವ ಸೋಲಿಗರು, ಹಸಲರು, ಗೌಡಲು, ಸಿದ್ದಿ, ಕುಡಿಯ, ಮಲೆಕುಡಿಯ, ಕಾಡುಕುರುಬ, ಇರುಳಿಗ, ಬೆಟ್ಟ ಕುರುಬ, ಯರವ, ಪಣಿಯನ್ ಸೇರಿದಂತೆ ಇತರೆ ಸಮುದಾಯಗಳ 6,856 ಕುಟುಂಬಗಳಿಗೆ ಮನೆಗಳನ್ನು ನಿರ್ಮಿಸಿಕೊಡಲು ನಿರ್ಣಯ ತೆಗೆದುಕೊಳ್ಳಲಾಗಿದೆ. 160 ಕೋಟಿ ವೆಚ್ಚದ ಯೋಜನೆ ಇದಾಗಿದ್ದು ರೂ. 4.50 ಲಕ್ಷ ವೆಚ್ಚದಲ್ಲಿ ಮನೆ ನಿರ್ಮಾಣ ಮಾಡಿಕೊಡಲು ನಿರ್ಧರಿಸಲಾಗಿದೆ. ಈ ಮೂಲಕ ನೆತ್ತಿ ಮೇಲೊಂದು ಸ್ವಂತ ಸೂರು ಕಟ್ಟಿಕೊಳ್ಳಬೇಕು ಎಂಬ ಆದಿವಾಸಿಗಳ ಕನಸು ದಶಕಗಳ ಬಳಿಕ ನನಸಾಗುವ ನಿರೀಕ್ಷೆಗಳು ಗರಿಗೆದರಿದೆ. ಜಿಲ್ಲೆಯಲ್ಲಿ ಹನೂರು, ಚಾಮರಾಜನಗರ, ತಾಲ್ಲೂಕುಗಳಲ್ಲಿ ಬುಡಕಟ್ಟು ಸಮುದಾಯಗಳಿಗೆ ಸೇರಿರುವ 32,500ಕ್ಕೂ ಹೆಚ್ಚು ಆದಿವಾಸಿಗಳು ನೆಲೆಸಿದ್ದಾರೆ. 2.995 ಕುಟುಂಬಗಳಿಗೆ ಸ್ವಂತ ಸೂರು ಇಲ್ಲ. ಸಾವಿರಾರು ಮಂದಿ ಮುರಿದು ಬೀಳುವ ಮುರುಕಲು ಜೋಪಡಿಯೊಳಗೆ ವಾಸವಾಗಿದ್ದಾರೆ.

ಸಮಾಜದ ಮುಖ್ಯವಾಹಿನಿಗೆ ಬರಲು ಸಾಧ್ಯವಾಗದ, ವಸತಿ ಯೋಜನೆಗಳಿಂದ ವಂಚಿತರಾಗಿದ್ದ ಆದಿವಾಸಿಗಳು ಮುಖ್ಯಮಂತ್ರಿಗಳ ಆದಿವಾಸಿ ಗೃಹಭಾಗ್ಯ ಯೋಜನೆ’ಯಲ್ಲಾದರೂ ಸೂರು ದಕ್ಕುತ್ತದೆಯೇ ಎಂಬ ನಿರೀಕ್ಷೆಯಲ್ಲಿದ್ದಾರೆ.


ಅಂತರಾಳದಿಂದ... EDITORIAL

# ಭಾರತ ರತ್ನಕ್ಕೆ ಕುವೆಂಪುರವರಿಗೆ ಗೌರವಸಿಗುವುದೆ?

ವಿವಿಧ ಕ್ಷೇತ್ರದಲ್ಲಿ ಮಹತ್ತರ ಸಾಧನೆ ಮಾಡಿದ ಸಾಧಕರಿಗೆ ನೀಡುವ ರಾಜ್ಯದ ಅತ್ಯುನ್ನತ ಪ್ರಶಸ್ತಿಯಾಗಿ ಕರ್ನಾಟಕ ರತ್ನವನ್ನು ಗುರುತಿಸಲಾಗುತ್ತಿದೆ 1991ರಿಂದ ಈ ಪ್ರಶಸ್ತಿಗಾಗಿ ಸಾಧಕರನ್ನು ಗುರುತಿಸುವ ಪ್ರಕ್ರಿಯೆ ಆರಂಭಗೊಂಡಿತು. 1992ರಲ್ಲಿ ಮೊದಲ ಕರ್ನಾಟಕ ರತ್ನವನ್ನು ರಾಷ್ಟ್ರಕವಿ ಕುವೆಂಪು ಹಾಗೂ ಡಾ.ರಾಜ್ ಕುಮಾರ್ ಅವರಿಗೆ ನೀಡಲಾಯಿತು. ಕುವೆಂಪು ಈ ನಾಡಿನ ಭಾಷೆ, ಸಾಹಿತ್ಯ, ಕಾವ್ಯ ಮತ್ತು ವೈಚಾರಿಕತೆಗೆ ಕೊಟ್ಟ ಕೊಡುಗೆಯ ಮೂಲಕ ಪ್ರಶಸ್ತಿಗೆ ಅರ್ಹರಾದರೆ, ರಾಜ್ ಕುಮಾರ್ ಕೇವಲ ನಟರಾಗಿ ಮಾತ್ರವಲ್ಲ ಕನ್ನಡ ಅಸ್ಮಿತೆಯ ಭಾಗವಾಗಿ ಗೌರವವನ್ನು ಪಡೆದುಕೊಂಡರು. ಅಲ್ಲಿಂದ ಈವರೆಗೆ ಸುಮಾರು 12 ಸಾಧಕರನ್ನು ಕರ್ನಾಟಕ ರತ್ನ ಪ್ರಶಸ್ತಿಗೆ ಗುರುತಿಸಲಾಗಿದೆ. ಈ ಬಾರಿ ಇಬ್ಬರು ಸಿನೆಮಾ ನಟ–ನಟಿಯರನ್ನು ಈ ಗೌರವಕ್ಕೆ ಆಯ್ಕೆ ಮಾಡಲಾಗಿದ್ದು, ಈ ಮೂಲಕ ಸಿನಿಮಾ ರಂಗದ ಒಟ್ಟು ನಾಲ್ಕು ಮಂದಿ ಕರ್ನಾಟಕ ರತ್ನ ಪಡೆದಂತಾಗಿದೆ. ಈ ಬಾರಿ ಇಬ್ಬರೂ ಸಿನಿಮಾ ಕ್ಷೇತ್ರದ ಸಾಧಕರನ್ನೇ ಆಯ್ಕೆ ಮಾಡುವ ಅಗತ್ಯವಿತ್ತೆ? ಎನ್ನುವ ಪ್ರಶ್ನೆಯೂ ಇದೇ ಸಂದರ್ಭದಲ್ಲಿ ಎದ್ದಿದೆ. ವಿಷ್ಣುವರ್ಧನ್, ಸರೋಜಾದೇವಿ ಸಿನೆಮಾ ಕ್ಷೇತ್ರದಲ್ಲಿ ಬಹಳಷ್ಟು ಸಾಧನೆ ಮಾಡಿದ್ದಾರಾದರೂ, ಕರ್ನಾಟಕ ರತ್ನಕ್ಕೆ ಸಿನೆಮಾ ಕ್ಷೇತ್ರದಿಂದ ಒಬ್ಬರನ್ನು ಮತ್ತು ಇತರ ಕ್ಷೇತ್ರದಿಂದ ಇನ್ನೊಬ್ಬ ಸಾಧಕರನ್ನು ಆಯ್ಕೆ ಮಾಡಿಕೊಳ್ಳುವ ಅವಕಾಶವಿತ್ತು. ವಿಜ್ಞಾನ, ಕೃಷಿ, ಆರೋಗ್ಯ, ಪರಿಸರ ಮೊದಲಾದ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಒಬ್ಬರೂ ಯಾಕೆ ಸರಕಾರಕ್ಕೆ ಸಿಗಲಿಲ್ಲ ಎನ್ನುವ ಪ್ರಶ್ನೆ ನಿರ್ಲಕ್ಷಿಸುವಂತಹದೇನಲ್ಲ, ಮರಣೋತ್ತರವಾಗಿ ನೀಡುವುದಾದರೆ ಸಿನೆಮಾ ಕ್ಷೇತ್ರಗಳಲ್ಲಿ ಅಪಾರ ಸಾಧನೆ ಮಾಡಿದ ತಂತ್ರಜ್ಞರು, ನಿರ್ದೇಶಕರು ಆಗಿ ಹೋಗಿದ್ದಾರೆ. ಅವರನ್ನೆಲ್ಲ ಗುರುತಿಸದೇ ಕರ್ನಾಟಕ ರತ್ನಕ್ಕೆ ಜನಪ್ರಿಯ ನಟರನ್ನು ಆಯ್ಕೆ ಮಾಡಿರುವುದು ಪ್ರಶಸ್ತಿ ಓಲೈಕೆಗೆ ಬಲಿಯಾಯಿತೆ ಎಂಬ ಅನುಮಾನಕ್ಕೆ ಕಾರಣವಾಗಿದೆ. ಈವರೆಗೆ ಆಯ್ಕೆಯಾದ 12 ಕರ್ನಾಟಕ ರತ್ನಗಳಲ್ಲಿ 4 ಮಂದಿ ಸಿನೆಮಾ ನಟರೇ ಆಗಿದ್ದಾರೆ. ಸಂಸ್ಕೃತಿ ಕಲೆಯ ಒಂದು ಭಾಗ ಮಾತ್ರವಾಗಿದೆ ಸಿನಿಮಾ ಹಾಗೆಂದು, ಅದರ ಮೂಲಕವೇ ಕರ್ನಾಟಕವನ್ನು ಬಿಂಬಿಸುವುದು ಸರಿಯಲ್ಲ. ಈ ನಿಟ್ಟಿನಲ್ಲಿ ಈ ನಾಡನ್ನು ಕಟ್ಟಿ ಬೆಳೆಸಲು ಬೆವರು ಸುರಿಸಿದ ಇತರ ಕ್ಷೇತ್ರಗಳ ಸಾಧಕರಿಗೂ ಭವಿಷ್ಯದಲ್ಲಿ ನ್ಯಾಯಸಿಗುವಂತಾಗಬೇಕು.ಇದೇ ಸಂದರ್ಭದಲ್ಲಿ ಕುವೆಂಪು ಅವರನ್ನು ಭಾರತ ರತ್ನಕ್ಕೆ ಶಿಫಾರಸು ಮಾಡಿರುವುದು ಶ್ಲಾಘನೀಯ ಕಾರ್ಯ, ಕರ್ನಾಟಕದಲ್ಲಿ ಈವರೆಗೆ ಮೂವರು ಶ್ರೇಷ್ಠ ಸಾಧಕರು ಭಾರತ ರತ್ನ ಪ್ರಶಸ್ತಿಗೆ ಭಾಜನರಾಗಿದ್ದಾರೆ. 1955ರಲ್ಲಿ ಸರ್. ಎಂ. ವಿಶ್ವೇಶ್ವರಯ್ಯ, 2009ರಲ್ಲಿ ಖ್ಯಾತ ಸಂಗೀತ ವಿದ್ವಾಂಸ ಪಂ. ಭೀಮಸೇನ ಜೋಷಿ, 2014ರಲ್ಲಿ ಹಿರಿಯ ವಿಜ್ಞಾನಿ ಸಿ.ಎನ್. ಆರ್. ರಾವ್ ಅವರು ಈ ಹಿರಿಮೆಯನ್ನು ತನ್ನದಾಗಿಸಿಕೊಂಡಿದ್ದಾರೆ. ದಿವಂಗತ ಸಿದ್ದಗಂಗಾ ಶ್ರೀ ಶಿವಕುಮಾರ ಸ್ವಾಮಿಯವರು ಸಾಮಾಜಿಕ, ಶಿಕ್ಷಣ ಮತ್ತು ಧಾರ್ಮಿಕ ಕ್ಷೇತ್ರದಲ್ಲಿ ನೀಡಿದ ಕೊಡುಗೆಗಾಗಿ ಅವರಿಗೆ ಭಾರತ ರತ್ನ ನೀಡಬೇಕು ಎಂದು ಹಲವಾರು ರಾಜಕೀಯ ನಾಯಕರು, ಸಾಮಾಜಿಕ ಕಾರ್ಯಕರ್ತರು ಕೇಂದ್ರವನ್ನು ಆಗ್ರಹಿಸುತ್ತಾ ಬಂದಿದ್ದಾರೆ.

**ಕನ್ನಡ ಚಿತ್ರರಂಗದ ಹಿರಿಯ ನಟ ವಿಷ್ಣುವರ್ಧನ್ ಮತ್ತು ಬಹುಭಾಷಾ ನಟಿ ಡಾ. ಬಿ. ಸರೋಜಾ ದೇವಿ ಅವರಿಗೆ ಮರಣೋತ್ತರ 'ಕರ್ನಾಟಕ ರತ್ನ ಪ್ರಶಸ್ತಿಯನ್ನು ನೀಡುವ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ. ಇದೇ ಸಂದರ್ಭದಲ್ಲಿ ರಾಷ್ಟ್ರಕವಿ ಕುವೆಂಪು ಅವರ ಹೆಸರನ್ನು ರಾಜ್ಯ ಸರಕಾರ ಭಾರತರತ್ನ ಪ್ರಶಸ್ತಿಗೆ ಶಿಫಾರಸು ಮಾಡಿದೆ.**

ಆದರೆ ಈ ಬೇಡಿಕೆಯನ್ನು ಕೇಂದ್ರ ಸರಕಾರ ತಿರಸ್ಕರಿಸುತ್ತಲೇ ಬಂದಿದೆ. ಇತ್ತೀಚಿನ ದಿನಗಳಲ್ಲಿ ರಾಜಕೀಯ ಕಾರಣಗಳನ್ನು ಮುಂದಿಟ್ಟು ಭಾರತ ರತ್ನವನ್ನು ಹಂಚುವ ಪ್ರವೃತ್ತಿ ಹೆಚ್ಚುತ್ತಿದೆ ಎನ್ನುವ ಆರೋಪಗಳು ಕೇಳಿ ಬರುತ್ತಿವೆ. ಪ್ರಣವ್ ಮುಖರ್ಜಿ, ಪಿ.ವಿ. ನರಸಿಂಹ ರಾವ್, ಎಲ್.ಕೆ. ಅಡ್ವಾಣಿ ಇವರೆಲ್ಲರಿಗೆ ಭಾರತ ರತ್ನ ಹೇಗೆ ಸಿಕ್ಕಿತು ಎನ್ನುವುದನ್ನು ವಿವರಿಸುವ ಅಗತ್ಯವಿಲ್ಲ. ಕ್ರಿಕೆಟ್‌ನಲ್ಲಿ ಮಾಡಿದ ಸಾಧನೆಗಾಗಿ ಸಚಿನ್ ತೆಂಡುಲ್ಕರ್ ಭಾರತ ರತ್ನ ನೀಡಿದಾಗಲೂ ಅದರ ವಿರುದ್ಧ ಮಾತುಗಳು ಕೇಳಿ ಬಂದಿದ್ದವು. ಇವರಿಗೆಲ್ಲ ಭಾರತರತ್ನವನ್ನು ಹಂಚುವುದಕ್ಕೆ ಸಾಧ್ಯವಾಗುವುದಾದರೆ, ತ್ರಿ ದಾಸೋಹದ ಮೂಲಕ ಎಲ್ಲಾ ವರ್ಗಗಳನ್ನು ತಲುಪಿದ, ಧರ್ಮಕ್ಕೆ ಹೊಸ ವ್ಯಾಖ್ಯಾನವನ್ನು ನೀಡಿದ ಸಿದ್ದಗಂಗಾ ಸ್ವಾಮೀಜಿಗಳಿಗೆ ಯಾಕೆ ಭಾರತರತ್ನ ನೀಡಲಾಗದು ಈ ಪ್ರಶ್ನೆಯನ್ನು ಕೇಂದ್ರ ಸರಕಾರಕ್ಕೆ ಕರ್ನಾಟಕ ಕೇಳುತ್ತಲೇ ಬಂದಿದೆ. ಇದೀಗ ರಾಷ್ಟ್ರಕವಿ ಕುವೆಂಪು ಅವರ ಹೆಸರನ್ನು ಭಾರತ ರತ್ನ ಗೌರವಕ್ಕೆ ಕರ್ನಾಟಕ ಶಿಫಾರಸು ಮಾಡಿರುವುದು ಅರ್ಥಪೂರ್ಣವಾಗಿದೆ. ಸಾಹಿತ್ಯ ಕ್ಷೇತ್ರದಲ್ಲಿ ಅಗಾಧ ಸಾಧನೆ ಮಾಡಿದ ಸಾಧಕರಿಗೆ ಭಾರತ ರತ್ನ ಗೌರವ ಈವರೆಗೆ ಸಿಕ್ಕಿಲ್ಲ ಶ್ರೀರಾಮಾಯಣ ದರ್ಶನಂ ಕಾವ್ಯದ ಮೂಲಕ ಕರ್ನಾಟಕಕ್ಕೆ ಮೊತ್ತ ಮೊದಲ ಜ್ಞಾನಪೀಠ ಪ್ರಶಸ್ತಿಯನ್ನು ತಂದುಕೊಟ್ಟವರು ಕುವೆಂಪು. ಇಂದು ಜಗತ್ತು ಬಯಸುವ ಶಾಂತಿ, ಮಾನವೀಯತೆಯ ಬಗ್ಗೆ ಭವ್ಯವಾದ ಕಲ್ಪನೆಯನ್ನು ಅವರು ಹೊಂದಿದ್ದರು. ವಿಶ್ವ ಮಾನವತೆಯನ್ನು ತನ್ನೆಲ್ಲ ಬರಹಗಳಲ್ಲಿ ಕಾವ್ಯಗಳಲ್ಲಿ ಪದೇ ಪದೇ ಸಾರಿದವರು ಇಂಗ್ಲಿಷ್‌ನಲ್ಲಿ ಬರೆಯುವ ಎಲ್ಲಾ ಸಾಮರ್ಥ್ಯ ಅವರಲ್ಲಿದ್ದರೂ ಅವರು ಪ್ರಜ್ಞಾಪೂರ್ವಕವಾಗಿ ಕನ್ನಡವನ್ನು ಆರಿಸಿಕೊಂಡರು. ಪ್ರಾದೇಶಿಕ ಭಾಷೆಯನ್ನು ಅವರು ರಾಷ್ಟ್ರಮಟ್ಟಕ್ಕೆ ತಲುಪಿಸಿದರು. ಅಷ್ಟೇ ಅಲ್ಲ ಧರ್ಮ, ದೇಶದ ಗಡಿಯಾಚೆಗೆ ವಿಶ್ವ ಮಾನವ ಪ್ರಜ್ಞೆಯನ್ನು ದಾಟಿಸುವುದಕ್ಕೆ ಪ್ರಯತ್ನಿಸಿದರು. ಕುವೆಂಪು ಅವರೊಳಗೆ ರಾಮಕೃಷ್ಣ ಪರಮಹಂಸರಿದ್ದಾರೆ, ಗುರುದೇವ ರವೀಂದ್ರರಿದ್ದಾರೆ. ವಿಲಿಯಂ ವರ್ಡ್ಸ್‌ವರ್ತ್‌ನಂತಹ ವಿಶ್ವದ ಮಹಾನ್ ಕವಿಗಳ ಝಲಕ್‌ಗಳು ಅವರ ಕಾವ್ಯದಲ್ಲಿನ ಮುಖ್ಯವಾಗಿ ಅವರು ವೈಚಾರಿಕವಾಗಿ ಬಹಳಷ್ಟು ಎತ್ತರದಲ್ಲಿದ್ದರು. ತನ್ನ ಕಾವ್ಯ ರೂಪಕಗಳಲ್ಲಿ ಮೈಮರೆಯದೆ ಲೇಖನ ಬರಹ, ಭಾಷಣಗಳಲ್ಲಿ ಪುರೋಹಿತ ಶಾಹಿ ವ್ಯವಸ್ಥೆಯ ವಿರುದ್ಧ ಬಂಡೆದ್ದರು. ಜನರನ್ನು ಜಾಗೃತಗೊಳಿಸಲು ಬಹುದೊಡ್ಡ ಪಾತ್ರವನ್ನು ವಹಿಸಿದರು. ಶೋಷಿತ ಸಮುದಾಯದ ಅಳಲುಗಳನ್ನು ತನ್ನ ಕತೆ, ಕಾದಂಬರಿಗಳಲ್ಲಿ ತೆರೆದಿಟ್ಟರು. ಅವರ ಧನ್ವಂತರಿಯ ಚಿಕಿತ್ಸೆ ಈ ದೇಶದ ರೈತರ ಅಳಲನ್ನು ಅತ್ಯಂತ ವ್ಯಂಗ್ಯವಾಗಿ, ಪರಿಣಾಮಕಾರಿಯಾಗಿ ತೆರೆದಿಡುತ್ತದೆ.



## ರಾಮಾಯಣ

ಹೇಮಂತ ತುವಿನ ವರ್ಣನೆ

• ಹಿಂದಿನ ಸಂಚಿಕೆಯಿಂದ

### 119 ನೆಯ ಅಧ್ಯಾಯ

ಧರಿಸಿಕೊಂಡಿದ್ದೀಯೇಕೆ ನೀನು ರಾಕ್ಷಸರಿರುವ ಈ ಸ್ಥಳಕ್ಕೆ ಯಾವ ಕಾರಣದಿಂದ ಬಂದೆ ನೀನು ಬಂದ ಉದ್ದೇಶವನ್ನು ಯಥಾರ್ಥವಾಗಿ ಹೇಳು ಎಂದು ಕೇಳಿದಳು. ಶ್ರೀರಾಮನು ಋಜುಮಾರ್ಗದಿಂದ ಅವಳನ್ನು ಕುರಿತು ಕೇಳು, ದೇವೇಂದ್ರನಿಗೆ ಸಮಾನವಾದ ಪರಾಕ್ರಮವುಳ್ಳ ದಶರಥನೆಂಬ ಮಹಾರಾಜನಿದ್ದನು. ನಾನು ಆತನ ಜೇಷ್ಠ ಪುತ್ರನು. ನನ್ನ ಹೆಸರು ರಾಮ.

ಈತ ನನ್ನ ತಮ್ಮ. ಈತನ ಹೆಸರು ಲಕ್ಷ್ಮಣ. ಈಕೆಯು ವಿದೇಹರಾಜನ ಕುಮಾರಿಯಾದ ಸೀತಾದೇವಿ, ನನ್ನ ಪತ್ನಿ. ನಮ್ಮ ತಂದೆಯಾದ ದಶರಥರಾಜನ ಅಪ್ಪಣೆಯಿಂದಲೂ ಧರ್ಮವನ್ನು ಪರಿಪಾಲಿಸಬೇಕೆಂಬ ಬುದ್ಧಿಯಿಂದಲೂ ಇಲ್ಲಿಗೆ ವನವಾಸಕ್ಕೆ ಬಂದನು. ಇದೇ ನನ್ನ ವೃತ್ತಾಂತ. ಇನ್ನು ನಿನ್ನ ವೃತ್ತಾಂತವನ್ನು ಹೇಳು. ನೀನಾರು ಯಾರ ಹೆಂಡತಿ ನಿನ್ನ ಆಕಾರವನ್ನು ನೋಡಿದರೆ ರಾಕ್ಷಸಿಯೆಂದು ತಿಳಿದುಬರುತ್ತದೆ. ಇಲ್ಲಿಗೆ ಬಂದ ಕಾರಣವೇನು ಯಥಾರ್ಥವಾಗಿ ಹೇಳು ಎಂದನು.

ಶೂರ್ಪಣಖಿಯು ಆತನನ್ನು ಕುರಿತು ಎಲೈ ರಾಮ, ನನ್ನ ಹೆಸರು ಶೂರ್ಪಣಖಿ. ನಾನು ರಾಕ್ಷಸಿ. ಮನಸ್ಸಿಗೆ ಬಂದ ರೂಪವನ್ನು ತಾಳುವ ಕಾಮರೂಪಿಣಿ. ನಾನು ಅರಣ್ಯದಲ್ಲಿ ಸಮಸ್ತ ಪ್ರಾಣಿಗಳನ್ನೂ ಬೆದರಿಸುತ್ತ ಭಯವಿಲ್ಲದೆ ಒಬ್ಬಳೇ ಸಂಚರಿಸುತ್ತಿರುವೆನು. ನನ್ನ ಒಡಹುಟ್ಟಿದ ಹಿರಿಯಣ್ಣನು ಸಮಸ್ತ ರಾಕ್ಷಸರಿಗೂ ಒಡೆಯನಾದ ರಾವಣೇಶ್ವರ. ಧರ್ಮಸ್ವರೂಪನಾದ ವಿಭೀಷಣನು ನನ್ನ ಒಡಹುಟ್ಟಿದವನು. ಆತನು ರಾಕ್ಷಸನಂತೆ ಕ್ರೂರನಲ್ಲ. ಮತ್ತೊಬ್ಬ ಒಡಹುಟ್ಟಿದ ಕುಂಭಕರ್ಣನು ಸದಾಕಾಲದಲ್ಲಿಯೂ ನಿದ್ರಾಪರವಶನಾಗಿರುವನು. ಸಮರಾಂಗಣದಲ್ಲಿ ಪಟುಭಟರಾದ ಖರದೂಷಣರೆಂಬ ಮತ್ತಿಬ್ಬರು ಸಹೋದರರು ಈ ವನದ ಸಮೀಪದಲ್ಲಿಯೇ ಇದ್ದಾರೆ. ನಾನು ನಿನ್ನ ಅಪೂರ್ವವಾದ ಸೌಂದರ್ಯವನ್ನು ಕಂಡು ಕಾಮಬಾಣಕ್ಕೆ ವಶಳಾಗಿ ನೀನು ನನಗೆ ಪತಿಯಾಗ ಬೇಕೆಂದು ನಿನ್ನ ಸಮೀಪಕ್ಕೆ ಬಂದೆನು. ನಾನು ಸ್ವತಂತ್ರಳಾದವಳೇ ಹೊರತು ಪರವಶಳಲ್ಲ. ನೀನು ನನ್ನ ಕೈಹಿಡಿದು ನನಗೆ ಪತಿಯಾಗು. ನಿನಗೆ ಸೀತಾದೇವಿಯಿಂದ ಆಗತಕ್ಕುದೇನು ಸೀತೆಯು ವಿಕಟಾಂಗಿ : ವಿಕಾರವಾದ ರೂಪವುಳ್ಳವಳು : ನಿನಗೆ ಅನುಕೂಲಳಾದ ನನ್ನನ್ನು ನಿನ್ನ ಸ್ತ್ರೀಯಾಗಿ ಅಂಗೀಕರಿಸು, ವಿಕಟಾಂಗಿಯೂ ದುಷ್ಟೆಯು ಕರಾಳಿಯು ಆದ ಸೀತೆಯನ್ನೂ ಲಕ್ಷ್ಮಣನನ್ನ ಭಕ್ಷಣಮಾಡುತ್ತೇನೆ. ಆಮೇಲೆ ಮನೋಹರವಾದ ಪರ್ವತದ ಕೋಡುಗಲ್ಲುಗಳನ್ನು ನೋಡುತ್ತ ನನ್ನೊಡನೆ ರಮಿಸಿಕೊಂಡು ಈ ಅರಣ್ಯದಲ್ಲಿ ಸಂಚರಿಸುತ್ತಿರು ಎಂದು ನುಡಿದಳು.

**ಮುಂದುವರಿಯುವುದು...**





ಕಲಾ ಸಾಹಿತ್ಯ

ಕೃಷ್ಣಪ್ಪ ಲೇಖಕರು
ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು

■ ಉದಯವಾಹಿನಿ, ವಿಶೇಷ

# ಮೋಕ್ಷಗುಂಡಂ ಸರ್.ಎಂ.ವಿಶ್ವೇಶ್ವರಯ್ಯ ರವರ 164ನೇ ವರ್ಷದ ಜನ್ಮದಿನಾಚರಣೆ

ಸರ್ ಎಂ. ವಿಶ್ವೇಶ್ವರಯ್ಯನವರು 1861 ಸೆಪ್ಟೆಂಬರ್ 15 ರಂದು ಕೋಲಾರ ಜಿಲ್ಲೆ ಚಿಕ್ಕಬಳ್ಳಾಪುರ ತಾಲ್ಲೂಕಿನ ಮುದ್ದೇನಹಳ್ಳಿಯಲ್ಲಿ ಜನಿಸಿದರು. ತಂದೆ ಶ್ರೀನಿವಾಸ ಶಾಸ್ತ್ರಿಗಳು ತಾಯಿ ವೆಂಕಟಲಕ್ಷ್ಮಮ್ಮ.

ಸಂಸ್ಕೃತ ವಿದ್ವಾಂಸರಾಗಿದ್ದ ತಂದೆಯವರ ಶಿಸ್ತನ್ನು ಬಾಲ್ಯದಿಂದಲೇ ಸಂಸ್ಕಾರ, ಸದ್ಬುದ್ಧಿ ಸನ್ಮಾರ್ಗ, ಶಿಸ್ತನ್ನು ಮೈಗೂಡಿಸಿಕೊಂಡ ವಿಶ್ವೇಶ್ವರಯ್ಯನವರು ಪ್ರಾಥಮಿಕದಿಂದ ಹಿಡಿದು ಕಾಲೇಜು ಮಟ್ಟದವರೆಗೂ ಉತ್ತಮ ಗುಣಮಟ್ಟದ ಶಿಕ್ಷಣ ಪಡೆದು ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾಗಿ ಪ್ರತಿಭಾವಂತ ವಿದ್ಯಾರ್ಥಿಯಾಗಿದ್ದರು. ಸರ್ ಎಂವಿ ಎಂದೊಡನೆ ಅವರು ಮೈಸೂರು ರಾಜ್ಯದಲ್ಲಿ ದೇಶ–ವಿದೇಶಗಳಲ್ಲಿ ಮಾಡಿದ ಮಹಾನ್ ಕಾರ್ಯಗಳು ಸಾಲು– ಸಾಲಾಗಿ ನೆನಪಿಗೆ ಬರುತ್ತವೆ.ಕನ್ನಂಬಾಡಿ ಕಟ್ಟೆ, ಹಿಂದುಸ್ತಾನ್ ಏರ್ ಕ್ರಾಫ್ಟ್ ಫ್ಯಾಕ್ಟರಿ ಭದ್ರಾವತಿ ಕಬ್ಬಿಣ ಮತ್ತು ಉಕ್ಕು ಕಾರ್ಖಾನೆ,ಸರ್ಕಾರಿ ಸಾಬೂನು ಕಾರ್ಖಾನೆ, ಸ್ಟೇಟ್ ಬ್ಯಾಂಕ್ ಆಫ್ ಮೈಸೂರ್‌ಕನ್ನಡ ಸಾಹಿತ್ಯ ಪರಿಷತ್ತು,ಮೈಸೂರು ವಿಶ್ವವಿದ್ಯಾಲಯ, ಶಿವನಸಮುದ್ರ ಜೋಗ್ ಜಲಪಾತ ವಿದ್ಯುತ್ ಯೋಜನೆಗಳು, ಮೈಸೂರು ಸಕ್ಕರೆ ಕಾರ್ಖಾನೆ,ಮೈಸೂರು ಸ್ಯಾಂಡಲ್ ಸೋಪ್, ಭಟ್ಕಳ ಬಂದರು, ಬೆಂಗಳೂರು ವಿವಿ ಇಂಜಿನಿಯರಿಂಗ್ ಕಾಲೇಜ್, ಜಯಚಾಮರಾಜೇಂದ್ರ ವೃತ್ತಿ ತರಬೇತಿ ಸಂಸ್ಥೆ, ಗ್ವಾಲಿಯರ್ ಟೈಗರ್ ಡ್ಯಾಮ್, ಪುಣೆಯ ಖಡಕ್ ವಾಸ್ಲಾ ಜಲಾಶಯ ಇನ್ನೂ ಹತ್ತು ಹಲವು ಯೋಜನೆಗಳನ್ನು ರೂಪಿಸಿ ಜಾರಿಗೆ ತಂದರು. ಇವರ ಕಾರ್ಯದಕ್ಷತೆ, ದೂರದೃಷ್ಟಿ ಯೋಜನೆಗಳನ್ನು ಬ್ರಿಟೀಷ್ ಸರ್ಕಾರ ಗುರುತಿಸಿ ಕೈಸರ್–ಇ–ಹಿಂದ್ ಎಂಬ ಪ್ರಶಸ್ತಿ ನೀಡಿ ಗೌರವಿಸಿತು. ವಿಶ್ವೇಶ್ವರಯ್ಯನವರು ಕಾಲಕ್ಕೆ ಅತಿ ಹೆಚ್ಚಿನ ಮಹತ್ವ ನೀಡಿದ್ದರು. ನಿರಾಶೆ,ನಕಾರಾತ್ಮಕ ಯೋಚನೆಗಳಿಂದ ದೇಶಕ್ಕೆ ಅಪಾರ ಹಾನಿ ಎಂದು ಅವರು ತಿಳಿದಿದ್ದರು.

ಯಾವುದೇ ಕೆಲಸವನ್ನು ಶ್ರದ್ಧೆ,ನಿಷ್ಠೆ,ಪರಿಷ್ಕಾರಗಳಿಂದ ಮಾಡಬೇಕೆನ್ನುವುದು ಅವರ ಅಭಿಮತವಾಗಿತ್ತು.

ಪ್ರಾಮಾಣಿಕತೆ, ಆತ್ಮಗೌರವ, ಕಾಯಕ ಶ್ರದ್ಧೆ ಅವರ ಜೀವನದ ಬಹುಮುಖ್ಯ ಸೂತ್ರಗಳಾಗಿದ್ದವು. ಮೈಸೂರಿನ ದಿವಾನರಾಗಿ ಬಹಳ ಸಮರ್ಥವಾಗಿ ನಿರ್ವಹಿಸಿಕಾರಣಾಂತರದಿಂದ 1918ರಲ್ಲಿ ತಾವಾಗಿಯೇ ರಾಜೀನಾಮೆ ನೀಡಿ ಸರ್ಕಾರಿ ಕಾರನ್ನು ಉಪಯೋಗಿಸದೇ ಸ್ವಂತ ಕಾರಿನಲ್ಲಿ ಹಿಂದಿರುಗಿದರು.

ಸರ್ಕಾರದ ಉದ್ಯೋಗದಿಂದ ನಿವೃತ್ತರಾದ ಮೇಲೆ ಸರ್ಕಾರದ ವಾಹನವನ್ನು ಉಪಯೋಗಿಸುವ ಹಕ್ಕು ನನಗಿಲ್ಲ ಎಂಬುದು ಅವರ ನಿಲುವು ಹಾಗೂ ಅಭಿಪ್ರಾಯವಾಗಿತ್ತು.

ಪ್ರತಿಭಾವಂತ ಇಂಜಿನಿಯರ್, ದೂರದೃಷ್ಟಿಯ ರಾಜತಂತ್ರಜ್ಞ,ರಾಷ್ಟ್ರದ ಏಳಿಗೆಗೆ ನಿರಂತರ ಶ್ರಮಿಸಿದ ಶುದ್ಧ ಚೇತನ ವಿಶ್ವೇಶ್ವರಯ್ಯ ರವರಿಗೆ 1955 ರಲ್ಲಿ ಭಾರತ ಸರ್ಕಾರ ಭಾರತ ರತ್ನ ಪ್ರಶಸ್ತಿ ನೀಡಿ ಗೌರವಿಸಿತು.

ಇಂತಹ ಮಹಾನ್ ಚೇತನ,ಮಹಾನ್ ಮಾನವತಾವಾದಿ, ಕಾರ್ಯದಕ್ಷತೆ ಉಳ್ಳ ಸರ್ ಎಂ.ವಿಶ್ವೇಶ್ವರಯ್ಯರವರು 1962 ಏಪ್ರಿಲ್ 12 ರಂದು ತನ್ನ 101ನೇ ವಯಸ್ಸಿನಲ್ಲಿ ದೇಹತ್ಯಾಗ ಮಾಡಿದರು. ಆದರೆ ಅವರ ಕೊಡುಗೆ ಸ್ಮರಣೀಯ , ಚಿರಸ್ಮರಣೀಯವಾಗಿವೆ. ಸರ್ ಎಂ ವಿಶ್ವೇಶ್ವರಯ್ಯರವರನ್ನು ಭಾರತೀಯರಾದ ನಾವುಗಳೆಲ್ಲರೂ ಇಂದು ಅವರ 164 ನೇ ವರ್ಷದ ಜನ್ಮದಿನಾಚರಣೆಯ ಪ್ರಯುಕ್ತ ಅವರನ್ನು ಸ್ಮರಿಸಿ ನೆನೆಯುತ್ತಾ ,ಅವರ ಆತ್ಮಕ್ಕೆ ಶಾಂತಿ ಮತ್ತು ಸದ್ಗತಿ ದೊರೆಯಲೆಂದು ಆ ಭಗವಂತನಲ್ಲಿ ಪ್ರಾರ್ಥಿ ಸೋಣ. ಪ್ರತಿವರ್ಷ ಸೆ. 15 ರಂದು ಅವರ ನೆನಪಿನಲ್ಲಿ ಇಂಜಿನಿಯರ್ ದಿನವೆಂದು ಆಚರಿಸಲಾಗುತ್ತಿದೆ. ವಿಶ್ವೇಶ್ವರಯ್ಯನವರು ರಚಿಸಿದ ನನ್ನ ವೃತ್ತಿಜೀವನದ ನೆನಪುಗಳು ಎಂಬುದು ಅವರ ಅತ್ಯಂತ ಸ್ಫೂರ್ತಿದಾಯಕ ಕೃತಿಯಾಗಿದೆ.



# ಮನೆಯಲ್ಲೇ ಪಾಯಸ ಮಾಡಿ..

ಸ್ವೀಟ್ ಎಂದರೆ ಯಾರಿಗೆ ತಾನೇ ಇಷ್ಟವಿಲ್ಲ ಹೇಳಿ. ಆದರೆ, ಆರೋಗ್ಯದ ಬಗ್ಗೆ ಕಾಳಜಿ ಇರುವವರಿಗೆ ಸಿಹಿ ಪದಾರ್ಥಗಳು ಎಂದಿಗೂ ಸಮಸ್ಯೆಯೇ. ಹಾಗೆಂದು ಸಿಹಿಯಿಂದ ದೂರ ಇರಬೇಕೆಂದಿಲ್ಲ. ಸಕ್ಕರೆ, ಎಣ್ಣೆಯಿರುವ ಸಿಹಿತಿಂಡಿಗಳ ಬದಲಿಗೆ, ಪೌಷ್ಟಿಕಾಂಶ ಭರಿತ ಮತ್ತು ರುಚಿಕರವಾದ ತಿನಿಸುಗಳನ್ನು ಮನೆಯಲ್ಲೇ ತಯಾರಿಸಬಹುದು. ಅಂತಹ ಒಂದು ಉತ್ತಮ ಆಯ್ಕೆ ಗೋಧಿ ಪಾಯಸ. ಇದು ಸಾಂಪ್ರದಾಯಿಕ ಸಿಹಿ ಖಾದ್ಯವಾಗಿದ್ದು, ಮಕ್ಕಳು–ದೊಡ್ಡವರೆಲ್ಲರೂ ಇಷ್ಟಪಡುತ್ತಾರೆ. ಗೋಧಿಯ ನೈಸರ್ಗಿಕ ರುಚಿ, ಬೆಲ್ಲದ ಸಿಹಿ ಮತ್ತು ತುಪ್ಪದ ಪರಿಮಳವು ಸೇರಿ ಈ ಪಾಯಸವನ್ನು ಅತ್ಯಂತ ವಿಶೇಷವಾಗಿಸುತ್ತದೆ. ಬಿಸಿ ಬಿಸಿಯಾದ ಮತ್ತು ಪೌಷ್ಟಿಕ ಗೋಧಿ ಪಾಯಸವನ್ನು ಸುಲಭವಾಗಿ ಮನೆಯಲ್ಲಿ ಹೇಗೆ ತಯಾರಿಸುವುದು ಎಂಬ ಬಗ್ಗೆ ಇಲ್ಲಿದೆ ಸಂಪೂರ್ಣ ಮಾಹಿತಿ.

**ಗೋಧಿ ಪಾಯಸದ ಪ್ರಯೋಜನಗಳು :** ಗೋಧಿ ಪಾಯಸ ಕೇವಲ ರುಚಿಕರ ಮಾತ್ರವಲ್ಲ, ಇದು ಹಲವು ಆರೋಗ್ಯಕರ ಪ್ರಯೋಜನಗಳನ್ನೂ ಹೊಂದಿದೆ. ಗೋಧಿಯಲ್ಲಿ ನಾರಿನಾಂಶ ಸಮೃದ್ಧವಾಗಿದೆ. ಇದು ಜೀರ್ಣಕ್ರಿಯೆಗೆ ಸಹಕಾರಿಯಾಗಿದ್ದು, ಕರುಳಿನ ಆರೋಗ್ಯವನ್ನು ಸುಧಾರಿಸುತ್ತದೆ ಹಾಗೂ ಮಲಬದ್ಧತೆಯನ್ನು ತಡೆಯುತ್ತದೆ.

ಗೋಧಿಯು ಪ್ರೋಟೀನ್, ವಿಟಮಿನ್‌ಗಳು, ಕಬ್ಬಿಣದಂತಹ ಖನಿಜಗಳ ಉತ್ತಮ ಮೂಲವಾಗಿದೆ. ಇದು ದೇಹಕ್ಕೆ ಅಗತ್ಯವಾದ ಶಕ್ತಿ, ಪೋಷಣೆಯನ್ನು ಒದಗಿಸುತ್ತದೆ.


ಈ ಪಾಯಸಕ್ಕೆ ಸಕ್ಕರೆಯ ಬದಲಾಗಿ ಬೆಲ್ಲವನ್ನು ಬಳಸುವುದರಿಂದ, ಸಕ್ಕರೆಯಿಂದಾಗುವ ಹಾನಿಯನ್ನು ಕಡಿಮೆ ಮಾಡಬಹುದು. ಬೆಲ್ಲದಲ್ಲಿ ಕಬ್ಬಿಣಾಂಶ ಮತ್ತು ಖನಿಜಗಳಿವೆ. ಇದು ಪಾಯಸಕ್ಕೆ ವಿಶಿಷ್ಟವಾದ ಕಂದು ಬಣ್ಣ ಮತ್ತು ಆಳವಾದ ಸಿಹಿ ರುಚಿಯನ್ನು ನೀಡುತ್ತದೆ.

**ಗೋಧಿ ಪಾಯಸ ಮಾಡುವ ವಿಧಾನ :** ಮೊದಲಿಗೆ, ಅರ್ಧ ಕಪ್ ಗೋಧಿಯನ್ನು ಚೆನ್ನಾಗಿ ತೊಳೆಯಿರಿ. ಇದನ್ನು ರಾತ್ರಿಯಿಡೀ ಅಥವಾ ಕನಿಷ್ಠ 6 ರಿಂದ 8 ಗಂಟೆಗಳ ಕಾಲ ನೀರಿನಲ್ಲಿ ನೆನೆಸಿಡಿ. ಹೀಗೆ ಮಾಡುವುದರಿಂದ ಗೋಧಿ ಬೇಗನೆ ಬೇಯುತ್ತದೆ. ಪಾಯಸ ಮೃದುವಾಗಿರುತ್ತದೆ. ಮರುದಿನ ಬೆಳಗ್ಗೆ, ನೀರನ್ನು ಬಸಿದು ಸ್ವಚ್ಛವಾದ ಗೋಧಿಯನ್ನು ಪ್ರತ್ಯೇಕವಾಗಿ ಇಟ್ಟುಕೊಳ್ಳಿ. ನೆನೆಸಿದ ಗೋಧಿಯನ್ನು ಪ್ರೆಶರ್ ಕುಕ್ಕರ್‌ಗೆ ಹಾಕಿ, ಅದಕ್ಕೆ ಸುಮಾರು 1.5 ಕಪ್ ನೀರು ಸೇರಿಸಿ. ಸುಮಾರು 5 ಸೀಟಿಗಳವರೆಗೆ ಅಥವಾ ಗೋಧಿ ಸಂಪೂರ್ಣವಾಗಿ ಮೃದುವಾಗುವವರೆಗೆ ಬೇಯಿಸಿ. ಗೋಧಿ ತಣ್ಣಗಾದ ನಂತರ, ಅದನ್ನು ಸ್ವಲ್ಪ ಮಸೆದು ಮುದ್ದೆಯಾಗುವಂತೆ ಮಾಡಿ. ಈಗ ಹಾಲು ಮತ್ತು ಬೆಲ್ಲದ ಮಿಶ್ರಣ ತಯಾರಿಸಿ. ಒಂದು ಪಾತ್ರೆಯಲ್ಲಿ 2 ಕಪ್ ಹಾಲನ್ನು ಕುದಿಯಲು ಇಡಿ. ಹಾಲು ಕುದಿಯಲು ಪ್ರಾರಂಭಿಸಿದಾಗ, ಅದಕ್ಕೆ ಬೇಯಿಸಿದ ಗೋಧಿ ಮಿಶ್ರಣವನ್ನು ಸೇರಿಸಿ. ಯಾವುದೇ ಗಂಟುಗಳಾಗದಂತೆ ಸೌಟಿನಿಂದ ಚೆನ್ನಾಗಿ ಕಲಸಿ. ಈ ಮಿಶ್ರಣವನ್ನು ಮಧ್ಯಮ ಉರಿಯಲ್ಲಿ ಸುಮಾರು 5 ನಿಮಿಷಗಳ ಕಾಲ ಕುದಿಸಿ. ಇನ್ನೊಂದು ಪಾತ್ರೆಯಲ್ಲಿ ಅರ್ಧ ಕಪ್ ಬೆಲ್ಲಕ್ಕೆ ಸ್ವಲ್ಪ ನೀರು ಸೇರಿಸಿ ಬಿಸಿ ಮಾಡಿ. ಬೆಲ್ಲ ಸಂಪೂರ್ಣವಾಗಿ ಕರಗಿದ ನಂತರ ಅದನ್ನು ಸೋಸಿ, ಹಾಲು ಮತ್ತು ಗೋಧಿಯ ಮಿಶ್ರಣಕ್ಕೆ ಸೇರಿಸಿ. ಬೆಲ್ಲವನ್ನು ನೇರವಾಗಿ ಹಾಲಿಗೆ ಸೇರಿಸಿದರೆ ಹಾಲು ಒಡೆಯುವ ಸಾಧ್ಯತೆ ಇರುತ್ತದೆ. ಮಿಶ್ರಣವು ನಿಮಗೆ ಬೇಕಾದಷ್ಟು ದಪ್ಪವಾಗುವವರೆಗೆ ಬೇಯಿಸಿ. ಈಗ ಒಂದು ಸಣ್ಣ ಬಾಣಲೆಯಲ್ಲಿ ಒಂದು ಚಮಚ ತುಪ್ಪ ಬಿಸಿ ಮಾಡಿ. ತುಪ್ಪ ಕಾದ ನಂತರ, ಗೋಡಂಬಿ ಮತ್ತು ಬಾದಾಮಿ ಹಾಕಿ ತಿಳಿ ಕಂದು ಬಣ್ಣ ಬರುವವರೆಗೆ ಹುರಿಯಿರಿ. ನಂತರ ಒಣ ದ್ರಾಕ್ಷಿಗಳನ್ನು ಹಾಕಿ ಹುರಿಯಿರಿ. ಹುರಿದ ಈ ಪದಾರ್ಥಗಳನ್ನು ತಯಾರಾದ ಪಾಯಸಕ್ಕೆ ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿ. ಕೊನೆಯಲ್ಲಿ ಏಲಕ್ಕಿ ಪುಡಿ ಸೇರಿಸಿ. ಇಷ್ಟು ಮಾಡಿದರೆ ಬಿಸಿ ಬಿಸಿಯಾದ ಸಿಹಿ ಗೋಧಿ ಪಾಯಸ ಸಿದ್ಧ. ಇದನ್ನು ಹಬ್ಬ ಹರಿದಿನಗಳಲ್ಲಿ ಅಥವಾ ಸಂಜೆಯ ತಿಂಡಿಯಾಗಿ ತಯಾರಿಸಬಹುದು.

### ಗೋಧಿ ಪಾಯಸ ತಯಾರಿಸಲು ಬೇಕಾಗುವ ಸಾಮಗ್ರಿಗಳು

- ಗೋಧಿ
- ಹಾಲು
- ಬೆಲ್ಲ ಅಥವಾ ಸಕ್ಕರೆ
- ತುಪ್ಪ
- ಗೋಡಂಬಿ
- ಬಾದಾಮಿ
- ಒಣ ದ್ರಾಕ್ಷಿ
- ಏಲಕ್ಕಿ ಪುಡಿ

# ವಿದ್ಯಾರ್ಥಿಗಳ ಗುರಿ ಏನಾಗಿರಬೇಕು



ಮುಗಿಲು ಮುಟ್ಟುವ ಕನಸು ಕಂಡು,
ಮಕ್ಕಳ ಬಾಳಿಗೆ ಬೆಳಕು ಹರಿಸಲು ತಂದೆತಾಯಿ ತೊಟ್ಟ ಹೊರೆ,
ಕಣ್ಣೀರಿನಲ್ಲಿ ನೆನೆಸಿದ ನಂಬಿಕೆಯ ದಾರಿ
ಅದು ವಿದ್ಯೆ,
ಅದು ಗುರಿ,
ಅದು ಬದುಕಿನ ನಿಜ ದೀಪ.
**ಅಕ್ಷರ ಬಿತ್ತಿದಾಗ**
ಹೂವು ಅರಳುವಂತೆ ಜ್ಞಾನ ಬೆಳೆಯಲಿ,
ಶ್ರಮದ ನೀರಿನಿಂದ ಸಾಧನೆಯ ಗಿಡ ಫಲ ಕೊಡುಲಿ.
ಗುರು ನೀಡಿದ ಪಾಠ
ಹೃದಯದ ಮಣಿಮಂಟಪದಲ್ಲಿ ಹೊಳೆಯಲಿ.
**ಆದರೆ...**
ಇಂದಿನ ಕಾಲದ ಹೊಳೆಯುವ ಪರದೆ,
ಆಕರ್ಷಣೆಯ ಮೋಸಮಾರುಕಟ್ಟೆ,
ಕಾಲಹರಣದ ನಶೆ,
ಕಾಮದ ಬಲೆಯಲಿ ಬೀಳುವ ದುರಂತ!
ಮುಗಿಯದ ಪ್ರೇಮದ ನಾಟಕವನು ಆಡುತ್ತ,
ಕಾಲ ಕಳೆದು ಕೊನೆಯಲ್ಲಿ ಕತ್ತಲ ಗವಿಯಲಿ
ಬಾಳ ಕನಸು ಸುಟ್ಟಿಹೋಗುತ್ತಿದೆ.
**ಓ ವಿದ್ಯಾರ್ಥಿ,**
ನಿನ್ನ ಹೃದಯ ಕಲ್ಲಲ್ಲ
ಅದರೊಳಗಿದೆ ಬಾಳ ಶಿಲ್ಪ!
ನಿನ್ನ ಗುರಿ ಹೊಟ್ಟೆಪಾಡಲ್ಲ,
ನಿನ್ನ ಗುರಿ ಹೆಸರಲ್ಲ,
ನಿನ್ನ ಗುರಿ –ಸತ್ಯದ ಹಾದಿ ಹಿಡಿದು
ಮಾನವೀಯತೆಯ ಮಾದರಿಯಾಗುವುದು.
**ಏನು ಮಾಡಬೇಕು**
ಶ್ರದ್ಧೆಯಿಂದ ಅಧ್ಯಯನ,
ಶಿಸ್ತಿನಿಂದ ನಡೆ,
ತಾಯ್ತಂದೆಯ ಕನಸು ಕಾಪಾಡು.
**ಏನು ಮಾಡಬಾರದು**
ಸುಳ್ಳು, ದ್ರೋಹ, ಮದ್ಯ, ವ್ಯಸನ, ಕಾಮದಾಟದ ಕೊಳಕು.
ವಿದ್ಯಾರ್ಥಿ ಜೀವನವೆಂದರೆ
ಸಾವಿನ ಮಂಚವಲ್ಲ,
ಇದು ಬದುಕಿನ ದೀಪಾಲಂಕಾರ!
ಗುರಿಯೆಂದರೆ
ನಿನ್ನೊಳಗಿನ ಮನುಜತನವನ್ನು
ಲೋಕಕ್ಕೆ ದೀಪದಂತೆ ಹರಡುವುದು.

**ರಚನೆ : ಅನಿಲ್ ಕುಮಾರ್**
**ಮ. ತೇಲಂಗಿ ಮುದ್ದೇಬಿಹಾಳ**

# ಕೆ.ಆರ್. ಮಾರುಕಟ್ಟೆ ಸ್ವಚ್ಛತೆಗೆ ನೀಲನಕ್ಷೆ : ರಾಜೇಂದ್ರ ಚೋಳನ್

• ಉದಯವಾಹಿನಿ, ಬೆಂಗಳೂರು



ನಗರದ ಕೆ.ಆರ್. ಮಾರುಕಟ್ಟೆಯ ಸುತ್ತಮುತ್ತಲಿನ ಪ್ರದೇಶದ ಸ್ವಚ್ಛತೆ ಕಾಪಾಡಲು ನೀಲನಕ್ಷೆ ಸಿದ್ಧಪಡಿಸಬೇಕು ಎಂದು ಬೆಂಗಳೂರು ಕೇಂದ್ರ ನಗರ ಪಾಲಿಕೆ ಆಯುಕ್ತ ರಾಜೇಂದ್ರ ಚೋಳನ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕೆ.ಆರ್. ಮಾರುಕಟ್ಟೆಗೆ ಭೇಟಿ ನೀಡಿ ಪರಿಶೀಲಿಸಿದ ಚೋಳನ್, ಕೆ.ಆರ್. ಮಾರುಕಟ್ಟೆಯಲ್ಲಿ ಹೆಚ್ಚು ಹಸಿ ತ್ಯಾಜ್ಯ ಉತ್ಪತ್ತಿಯಾಗುತ್ತಿದೆ. ಅದನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಬೇಕು. ಈ ನಿಟ್ಟಿನಲ್ಲಿ ಸಮಗ್ರ ಯೋಜನೆ ರೂಪಿಸಿ ನೀಲನಕ್ಷೆ ಸಿದ್ಧಪಡಿಸಿ ಹಂತ ಹಂತವಾಗಿ ಅದನ್ನು ಅನುಷ್ಠಾನಗೊಳಿಸಲು ಕ್ರಮವಹಿಸಬೇಕು ಎಂದರು. ಮಾರುಕಟ್ಟೆಯಲ್ಲಿ ನಿತ್ಯ ಸುಮಾರು 70 ಟನ್ ತ್ಯಾಜ್ಯ ಉತ್ಪತ್ತಿಯಾಗುತ್ತಿದೆ.


ಮೂರು ಪಾಳಿಗಳಲ್ಲಿ ತ್ಯಾಜ್ಯ ವಿಲೇವಾರಿ ಮಾಡಲಾಗುತ್ತಿದೆ. ಎಲ್ಲಿಯೂ ತ್ಯಾಜ್ಯ ಬಿಸಾಡದಂತೆ ನೋಡಿಕೊಳ್ಳಬೇಕು. ತ್ಯಾಜ್ಯ ಸಂಗ್ರಹಿಸುವ ಸ್ಥಳವೂ ಸ್ವಚ್ಛವಾಗಿರಬೇಕು. ಮಾರುಕಟ್ಟೆ ಮುಂಭಾಗ ಪಾದಚಾರಿ ಮಾರ್ಗಗಳನ್ನು ಅತಿಕ್ರಮಣ ಮಾಡಿಕೊಂಡು ವ್ಯಾಪಾರ ಮಾಡುತ್ತಿರುವವ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

# ಅಲೋವೆರಾ ಜೆಲ್‌ನ್ನು ಹಣೆಗೆ ಹಚ್ಚೋದ್ರಿಂದ ಒತ್ತಡದ ತಲೆನೋವು ನಿವಾರಣೆಯಾಗುತ್ತಂತೆ

ಅಲೋವೆರಾ ಜೆಲ್‌ನ್ನು ಹಣೆಗೆ ಹಚ್ಚೋದ್ರಿಂದ ತಲೆ ನೋವು ನಿವಾರಣೆಯಾಗುತ್ತಂತೆ. ಈ ಒತ್ತಡದ ತಲೆನೋವಿನ ಲಕ್ಷಣಗಳು ಯಾವುವು ತಿಳಿಯೋಣ. ಅಲೋವೆರಾ ಜೆಲ್‌ನ್ನು ಮುಖಕ್ಕೆ , ಕೂದಲಿಗೆ ಹಚ್ಚೋದನ್ನು ನೀವು ಕೇಳಿರುವಿರಿ. ಆದರೆ ಅಲೋವೆರಾ ಜೆಲ್‌ನ್ನು ಹಣೆಗೆ ಹಚ್ಚೋದ್ರಿಂದ ಒತ್ತಡದಿಂದ ಉಂಟಾಗಿರುವ ತಲೆನೋವನ್ನು ನಿವಾರಿಸಬಹುದಂತೆ. ಒತ್ತಡದ ತಲೆನೋವಿನ ಲಕ್ಷಣಗಳು ಹೇಗಿರುತ್ತವೆ, ಅಲೋವೆರಾ ಜೆಲ್‌ನ್ನು ಯಾವ ರೀತಿ ಹಚ್ಚೋದು ಪ್ರಯೋಜನಕಾರಿ ಎನ್ನುವುದನ್ನು ತಿಳಿಯೋಣ.

**ಒತ್ತಡದ ತಲೆನೋವು ಎಂದರೇನು?:** ಒತ್ತಡದ ತಲೆನೋವು ಎಂದೂ ಕರೆಯಲ್ಪಡುವ ಒತ್ತಡದ ತಲೆನೋವುಗಳು ಸಾಮಾನ್ಯ ರೀತಿಯ ತಲೆನೋವುಗಳಲ್ಲಿ ಸೇರಿವೆ. ಅವು ಹೆಚ್ಚಾಗಿ ತಲೆ ಮತ್ತು ಕುತ್ತಿಗೆ ಪ್ರದೇಶದಲ್ಲಿ ಒತ್ತಡ, ಆತಂಕ ಅಥವಾ ಸ್ನಾಯುಗಳ ಒತ್ತಡದಿಂದ ಪ್ರಚೋದಿಸಲ್ಪಡುತ್ತವೆ. ನೋವು ಸಾಮಾನ್ಯವಾಗಿ ಹಣೆಯ ಸುತ್ತಲೂ ಬಿಗಿಯಾದ ಪಟ್ಟಿಯಂತೆ ಭಾಸವಾಗುತ್ತದೆ ಮತ್ತು ತೀವ್ರತೆಯಲ್ಲಿ ಸೌಮ್ಯದಿಂದ ಮಧ್ಯಮವಾಗಿರುತ್ತದೆ.

**ಸಾಮಾನ್ಯ ಲಕ್ಷಣಗಳು ಇವುಗಳನ್ನು ಒಳಗೊಂಡಿವೆ:** ಮಂದ, ನಿರಂತರ ನೋವು
ತಲೆಯ ಸುತ್ತ ಬಿಗಿತ ಅಥವಾ ಒತ್ತಡ
ಬೆಳಕು ಅಥವಾ ಶಬ್ದಕ್ಕೆ ಸೂಕ್ಷ್ಮತೆ




**ತಲೆನೋವಿಗೆ ಅಲೋವೆರಾದ ಪ್ರಯೋಜನಗಳು:** ಅಲೋವೆರಾವು ಅದರ ಉರಿಯೂತದ, ತಂಪಾಗಿಸುವ ಗುಣಲಕ್ಷಣಗಳಿಗೆ ಹೆಸರುವಾಸಿಯಾಗಿದೆ. ಚರ್ಮಕ್ಕೆ ಅಲೋವೆರಾ ಹಚ್ಚಿದಾಗ, ಇದು ಕಿರಿಕಿರಿಯನ್ನು ಶಮನಗೊಳಿಸಲು, ಕೆಂಪು ಬಣ್ಣವನ್ನು ಕಡಿಮೆ ಮಾಡಲು ಗುಣಪಡಿಸುವಿಕೆಯನ್ನು ಉತ್ತೇಜಿಸಲು ಸಹಾಯ ಮಾಡುತ್ತದೆ. ಸಸ್ಯವು ಚರ್ಮವನ್ನು ಭೇದಿಸಬಲ್ಲ ಜೆಲ್‌ಗಳು ಮತ್ತು ಕಿಣ್ವಗಳನ್ನು ಹೊಂದಿರುತ್ತದೆ.

**ತಂಪಾಗಿಸುವ ಗುಣ ಪರಿಣಾಮ:** ಅಲೋವೆರಾದ ತಂಪಾಗಿಸುವ ಸಂವೇದನೆಯು ಒತ್ತಡದ ತಲೆನೋವಿನೊಂದಿಗೆ ಆಗಾಗ್ಗೆ ಬರುವ ಮಿಡಿಯುವ ನೋವಿಗೆ ತಕ್ಷಣದ ಪರಿಹಾರವನ್ನು ನೀಡುತ್ತದೆ. ನೈಸರ್ಗಿಕ ಜೆಲ್ ಚರ್ಮಕ್ಕೆ ತ್ವರಿತವಾಗಿ ಹೀರಲ್ಪಡುತ್ತದೆ, ಸ್ನಾಯುಗಳ ಒತ್ತಡವನ್ನು ಕಡಿಮೆ ಮಾಡಲು ಮತ್ತು ಹಣೆಯ ಸುತ್ತಲಿನ ಪ್ರದೇಶವನ್ನು ಶಮನಗೊಳಿಸಲು ಸಹಾಯ ಮಾಡುವ ಉಲ್ಲಾಸಕರ ಅನುಭವವನ್ನು ನೀಡುತ್ತದೆ.

**ಉರಿಯೂತವನ್ನು ಕಡಿಮೆ ಮಾಡುವುದು:** ಅಲೋವೆರಾದ ಪ್ರಮುಖ ಅಂಶಗಳಲ್ಲಿ ಒಂದು ಸ್ಯಾಲಿಸಿಲಿಕ್ ಆಮ್ಲ, ಇದು ಉರಿಯೂತದ ಗುಣಲಕ್ಷಣಗಳನ್ನು ಹೊಂದಿದೆ. ತಲೆ ಮತ್ತು ಕುತ್ತಿಗೆಯ ಸುತ್ತಲಿನ ಸ್ನಾಯುಗಳಲ್ಲಿ ಉರಿಯೂತವು ತಲೆನೋವಿಗೆ ಕಾರಣವಾಗಬಹುದು. ಅಲೋವೆರಾ ಉರಿಯೂತವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ, ಪೀಡಿತ ಪ್ರದೇಶಗಳಿಗೆ ಪರಿಹಾರವನ್ನು ನೀಡುತ್ತದೆ.

**ಮನಸ್ಸು ಮತ್ತು ದೇಹವನ್ನು ವಿಶ್ರಾಂತಿ ಮಾಡುತ್ತದೆ:** ಅಲೋವೆರಾದ ಸೌಮ್ಯವಾದ ಸುವಾಸನೆ ಮತ್ತು ತಂಪಾಗಿಸುವ ಪರಿಣಾಮವು ಮನಸ್ಸಿನ ಮೇಲೆ ವಿಶ್ರಾಂತಿ ಪರಿಣಾಮವನ್ನು ಬೀರುತ್ತದೆ. ಇದರ ಪರಿಮಳವನ್ನು ಉಸಿರಾಡುವುದರಿಂದ ನರಮಂಡಲವನ್ನು ಶಾಂತಗೊಳಿಸಲು ಸಹಾಯ ಮಾಡುತ್ತದೆ, ವಿಶ್ರಾಂತಿಯನ್ನು ಉತ್ತೇಜಿಸುತ್ತದೆ ಒತ್ತಡ–ಪ್ರೇರಿತ ತಲೆನೋವಿನ ಸಾಧ್ಯತೆಯನ್ನು ಕಡಿಮೆ ಮಾಡುತ್ತದೆ.



**ತಾಜಾ ಅಲೋವೆರಾ ಜೆಲ್ ಬಳಸಿ:** ನೀವು ಮನೆಯಲ್ಲಿ ಅಲೋವೆರಾ ಸಸ್ಯವನ್ನು ಹೊಂದಿದ್ದರೆ, ಎಲೆಯನ್ನು ಕತ್ತರಿಸಿ ತಾಜಾ ಜೆಲ್‌ಅನ್ನು ಹೊರತೆಗೆಯಿರಿ. ನೀವು ಅಂಗಡಿಯಲ್ಲಿ ಖರೀದಿಸಿದ ಶುದ್ಧ ಅಲೋವೆರಾ ಜೆಲ್ ಅನ್ನು ಬಳಸಬಹುದು. ಸ್ವಲ್ಪ ಪ್ರಮಾಣದ ಜೆಲ್ ಅನ್ನು ತೆಗೆದುಕೊಂಡು ನಿಮ್ಮ ಬೆರಳ ತುದಿಯನ್ನು ಬಳಸಿ ನಿಮ್ಮ ಹಣೆಗೆ ನಿಧಾನವಾಗಿ ಮಸಾಜ್ ಮಾಡಿ. ಹೆಚ್ಚು ಬಲವಾಗಿ ಒತ್ತದಂತೆ ಎಚ್ಚರವಹಿಸಿ. ಅಲೋವೆರಾದ ಮಸಾಜ್ ಒತ್ತಡವನ್ನು ನಿವಾರಿಸಲು ಸಹಾಯ ಮಾಡುತ್ತದೆ.

# ಬಳಿಚಕ್ರ ಬಡಾವಣೆಯ 40ಕ್ಕೂ ಹೆಚ್ಚು ಮನೆಗಳಿಗೆ ನುಗ್ಗಿದ ನೀರು

## 24 ಗಂಟೆಯಲ್ಲಿ ಸಮಸ್ಯೆ ಬಗೆ ಹರಿಸದಿದ್ದರೆ ರಸ್ತೆ ತಡೆದು ಬೃಹತ್ ಪ್ರತಿಭಟನೆ : ಉಮೇಶ್ ಮುದ್ನಾಳ ಎಚ್ಚರಿಕೆ

• ಉದಯವಾಹಿನಿ, ಯಾದಗಿರಿ

ವರುಣನ ಅರ್ಭಟಕ್ಕೆ ಯಾದಗಿರಿ ಜಿಲ್ಲೆ ಅಕ್ಷರಶ ನಲುಗಿ ಹೋಗಿದೆ. ಜಿಲ್ಲೆಯ ಕೆಲ ಭಾಗಗಳಲ್ಲಿ ಸುರಿದ ಭಾರಿ ಮಳೆಗೆ ಸಾರ್ವಜನಿಕರು ಕಂಗಾಲಾಗಿದ್ದು, ಸಾಂಕ್ರಾಮಿಕ ರೋಗದ ಬೀತಿಯಲ್ಲಿ ಬದುಕುವ ಪರಿಸ್ಥಿತಿ ನಿರ್ಮಾಣವಾಗಿದೆ. ಸಂಬಂಧಿಸಿದ ಅಧಿಕಾರಿಗಳು 24 ಗಂಟೆ ಒಳಗಡೆ ಸಮಸ್ಯೆ ಬಗೆಹರಿಸದಿದ್ದರೆ ಮುಖ್ಯ ರಸ್ತೆ ತಡೆದು ಬೃಹತ್ ಹೋರಾಟ ಮಾಡಬೇಕಾಗುತ್ತದೆ ಎಂದು ಸಾಮಾಜಿಕ ಹೋರಾಟಗಾರ ಉಮೇಶ್ ಕೆ ಮುದ್ನಾಳ ಆಕ್ರೋಶ ವ್ಯಕ್ತಪಡಿಸಿದರು.



ಉದಯವಾಹಿನಿ ಚಿತ್ರ

ಸೈದಾಪುರ ಸಮೀಪದ ಬಳಿಚಕ್ರ ಗ್ರಾಮದ ಮುಖ್ಯ ರಸ್ತೆ ಪಕ್ಕದಲ್ಲಿರುವ ಬಡವಣೆಗೆಯಲ್ಲಿ ಸುಮಾರು 40 ಕ್ಕೂ ಹೆಚ್ಚು ಮನೆಗಳಿಗೆ ನೀರು ನುಗ್ಗಿ, ಜನ ಜಾನುವಾರುಗಳು ಪರದಾಡುವಂತಹ ಸ್ಥಿತಿ ನಿರ್ಮಾಣವಾಗಿದೆ. ಏಕಾಏಕಿ ಮನೆಗಳಿಗೆ ನೀರು ನುಗ್ಗಿದ್ದರಿಂದ ಮನೆಯಲ್ಲಿನ ದವಸ ಧಾನ್ಯಗಳು ಹಾಗೂ ಜಾನುವಾರುಗಳಿಗೆ ಶೇಖರಣೆ ಮಾಡಿದ ಮೇವು ಸಂಪೂರ್ಣ ನೀರು ಪಾಲಾಗಿ. ಅಲ್ಲಿನ ಸಾರ್ವಜನಿಕರು ಗುಡಿ ಗುಂಡಾರ ಹಾಗೂ ಸರ್ಕಾರಿ ಶಾಲೆಗಳಲ್ಲಿ ಇರುವಂತ ಪರಿಸ್ಥಿಯ ಬಗ್ಗೆ ಸ್ಥಳೀಯರು ಸಾಮಾಜೀಕ ಹೋರಾಟಗಾರ ಉಮೇಶ ಮುದ್ನಾಳ ಅವರಿಗೆ ಫೋನ್ ಕರೆ ಮೂಲಕ ತಿಳಿಸಿದಾಗ. ಡಿಢೀರನೆ ಬಳಿಚಕ್ರ ಗ್ರಾಮಕ್ಕೆ ಭೇಟಿ ನೀಡಿ ಅಲ್ಲಿನ ವಾಸ್ತವತೆಯನ್ನು ಕಂಡು ಜಿಲ್ಲಾಡಳಿತ ಹಾಗೂ ಸ್ಥಳೀಯ ರಾಜ ಕಾರಣಿಗಳ ವಿರುದ್ಧ ಕೆಂಡಾಮಂಡಲವಾದರು.

**ಜನ ಜೀವನ ಅಸ್ತವ್ಯಸ್ತ**

ಬಳಿಕ ಸಾರ್ಮಜನಿಕರ ಮದ್ಯಯೇ ನಿಂತು ತಾಲೂಕ ಪಂಚಾಯತಿ ಕಾರ್ಯನಿರ್ವಹಕ ಅಧಿಕಾರಿಗಳಿಗೆ ದೂರವಾಣಿ ಕರೆ ಮಾಡಿ, ಮಳೆಯಿಂದಾಗಿ ಜನರು ಪರದಾಡುತ್ತ, ಊಟ ನೀರು ಇಲ್ಲದೇ ಗುಡಿ ಗುಂಡಾರ ಹಾಗೂ ಶಾಲೆಗಳಲ್ಲಿ ವಾಸ ಮಾಡುತಿದ್ದಾರೆ. ಈ ಕೂಡಲೇ ಸ್ಥಳಕ್ಕೆ ಸಂಬಂಧ ಪಟ್ಟ ಅಧಿಕಾರಿಗಳನ್ನು ಕಳಿಸುವಂತೆ ಖಡಕ್ ಎಚ್ಚರಿಗೆ ನೀಡಿದರು. ಜೊತೆಗೆ 24 ಗಂಟೆಗಳ ಒಳಗಡೆ ಮನೆಗಳಿಗೆ ನುಗ್ಗಿದ ಕಲುಶಿತ ನೀರನ್ನು ತೆಗೆದು ಬ್ಲೀಚಿಂಗ್ ಪೌಡರ್ ಸಿಂಪಡಣೆ ಮಾಡಬೇಕು. ಹಾಗೂ ಅಲ್ಲಿನ ಸಾರ್ವಜನಿಕರಿಗೆ ಸಾಂಕ್ರಾಮಿಕ ರೋಗದ ಬೀತಿ ಹೆಚ್ಚಾಗಿದ್ದು, ಅವರಿಗೆಲ್ಲ ಆರೋಗ್ಯ ತಪಾಸಣೆ ಮಾಡಬೇಕು. ಒಂದು ವೇಳೆ ನಿರ್ಲಕ್ಷ್ಯ ತೋರಿದರೆ ಮುಖ್ಯ ರಸ್ತೆ ಬಂದ್ ಮಾಡಿ ಉಗ್ರ ಹೋರಾಟ ಮಾಡುವುದಾಗಿ ತಿಳಿಸಿ, ಅಲ್ಲಿನ ಜನರಿಗೆ ನೀವೇನು ಭಯ ಪಡಬೇಡಿ ನಿಮ್ಮ ಜೊತೆ ನಾನಿದ್ದೇನೆ ಎಂದು ಉಮೇಶ್ ಕೆ. ಮುದ್ನಾಳ ಧೈರ್ಯ ತುಂಬಿದರು.



ಉದಯವಾಹಿನಿ ಚಿತ್ರ

**ಕಂದಾಯ ಇಲಾಖೆ ಅಧಿಕಾರಿಗಳ ಭರವಸೆ**

ಬಳಿಕ ಉಮೇಶ್ ಮುದ್ನಾಳ ಭೇಟಿ ಸುದ್ದಿ ತಿಳಿಯುತಿದ್ದಂತೆ ಕಂದಾಯ ಇಲಾಖೆಯ ಸಿಬ್ಬಂಧಿಗಳು, ಸೈದಾಪುರ ಪೊಲೀಸ್ ಅಧಿಕಾರಿ ಹಾಗೂ ಸಿಬ್ಬಂದಿಗಳು ಸ್ಥಳಕ್ಕೆ ದೌಡಾಯಿಸಿ ನೀವು ಹೇಳಿದ ಹಾಗೆ ನಮ್ಮ ಮೇಲಾಧಿಕಾರಿಗಳ ಗಮನಕ್ಕೆ ತಂದು 24 ಗಂಟೆಯೊಳಗಡೆ ಸಮಸ್ಯೆ ಬಗೆಹರಿಸುವ ಕೆಲಸವನ್ನ ಮಾಡುತ್ತೇವೆ ಎಂದು ಕಂದಾಯ ಇಲಾಖೆ ಅಧಿಕಾರಿಗಳು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಮಾಚರಡ್ಡಿ ಬೋಯಿನ್, ಗುಂಜಲಪ್ಪ, ದೇವಿಂದ್ರ ಬೋಮ್ಮಣ್, ಹಣಮಂತ ಧೋತ್ರೆ, ಬಸವರಾಜ ಬೋಳಿ, ಸಿದ್ದಪ್ಪಗೌಡ, ಯಂಕಪ್ಪ ಬೇಳಿಗೇರಿ, ಭೀಮಣ್ಣ ಭಜಂತ್ರಿ, ನಿಂಗಪ್ಪ ಪೂಜಾರಿ, ವೆಂಕಟೇಶ್ ನಾಯಕ್, ತಾಯಪ್ಪ ಬಿಳ್ಹಾರ್, ಮಶಪ್ಪ ಸಂಜೀವಿನಿ, ಬಸವರಾಜ ನಾಯಕ್, ಮಶಪ್ಪ, ಸಾಬಣ್ಣ, ನರಸಪ್ಪ ಸೇರಿದಂತೆ ಗ್ರಾಮಸ್ಥರು, ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಇದ್ದರು.

# ಸಹಕಾರಿ ಸಂಘಗಳಿಗೆ ಜನರೇ ಆಧಾರಸ್ತಂಭ: ರಂಭಾಪುರಿ ಸ್ವಾಮೀಜಿ

• ಉದಯವಾಹಿನಿ, ಶಿಗ್ಗಾವಿ

ಆರ್ಥಿಕ ಸ್ವಾವಲಂಬನೆಗೆ ಅರ್ಬನ್ ಬ್ಯಾಂಕ್ ಗ್ರಾಹಕರಿಗೆ ಸಹಕಾರಿಯಾಗಿದೆ. ಹೀಗಾಗಿ ಕಳೆದ 25 ವರ್ಷಗಳಿಂದ ಈ ಭಾಗದಲ್ಲಿ ಉತ್ತಮ ಸೇವೆ ಸಲ್ಲಿಸುವ ಮೂಲಕ ಹೆಮ್ಮರವಾಗಿ ಬೆಳೆದು ನಿಂತಿದೆ. ಸಹಕಾರಿ ಸಂಘಗಳಿಗೆ ಸಾರ್ವಜನಿಕರ ಸಹಕಾರವೇ ಆಧಾರ ಸ್ತಂಭವಾಗಿವೆ ಎಂದು ರಂಭಾಪುರಿ ಪೀಠದ ವೀರಸೋಮೇಶ್ವರ ಶಿವಾಚಾರ್ಯ ಸ್ವಾಮೀಜಿ ಹೇಳಿದರು. ಪಟ್ಟಣದ ಅರ್ಬನ್ ಬ್ಯಾಂಕ್ ಸಭಾಭವನದಲ್ಲಿ ಶನಿವಾರ ನಡೆದ ಶಿಗ್ಗಾವಿ ಅರ್ಬನ್ ಕೋ-ಆಪ್ ಬ್ಯಾಂಕಿನ ಬ್ಯಾಂಕ್ ರಜತ ಮಹೋತ್ಸವ, ನವೀಕೃತ ಒಳಾಂಗಣದ ಹಾಗೂ ಮೊದಲ ಮಹಡಿಯ ಉದ್ಘಾಟನಾ ಸಮಾರಂಭಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸಹಕಾರಿ ಸಂಘಗಳ ಮೂಲಕ ಗ್ರಾಮೀಣ ಭಾಗದ ಜನರಿಗೆ ಆರ್ಥಿಕ ನೆರವಾಗುತ್ತಿದೆ. ಹೀಗಾಗಿ ಕೆಲವು ಸಹಕಾರಿ ಸಂಘಗಳು ಉತ್ತಮ ಸೇವೆಯಿಂದಾಗಿ ಬ್ಯಾಂಕ್ ಗಳಾಗಿ ಪರಿವರ್ತನೆ ಹೊಂದಿವೆ. ಸಂಘದ ಏಳೆ ಬಯಸುವ ಮೂಲಕ ಕಂಠಿಣ ಪರಿಶ್ರಮದಿಂದ ಗ್ರಾಹಕರಿಗೆ ಬೇಕು, ಬೇಡಿಕೆಗಳನ್ನು ಈಡೇರಿಸಿದಾಗ ಮಾತ್ರ ಬ್ಯಾಂಕ್ ಗಳ ಅಭಿವೃದ್ಧಿ ಸಾಧ್ಯವಿದೆ ಎಂಬುವುದನ್ನು ಅರ್ಬನ್ ಬ್ಯಾಂಕ್ ಸಾಬೀತು ಪಡಿಸಿದೆ ಎಂದರು.



ಉದಯವಾಹಿನಿ ಚಿತ್ರ

ರಾಜ್ಯ ಗಡಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಸೋಮಣ್ಣ ಬೇವಿನಮರದ ಮಾತನಾಡಿ, ಸಹಕಾರಿ ಸಂಘಗಳನ್ನು ಆರಂಭಿಸುವುದು ಸುಲಭವಾಗಿದೆ. ಆದರೆ ಅವುಗಳ ನಿರ್ವಹಣೆ ಮಾಡಿಕೊಂಡು ಯಶಸ್ವಿ ಪಡೆಯುವುದು ಬಹಳಷ್ಟು ಕಷ್ಟಕರವಾಗಿದೆ. ಅರ್ಬನ್ ಬ್ಯಾಂಕ್ ಅಂತಹ ಸಾಷ್ಟು ಸಮಸ್ಯೆ ಸವಾಲುಗಳನ್ನು ಎದುರಿಸಿಕೊಂಡು ಇಂದು ಬೃಹದಾಕಾರವಾಗಿ ಬೆಳೆದಿರುವುದು ಹರ್ಷದ ಸಂಗತಿ ಎಂದರು.

> ಆರಂಭದಲ್ಲಿ ಬ್ಯಾಂಕ್ ಸಾಕಷ್ಟು ತೊಂದರೆ ಅನುಭವಿಸಿಕೊಂಡು ಬಾಡಿಗೆ ಕಟ್ಟಡದಲ್ಲಿ ನಡೆಸಿಕೊಂಡು ಬಂದು ಈಗ ಸ್ವಂತ ಕಟ್ಟಡ ಹೊಂದಿದೆ. ಅದಕ್ಕೆ ದುರೀಣರ ಶ್ರಮ, ಒಗ್ಗಟ್ಟು ಕಾರಣವಾಗಿದೆ.
>
> – ಡಾ.ಪಿ.ಆರ್.ಪಾಟೀಲ ಅರ್ಬನ್ ಬ್ಯಾಂಕಿನ ಸಂಸ್ಥಾಪಕ ಅಧ್ಯಕ್ಷ

# ಅಭಿವೃದ್ಧಿ ಕೆಲಸ ನಿಲ್ಲದು: ಶಾಸಕ ಪ್ರಭು ಚವಾಣ್

• ಉದಯವಾಹಿನಿ, ಔರಾದ್

ನಾನು ಮಾಡುವ ಸಮಾಜಮುಖಿ ಕಾರ್ಯಕ್ರಮ, ಅಭಿವೃದ್ಧಿ ಕಾರ್ಯಗಳಿಗೆ ಕೆಲವರಿಂದ ನಿರಂತರ ಅಡ್ಡಿ, ಅಡೆತಡೆ ಆಗುತ್ತಿದೆ. ಆದರೂ ಶಿಕ್ಷಕರನ್ನು ಗೌರವಿಸುವಂತಹ ಕಾರ್ಯಕ್ರಮ ಎಂದಿಗೂ ನಿಲ್ಲುವುದಿಲ್ಲ. ಮುಂದೆ ಇದಕ್ಕಿಂತ ದೊಡ್ಡಪ್ರಮಾಣದಲ್ಲಿ ಮಾಡುತ್ತೇನೆ ಎಂದು ಶಾಸಕ ಪ್ರಭು ಚವಾಣ ಹೇಳಿದರು.

ಶಾಲಾ ಶಿಕ್ಷಣ ಇಲಾಖೆ ಇಲ್ಲಿಯ ನಾಗನಾರಪಳ್ಳಿ ಕಲ್ಯಾಣ ಮಂಟಪದಲ್ಲಿ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. 'ಕಳೆದ ಆರು ತಿಂಗಳಿನಿಂದ ನನಗೆ ನಿರಂತರ ಮಾನಸಿಕ ಕಿರುಕುಳ ಕೊಟ್ಟು ಅಭಿವೃದ್ಧಿ ಕಾರ್ಯಗಳಿಗೆ ಹಿನ್ನಡೆಯಾಗುವಂತೆ ಮಾಡಲಾಗುತ್ತಿದೆ. ಆದರೆ ಇದನ್ನೆಲ್ಲ ಮೆಟ್ಟಿ ನಿಲ್ಲುವ ಶಕ್ತಿ ನನಗೆ ದೇವರು ನೀಡಿದ್ದಾನೆ. ಯಾರು ಏನೇ ಮಾಡಿದರೂ ತಾಲ್ಲೂಕಿನ ಜನ ಮಾತ್ರ ನನ್ನ ಜತೆ ಇದ್ದಾರೆ. ಕಳೆದ 17 ವರ್ಷಗಳಲ್ಲಿ ತಾಲ್ಲೂಕಿನ ಅಭಿವೃದ್ಧಿ ಎಷ್ಟು ಆಗಿದೆ ಎಂದು ಎಲ್ಲರಿಗೂ ಚೆನ್ನಾಗಿ ಗೊತ್ತಿದೆ. ಇಲ್ಲಿ ಶಿಕ್ಷಕರು ಚೆನ್ನಾಗಿ ಕೆಲಸ ಮಾಡುತ್ತಿದ್ದಾರೆ. ಫಲಿತಾಂಶದಲ್ಲೂ ಸುಧಾರಣೆಯಾಗಿದೆ. ಉತ್ತಮ ಕೆಲಸ ಮಾಡಿದವರನ್ನು ಗೌರವಿಸುವುದು ನನ್ನ ಜವಾಬ್ದಾರಿ. ತಾಲ್ಲೂಕಿನ 3 ಸಾವಿರ ಶಿಕ್ಷಕರು ಇಂದಿನ ಕಾರ್ಯಕ್ರಮಕ್ಕೆ ಬಂದಿರುವುದು ತುಂಬಾ ಸಂತಸವಾಗಿದೆ' ಎಂದರು. ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಜೆ.ರಂಗೇಶ್ ಮಾತನಾಡಿ, ಶಾಸಕರು ತಾಲ್ಲೂಕಿನ ಶಿಕ್ಷಕರ ಬಗ್ಗೆ ತುಂಬಾ ಗೌರವ ಇಟ್ಟುಕೊಂಡಿದ್ದಾರೆ. ಅವರ ಮಾರ್ಗದರ್ಶನದಲ್ಲಿ ತುಂಬಾ ಅಚ್ಚುಕಟ್ಟಾಗಿ ಕಾರ್ಯಕ್ರಮ ಆಗಿದೆ. ಎಲ್ಲಾ ಶಿಕ್ಷಕರನ್ನು ವೇದಿಕೆಗೆ ಕರೆಸಿ ಗೌರವಿಸುವ ಇಂತಹ ಕಾರ್ಯಕ್ರಮ ನಿಜಕ್ಕೂ ಹೆಮ್ಮೆಪಡುವಂತಹದ್ದು ಎಂದರು.



ಉದಯವಾಹಿನಿ ಚಿತ್ರ

# ರೌಡಿಶೀಟರ್‌ಗಳ ಮನೆ ಮೇಲೆ ನಸುಕಿನ ಜಾವ ದಾಳಿ

• ಉದಯವಾಹಿನಿ, ಕಲಬುರಗಿ

ನಗರ ಪೊಲೀಸ್ ಆಯುಕ್ತಾಲಯದ ವ್ಯಾಪ್ತಿಯಲ್ಲಿನ ರೌಡಿಶೀಟರ್‌ಗಳ ಮನೆ ಮೇಲೆ ನಸುಕಿನ ಜಾವ ದಾಳಿ ನಡೆಸಿದ ಪೊಲೀಸ್ ಅಧಿಕಾರಿಗಳು, ಸಿಬ್ಬಂದಿ ಶೋಧ ನಡೆಸಿದರು. ನಗರ ಪೊಲೀಸ್ ಕಮಿಷನರ್ ಶರಣಪ್ಪ ಎಸ್.ಡಿ. ಅವರ ನಿರ್ದೇಶನದಂತೆ ರೌಡಿಶೀಟರ್‌ಗಳ ಚಟುವಟಿಕೆಗಳ ಮೇಲೆ ನಿಗಾವಹಿಸಲು ಈ ದಾಳಿ ನಡೆಸಲಾಗಿದೆ.

ಕಲಬುರಗಿ ನಗರದಲ್ಲಿ ಒಟ್ಟು 250 ರೌಡಿಶೀಟರ್ ಮನೆ ಮೇಲೆ ದಾಳಿ ನಡೆಸಲಾಗಿದ್ದು, ಯಾವುದೇ ರೀತಿಯ ಆಯುಧಗಳು ಸಿಕ್ಕಿಲ್ಲ. ಯಾವುದೇ ಅಕ್ರಮ ಚಟುವಟಿಕೆಗಳಲ್ಲಿ ತೊಡಗದಂತೆ ಹಾಗೂ ಸನ್ನಡತೆಯಿಂದ ಜೀವನ ನಡೆಸುವಂತೆ ಈ ಸಂದರ್ಭದಲ್ಲಿ ರೌಡಿಶೀಟರ್‌ಗಳಿಗೆ ಎಚ್ಚರಿಕೆ ನೀಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಎಸಿಪಿ ದಕ್ಷಿಣ ಉಪವಿಭಾಗ ಪೊಲೀಸ್ ಠಾಣೆ ವ್ಯಾಪ್ತಿಯ 5 ರೌಡಿಶೀಟರ್‌ಗಳ ಮನೆ, ಎಸಿಪಿ ಉತ್ತರ ಉಪವಿಭಾಗ ಠಾಣೆ ವ್ಯಾಪ್ತಿಯ 7 ಮನೆ, ಎಸಿಪಿ ಸಬರ್ಬನ್ ಉಪವಿಭಾಗ ಠಾಣೆ ವ್ಯಾಪ್ತಿಯ 6, ಎಸಿಪಿ ಸಿಸಿಬಿ ಉಪವಿಭಾಗ ಠಾಣೆ ವ್ಯಾಪ್ತಿಯ 13, ಸ್ಟೇಷನ್ ಬಜಾರ್ ಠಾಣೆ ವ್ಯಾಪ್ತಿಯ 27, ಅಶೋಕ ನಗರ ಠಾಣೆ ವ್ಯಾಪ್ತಿಯ 27, ರಾಘವೇಂದ್ರ ನಗರ ಠಾಣೆ ವ್ಯಾಪ್ತಿಯ 21, ಬ್ರಹ್ಮಪೂರ ಠಾಣೆ ವ್ಯಾಪ್ತಿಯ 18, ಚೌಕ ಠಾಣೆ ವ್ಯಾಪ್ತಿಯ 21, ರೋಜಾ ಠಾಣೆ ವ್ಯಾಪ್ತಿಯ 22, ಎಂ.ಬಿ ನಗರ ಠಾಣೆ ವ್ಯಾಪ್ತಿಯ 20, ಸಬರ್ಬನ್ ಠಾಣೆ ವ್ಯಾಪ್ತಿಯ 22, ವಿಶ್ವವಿದ್ಯಾಲಯ ಠಾಣೆ ವ್ಯಾಪ್ತಿಯ 24, ಫರಹತಾಬಾದ್ ಠಾಣೆ ವ್ಯಾಪ್ತಿಯ 17 ರೌಡಿಶೀಟರ್‌ಗಳ ಮನೆಗಳ ಮೇಲೆ ದಾಳಿ ನಡೆಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.



# ಸಂಸ್ಕಾರವಂತ ಸಾಹಿತಿಗಳ ಸಾಂಗತ್ಯ ಬೆಳೆಸಿ: ವೀರಣ್ಣ ಚರಂತಿಮಠ

• ಉದಯವಾಹಿನಿ, ಬಾಗಲಕೋಟೆ

ಯುವ ಸಾಹಿತಿಗಳು ವಿವಾದಾತ್ಮಕ ಸಾಹಿತಿಗಳ ಸಹವಾಸದಿಂದ ದೂರವಿದ್ದು, ಸಂಸ್ಕಾರವಂತ ಸಾಹಿತಿಗಳ ಸಹವಾಸ ಬೆಳೆಸಿಕೊಳ್ಳಬೇಕು ಎಂದು ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ ಹೇಳಿದರು. ನಗರದ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘ ಹಾಗೂ ಬೆಂಗಳೂರಿನ ಅಜೀಂ ಪ್ರೇಮ್‌ಜಿ ವಿಶ್ವವಿದ್ಯಾಲಯದ ಸಹಯೋಗದಲ್ಲಿ ನಡೆದ ತನ್ನ ತಾನರಿದು ತಾನಾದಡೆ ವಚಕಾರ್ತಿಯರ ಲೋಕದೃಷ್ಟಿ ಸಾಹಿತ್ಯ ಸಹವಾಸ ಸಾಹಿತ್ಯಕ ಸರಣಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಕೆಲ ಸಾಹಿತಿಗಳು ಪ್ರತಿ ವಿಷಯದಲ್ಲೂ ವಿವಾದಾತ್ಮಕ ಹೇಳಿಕೆಗಳನ್ನು ನೀಡಿ ಸಮಾಜ ವ್ಯವಸ್ಥೆಯನ್ನು ಕಲುಷಿತಗೊಳಿಸುವ ಮೂಲಕ ತಮ್ಮ ಜನಪ್ರಿಯತೆಯ ವಿಕೃತಿ ಮೆರೆಯುತ್ತಿದ್ದಾರೆ. ಇದು ಭವಿಷ್ಯದ ಯುವ ಸಾಹಿತಿಗಳು ಹಾಗೂ ವಿದ್ಯಾರ್ಥಿಗಳಿಗೆ ಮಾರಕವಾಗಲಿದೆ. ಹೀಗಾಗಿ ಯುವ ಸಾಹಿತಿಗಳು ಇಂತಹ ಸಾಹಿತಿಗಳ ಸಹವಾಸಕ್ಕೆ ಹೋಗಬಾರದು ಎಂದರು.



ಉದಯವಾಹಿನಿ ಚಿತ್ರ

ವಚನಸಾಹಿತ್ಯ, ದಾಸಸಾಹಿತ್ಯ ಮತ್ತು ಜಾನಪದ ಸಾಹಿತ್ಯ ಕನ್ನಡ ಭಾಷೆ ಶ್ರೀಮಂತಗೊಳಿಸಿ ಪ್ರಪಂಚಕ್ಕೆ ಪರಿಚಯಿಸುವ ಕಾರ್ಯ ಮಾಡಿವೆ. ಪ್ರಪಂಚದ ಸಾಹಿತ್ಯದಲ್ಲಿ ವಚನ ಸಾಹಿತ್ಯಕ್ಕೆ ಅಗ್ರಸ್ಥಾನವಿದ್ದು ಅಂತಹ ಕನ್ನಡ ವಚನಕಾರ್ತಿಯರ ಲೋಕದೃಷ್ಟಿ ಹಿನ್ನೆಲೆ ಇಟ್ಟುಕೊಂಡು ಇಂತಹ ಕಾರ್ಯಕ್ರಮ ಆಯೋಜಿಸಿರುವುದು ಅರ್ಥಪೂರ್ಣವಾಗಿದೆ ಎಂದು ಹೇಳಿದರು.

ಬೆಂಗಳೂರಿನ ಅಜೀಂ ಪ್ರೇಮ್‌ಜಿ ಫೌಂಡೇಷನ್ ಮುಖ್ಯ ಸಂವಹನಾಧಿಕಾರಿ ಸುಧೀಶ ವೆಂಕಟೇಶ ಪ್ರಾಸ್ತಾವಿಕ ಮಾತನಾಡಿ, ಫೌಂಡೇಷನ್‌ದಿಂದ ಹಮ್ಮಿಕೊಂಡಿರುವ ಸಮಾಜಮುಖಿ ಕಾರ್ಯಕ್ರಮಗಳ ಬಗ್ಗೆ ತಿಳಿಸಿದರು.

> ವಚನಕಾರ್ತಿಯರು ನುಡಿದಂತೆ ನಡೆದು, ಕಾಯಕವೇ ಕೈಲಾಸ ಮತ್ತು ಸಮಾನತೆಯ ಚಿಂತನೆಗಳನ್ನು ಶಿವಶರಣರ ಸಮಾನವಾಗಿ ತರ್ಕಿಸುವಷ್ಟು ಎತ್ತರಕ್ಕೆ ಬೆಳೆದಿದ್ದರು.
>
> –ಡಾ.ಅಮರೇಶ ನುಗಡೋಣಿ ನಿವೃತ್ತ ಪ್ರಾಧ್ಯಾಪಕ

# ಲಿಂಗಾಯತ ಧರ್ಮ ಸ್ಥಾಪನೆ ನಾಟಕ ಕಂಪನಿ ನಡೆಸಿದಂತಲ್ಲ

• ಉದಯವಾಹಿನಿ, ಹುಬ್ಬಳ್ಳಿ:

ಲಿಂಗಾಯತ ಧರ್ಮ ಸ್ಥಾಪನೆ ನಾಟಕ ಕಂಪನಿ ನಡೆಸಿದಷ್ಟು ಸುಲಭವಲ್ಲ. 'ಬಸವ ಸಂಸ್ಕೃತಿ ಯಾತ್ರೆ' ಎಂಬ ನಾಟಕ ಕಂಪನಿಯ ಪಾತ್ರದಾರಿಗಳನ್ನು ಅದರ ಮ್ಯಾನೇಜರ್ ಎಸ್.ಎಂ. ಜಾಮದಾರ ದಾರಿ ತಪ್ಪಿಸುತ್ತಿದ್ದಾರೆ' ಎಂದು ಶಿರಹಟ್ಟಿಯ ಫಕೀರ ದಿಂಗಾಲೇಶ್ವರ ಸ್ವಾಮೀಜಿ ಆರೋಪಿಸಿದರು. 'ಮಹಾವೀರ, ಬುದ್ಧನ ರೀತಿ ಬಸವ ಧರ್ಮ ಸ್ಥಾಪನೆ ಮಾಡಬೇಕು. ಅದಕ್ಕೆ ಯಾರ ವಿರೋಧವಿಲ್ಲ. ಆದರೆ, ಬಸವಣ್ಣನವರ ಹೆಸರು ಹೇಳಿಕೊಂಡ ವೀರಶೈವ ಲಿಂಗಾಯತರು, ಅಖಂಡ ಸಮಾಜವನ್ನು ಒಡೆಯಲು ಮುಂದಾಗಿರುವುದು ಸರಿಯಲ್ಲ' ಎಂದು ಹೇಳಿದರು.

ಅವರು ಇಲ್ಲಿ ಪತ್ರಿಕಾಗೋಷ್ಠಿಯಲ್ಲಿ ಹೇಳಿದ್ದು. 'ಸಾಣೇಹಳ್ಳಿಯ ಪಂಡಿತಾರಾಧ್ಯ ಶಿವಾಚಾರ್ಯರು ಸೇರಿ ಇತರ ಶ್ರೀಗಳು ಇಂಗ್ಲಿಷ್ ಸಂಸ್ಕೃತಿಯ ನಿವೃತ್ತ ಐಎಎಸ್ ಅಧಿಕಾರಿ ಮಾರ್ಗದರ್ಶನದಲ್ಲಿ ಹೋಗಿ ಸಮಾಜ ಸರ್ವನಾಶ ಮಾಡುತ್ತಿದ್ದಾರೆ. 'ಜಾತ್ಯತೀತ ಧರ್ಮ ಸ್ಥಾಪನೆ ಮಾಡುತ್ತೇವೆ ಎಂದು ಬಸವ ಸಂಸ್ಕೃತಿ ಯಾತ್ರೆಯಲ್ಲಿ ಹೇಳಿದ್ದಾರೆ. ಅದರಲ್ಲಿದ್ದ ಸ್ವಾಮೀಜಿಗಳು ಒಂದೊಂದು ಜಾತಿ ಪ್ರತಿನಿಧಿಸುವ ಮಠಗಳ ಪೀಠಾಧಿಪತಿಗಳು, ಸಾಣೇಹಳ್ಳಿ ಶ್ರೀ ಅವರ ಮಠಕ್ಕೆ ಯಾವ ಜಾತಿ ವಟುವನ್ನು ಉತ್ತರಾಧಿಕಾರಿಯಾಗಿ ಮಾಡಿಕೊಳ್ಳುತ್ತಾರೆ

'ಪಂಚಪೀಠಗಳು ಬಸವಣ್ಣನನ್ನು ವಿರೋಧಿಸಿದ್ದು ಸತ್ಯ. ಪಂಚಾಚಾರ್ಯರು, ಪಂಚಪೀಠಗಳು ಬದಲಾವಣೆಯಾಗಲು ಈಗ ಕಾಲ ಸನ್ನಿಹಿತವಾಗಿದೆ.



ನಾನು ಗೋಸುಂಬೆಯಂತೆ ಬಣ್ಣ ಬದಲಾಯಿಸುತ್ತೇನೆ ಎಂದಿರುವ ಪಂಡಿತಾರಾಧ್ಯ ಶಿವಾಚಾರ್ಯರಿಗೆ, ತಾವು ಇಡೀ ಸಮಾಜದ ದಾರಿ ತಪ್ಪಿಸುತ್ತಿದ್ದೇವೆ ಎಂಬುದು ಅರಿವಿಗೆ ಬರಬೇಕು.

'ಅಖಿಲ ಭಾರತ ವೀರಶೈವ, ಲಿಂಗಾಯತ ಮಹಾಸಭಾ ಒಡೆಯುವ ಹುಚ್ಚು ಸಾಹಸ ಬೇಡ. ಅಲ್ಲಿ ಭೀಷ್ಮನಂತೆ ಶಾಮನೂರು ಶಿವಶಂಕರಪ್ಪ, ಅರ್ಜುನನಂತೆ ಈಶ್ವರ ಖಂಡ್ರೆ, ಭೀಮನಂತಹ ಶಂಕರ ಬಿದರಿ ಸೇರಿ ಅನೇಕ ಸ್ವಾಮೀಜಿಗಳಿದ್ದಾರೆ. ಅವರು ನಿಮ್ಮಂತಹ ಕೌರವರ ಪಾತ್ರಕ್ಕೆ ಅವಕಾಶ ನೀಡುವುದಿಲ್ಲ. ವೀರಶೈವ ಲಿಂಗಾಯತ ಪ್ರತ್ಯೇಕ ಧರ್ಮವಾದರೂ ನಾವೆಲ್ಲ ಹಿಂದೂ ಧರ್ಮದವರು. ಸೌಲಭ್ಯಗಳಿಗಾಗಿ ಇತ್ತೀಚೆಗೆ ಧರ್ಮಗಳು ಸ್ಥಾಪನೆಯಾಗಿವೆ' ಎಂದು ಸ್ವಾಮೀಜಿ ಹೇಳಿದರು.

> 2017-18ರಲ್ಲಿ ಎಂಟು ಜನ ಸಚಿವರು ವಿವಿಧ ಸ್ವಾಮೀಜಿಗಳಿಂದಲೇ ಪ್ರತ್ಯೇಕ ಲಿಂಗಾಯತ ಧರ್ಮ ಸ್ಥಾಪನೆ ಮಾಡಲು ಸಾಧ್ಯವಾಗಲಿಲ್ಲ. ಈಗ 'ಚಿಯಾ ಮಿಯಾ'ಗಳಿಂದ ಅದು ಅಸಾಧ್ಯ.
>
> –ದಿಂಗಾಲೇಶ್ವರ ಸ್ವಾಮೀಜಿ, ಶಿರಹಟ್ಟಿ

**ವೀರಶೈವ-ಲಿಂಗಾಯತ ಒಂದೇ: ಚರಂತಿಮಠ**

ವೀರಶೈವ-ಲಿಂಗಾಯತ ಎರಡೂ ಒಂದೆ. ಬೇರೆ ಬೇರೆ ಎನ್ನುವವರಿಗೆ ನಾವೇನು ಹೇಳಲಾಗದು ಎಂದು ಮಾಜಿ ಶಾಸಕ ವೀರಣ್ಣ ಚರಂತಿಮಠ ಹೇಳಿದರು. ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, 'ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಸಂದರ್ಭದಲ್ಲಿ ಧರ್ಮ ಹಿಂದೂ ಎಂದು, ಜಾತಿ ವೀರಶೈವ ಲಿಂಗಾಯತ ಎಂದು ಬರೆಸಲಾಗುವುದು' ಎಂದರು.

'ಕೆಲ ಸ್ವಾಮೀಜಿಗಳು ಲಿಂಗಾಯತ ಪ್ರತ್ಯೇಕ ಧರ್ಮ, ಸಮೀಕ್ಷೆಯಲ್ಲಿ ಲಿಂಗಾಯತ ಎಂದು ಬರೆಸಲು ಕರೆ ನೀಡಿರುವ ಪ್ರಶ್ನೆಗೆ, 'ಹೊತ್ತು ಬಂದಾಗೊಂದು ಹೇಳುವವರಿಗೆ ಉತ್ತರ ಕೊಡುವುದು ಅಸಾಧ್ಯ' ಎಂದರು. 'ವೀರಶೈವ ಪದಕ್ಕೆ ನೂರಾರು ವರ್ಷದ ಇತಿಹಾಸವಿದೆ. ಗದುಗಿನ ಮಠದಲ್ಲಿ ಹಿಂದೆ ವೀರಶೈವ ಅಧ್ಯಯನ ಸಂಸ್ಥೆ, ವೀರಶೈವ ಪ್ರಗತಿಶೀಲ ಸಂಘ, ವೀರಶೈವ ಪುಣ್ಯವಂತರ ಸಾಹಿತ್ಯ ರತ್ನಮಾಲೆ ಇತ್ತು' ಎಂದರು.

# ಮತಪಟ್ಟಿ ದೋಷ, ಮತ ಕಳವು ಪರಿಶೀಲಿಸಿ

• ಉದಯವಾಹಿನಿ, ವಿಜಯಪುರ

ಮತದಾರರ ಪಟ್ಟಿಯಲ್ಲಿರುವ ದೋಷ ಮತ ಕಳವು ಕುರಿತು ಪಕ್ಷದ ಎಲ್ಲಾ ಪದಾಧಿಕಾರಿಗಳು, ಕಾರ್ಯಕರ್ತರು ಸ್ವಯಂ ಪ್ರೇರಣೆಯಿಂದ ಮತದಾರರ ಪಟ್ಟಿಯನ್ನು ಪರಿಶೀಲಿಸಬೇಕು. ಮನೆ ಮನೆಗೆ ತೆರಳಿ ಮತದಾರರನ್ನು ಜಾಗೃತಗೊಳಿಸಬೇಕು ಎಂದು ಕೆ.ಪಿ.ಸಿ.ಸಿ. ಸೇವಾದಳದ ರಾಜ್ಯ ಅಧ್ಯಕ್ಷ ಎಂ. ರಾಮಚಂದ್ರಪ್ಪ ಹೇಳಿದರು. ನಗರದ ಜಿಲ್ಲಾ ಕಾಂಗ್ರೆಸ್ ಕಾರ್ಯಾಲಯದಲ್ಲಿ ಜಿಲ್ಲಾ ಕಾಂಗ್ರೆಸ್ ಸೇವಾದಳ ಸಮಿತಿಯ ಜಿಲ್ಲಾ ಹಾಗೂ ಬ್ಲಾಕ್ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷರು, ಪದಾಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು.

ಚುನಾವಣಾ ಆಯೋಗದ ಹಾಗೂ ಬಿಜೆಪಿಯವರ ಕುತಂತ್ರಗಳನ್ನು ಬಯಲುಗೊಳಿಸುವ ಮೂಲಕ ಜನರಲ್ಲಿ ವಿಶ್ವಾಸ ಮೂಡಿಸಿ, ಮುಂಬರುವ ಎಲ್ಲಾ ಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷ ಸದೃಢವಾಗಿ ಬೆಳೆಸಲು ಆದ್ಯತೆ ನೀಡಬೇಕು ಎಂದು ಹೇಳಿದರು. ಸೇವಾ ದಳದಿಂದ ಮುಂದಿನ ತಿಂಗಳು ವಿಜಯಪುರ ಜಿಲ್ಲೆಯಲ್ಲಿ ಮೂರು ದಿನದ ಬೃಹತ್ ತರಬೇತಿ ಕಾರ್ಯಕ್ರಮ ಆಯೋಜಿಸಲಾಗುವುದು. ಈ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು, ವಿಧಾನ ಪರಿಷತ್ ಸದಸ್ಯರು ಪಾಲ್ಗೊಳ್ಳಲಿದ್ದಾರೆ. ಆ ತರಬೇತಿ ಶಿಬಿರವನ್ನು ಯಶಸ್ವಿಗೊಳಿಸಬೇಕು ಎಂದರು. ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ಲೋಣಿ ಮಾತನಾಡಿ, ಪಕ್ಷ ಸಂಘಟನೆಯಲ್ಲಿ ತಾವೆಲ್ಲರೂ ಪ್ರಾಮಾಣಿಕತೆಯಿಂದ ದುಡಿದರೆ ಪಕ್ಷ ನಿಮ್ಮನ್ನು ಮುಂದೊಂದು ದಿನ ಗುರುತಿಸಿ ನಿಮಗೆ ಉತ್ತಮ ಸ್ಥಾನಮಾನ ಕೊಟ್ಟೆ ಕೊಡುತ್ತದೆ ಎಂದರು.



ಉದಯವಾಹಿನಿ ಚಿತ್ರ

ಕಾಂಗ್ರೆಸ್ ಪಕ್ಷದಲ್ಲಿ ಜಾತಿ, ಭೇದ ಭಾವ ಯಾವುದೇ ಇಲ್ಲ. ಇಲ್ಲಿ ರಾಷ್ಟ್ರ, ರಾಜ್ಯದ ಒಳತಿಗಾಗಿ ಸರ್ವಜನರ ಹಿತಾಶಕ್ತಿ ಕಾಪಾಡುವುದರ ಜೊತೆಗೆ ಸರ್ವರಿಗೂ ಸಮಪಾಲು, ಸಮಬಾಳು ಎನ್ನುವ ಸಿದ್ಧಾಂತಗಳೊಂದಿಗೆ ಜನರ ಒಳಿತು ಮಾಡುವ ಪಕ್ಷ ಯಾವುದಾದರೂ ಇದ್ದರೆ ಅದು ಕಾಂಗ್ರೆಸ್ ಪಕ್ಷ ಮಾತ್ರ ಎಂದರು.

ನಿಷ್ಠೆ ಹಾಗೂ ಶಿಸ್ತಿನಿಂದ ಪಕ್ಷದ ಸಂಘಟನೆ ಮಾಡುವುದರ ಮೂಲಕ ಮುಂಬರುವ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಸ್ಥಳೀಯ ಸಂಸ್ಥೆಯ ಚುನಾವಣೆಗಳಲ್ಲಿ ಪಕ್ಷ ಜಯಬೇರಿ ಬಾರಿಸಲು ಮತ್ತು ಜನಸಾಮಾನ್ಯರಿಗೆ ನ್ಯಾಯ ಒದಗಿಸಿಕೊಡುವ ಕೆಲಸ ಮಾಡೋಣ ಎಂದು ಹೇಳಿದರು.

# ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರಿಂದ ಸಮೀಕ್ಷೆ ಕಾರ್ಯಕ್ಕೆ ಚಾಲನೆ


## ಸೆ.15 ರಿಂದ ಲಿಂಗತ್ವ ಅಲ್ಪಸಂಖ್ಯಾತ ಹಾಗೂ ಮಾಜಿ ದೇವದಾಸಿ ಮಹಿಳೆಯರ ಸಮೀಕ್ಷೆ

• ಉದಯವಾಹಿನಿ, ಚಿತ್ರದುರ್ಗ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ಸೆ.15 ರಿಂದ 45 ದಿನಗಳ ಕಾಲ ಜಿಲ್ಲೆಯಲ್ಲಿ ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆ ಹಾಗೂ ಮಾಜಿ ದೇವದಾಸಿ ಮಹಿಳೆಯರ ಮರುಸಮೀಕ್ಷೆ ನಡೆಸಲಾಗುತ್ತಿದೆ. ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸಮೀಕ್ಷೆ ಕುರಿತಾದ ಪೋಸ್ಟರ್‌ಗಳನ್ನು ಬಿಡುಗಡೆಗೊಳಿಸುವ ಮೂಲಕ ಸಮೀಕ್ಷೆ ಕಾರ್ಯಕ್ಕೆ ಚಾಲನೆ ನೀಡಿದರು.

ಲಿಂಗತ್ವ ಅಲ್ಪಸಂಖ್ಯಾತರು, ಮಾಜಿ ದೇವದಾಸಿಯರು ಹಾಗೂ ಅವರ ಅವಲಂಬಿತ ಮಕ್ಕಳ ಸಾಮಾಜಿಕ ಆರ್ಥಿಕ ಸ್ಥಿತಿಗತಿ ಕುರಿತಂತೆ ನಿಖರ ಮಾಹಿತಿ ಸಂಗ್ರಹಿಸಿ, ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಪುನರ್ ವಸತಿ ಕಲ್ಪಿಸಲು ಸಮೀಕ್ಷೆ ನಡೆಸಲಾಗುತ್ತಿದೆ. ಸಂಬಂಧಪಟ್ಟವರು ಸಮೀಕ್ಷೆಯಿಂದ ಹೊರ ಗುಳಿಯಬಾರದು.

ಸಮೀಕ್ಷೆ ನಡೆಸಲು ಈಗಾಗಲೇ ಅಗತ್ಯ ಇರುವ ಪೂರ್ವ ತಯಾರಿಗಳನ್ನು ಮಾಡಿಕೊಳ್ಳಲಾಗಿದೆ. ಸಮೀಕ್ಷೆಯನ್ನು ಸೆ. 15 ರಿಂದ ಆರಂಭಿಸಿ 45 ಕಚೇರಿ ಕೆಲಸದ ದಿನಗಳಲ್ಲಿ ಮುಕ್ತಾಯ ಗೊಳಿಸಲಾಗುವುದು. ಲಿಂಗತ್ವ ಅಲ್ಪಸಂಖ್ಯಾತರ ಸಮೀಕ್ಷೆಗೆ 'KARMANI' web application ಸಿದ್ದಪಡಿಸಲಾಗಿದೆ. ಲಿಂಗತ್ವ ಅಲ್ಪಸಂಖ್ಯಾತರ ಸಮುದಾಯದವರ ಮೂಲಕವೇ ಸಮೀಕ್ಷೆ ಕಾರ್ಯ ಕೈಗೊಳ್ಳುತ್ತಿರುವುದು ಈ ಸಮೀಕ್ಷೆಯ ವಿಶೇಷತೆಯಾಗಿದೆ. ಸೆ.15 ರಿಂದ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ಸಮೀಕ್ಷೆದಾರರು ಬೆಳಿಗ್ಗೆ 9 ರಿಂದ ಸಂಜೆ 6 ಗಂಟೆಯ ವರೆಗೆ ಸಮೀಕ್ಷೆ ಕಾರ್ಯ ನಿರ್ವಹಿಸಲಿದ್ದು, ಲಿಂಗತ್ವ ಅಲ್ಪಸಂಖ್ಯಾತರು ಯಾವುದೇ ಗೊಂದಲಗಳಿಗೆ ಒಳಗಾಗದೇ ಸ್ಪಷ್ಟ ಹಾಗೂ ನಿಖರ ಮಾಹಿತಿಯನ್ನು ನೀಡಬೇಕು.



ಉದಯವಾಹಿನಿ ಚಿತ್ರ

**ನಿಖರ ಮಾಹಿತಿ ನೀಡಬೇಕು**

ಇದೇ ವೇಳೆ ಲಿಂಗತ್ವ ಅಲ್ಪಸಂಖ್ಯಾತರ ಸಮೀಕ್ಷೆ ನಡೆಸುವ ಗಣತಿದಾರರಿಗೆ ಟ್ಯಾಬ್‌ಗಳನ್ನು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ವಿತರಿಸಿದರು. ಮಹಿಳಾ, ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ವಿಜಯ್‌ಕುಮಾರ್, ಲಿಂಗತ್ವ ಅಲ್ಪಸಂಖ್ಯಾತ ಸಮುದಾಯದ ಸಮರ ಸಾರಥಿ ಸಂಸ್ಥೆಯ ಅಧ್ಯಕ್ಷೆ ಚಂದ್ರಮ್ಮ, ವಾಹಿನಿ ಸಮುದಾಯ ಸಂಸ್ಥೆಯ ಉಪಾಧ್ಯಕ್ಷ ಪುಟ್ಟರಾಜು, ಆರುಂಧತಿ, ಈರಣ್ಣ, ಅವಂತಿಕಾ, ಅಮೂಲ್ಯ, ಮಂಜು, ಬಾಷಾಸಾಬ್, ಪಲ್ಲವಿ ಉಪಸ್ಥಿತರಿದ್ದರು.

> ಮಾಜಿ ದೇವದಾಸಿ ಮಹಿಳೆಯರು, ಅವರ ಅವಲಂಬಿತ ಮಕ್ಕಳ ಸಮೀಕ್ಷೆ ಸೇವಾಸಿಂಧು ಮೂಲಕ ನಡೆಯಲಿದ್ದು, ಇದಕ್ಕಾಗಿ ವೆಬ್ ಅಪ್ಲಿಕೇಷನ್ ಸಿದ್ದಪಡಿಸಲಾಗಿದೆ. ಸೆ.15 ರಿಂದ ಎಲ್ಲಾ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ಸಮೀಕ್ಷೆದಾರರು ಬೆಳಿಗ್ಗೆ 9 ರಿಂದ ಸಂಜೆ 5.30 ಗಂಟೆಯ ವರೆಗೆ ಸಮೀಕ್ಷೆ ಕಾರ್ಯ ನಿರ್ವಹಿಸಲಿದ್ದಾರೆ. ಮಾಜಿ ದೇವದಾಸಿ ಮಹಿಳೆಯರು ಹಾಗೂ ಅವರ ಮಕ್ಕಳು ಸಮೀಕ್ಷೆಯಲ್ಲಿ ಪಾಲ್ಗೊಂಡು ನಿಖರ ಮಾಹಿತಿ ನೀಡಬೇಕು. ಹೆಚ್ಚಿನ ಮಾಹಿತಿಗಾಗಿ ಮಹಿಳಾ ಮತ್ತು ಕಲ್ಯಾಣ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರ ಕಚೇರಿ, ಟೋಲ್ ಫ್ರೀ ಸಂಖ್ಯೆ 1800-599-2025ಕ್ಕೆ ಕರೆ ಮಾಡಿ.
>
> – ಟಿ.ವೆಂಕಟೇಶ್, ಜಿಲ್ಲಾಧಿಕಾರಿ

## ಮಿನಿ ನ್ಯೂಸ್

### ಸರಕಾರಿ ನೌಕರರ ಸಂಘದ ಸದಸ್ಯರಾಗಿ ಗಂಗಾಧರ ಹೊಸಳ್ಳಿ ಆಯ್ಕೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂಚೋಳಿ

ಕರ್ನಾಟಕ ಸರಕಾರಿ ನೌಕರರ ಸಂಘದ ತಾಲ್ಲೂಕಾ ಶಾಖೆಯ ಸಂಘದ ಸದಸ್ಯರಾಗಿ ತಾಲ್ಲೂಕಿನ ಸುಲೇಪೇಟ ಗ್ರಾಮದ ಸರಕಾರಿ ಪದವಿ ಪೂರ್ವ ಕಾಲೇಜಿನ ದ್ವಿ.ದಾ.ಸ ಗಂಗಾಧರ ಹೊಸಳ್ಳಿ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಸರಕಾರಿ ನೌಕರರ ಸಂಘದ ಅಧ್ಯಕ್ಷ ದೇವೀಂದ್ರಪ್ಪ ಹೋಳ್ಕರ್ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಜೂನಿಯರ್ ಕಾಲೇಜು ಪ್ರಾಚಾರ್ಯ ಮಲ್ಲಿಕಾರ್ಜುನ ಪಾಲಾಮೂರ್, ಪ್ರಾಥಮಿಕ ಶಿಕ್ಷಕರ ಸಂಘದ ಅಧ್ಯಕ್ಷ ಸುರೇಶ ಕೊರವಿ,ಎಸ್.ಬಿ.ಗಂಗನಕರ್,ಅಣ್ಣಾರಾಯ ವಡ್ಡಳ್ಳಿ, ಸಿದ್ದಲಿಂಗಯ್ಯ, ರಾಘವೇಂದ್ರ, ಕುಪೇಂದ್ರ, ಪ್ರದೀಪಕುಮಾರ, ರಾಜಕುಮಾರ, ಆನಂದ ಉಪನ್ಯಾಸಕರು ಮತ್ತು ಶಿಕ್ಷಕರು ಸಿಬ್ಬಂದಿ ವರ್ಗದವರು ಇದ್ದರು.

### ಶಾಲೆಗಳು ದೇವಸ್ಥಾನವಿದ್ದಂತೆ ಮಾಸ್ಟರ್ ಆನಂದ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಮಹಾಲಿಂಗಪುರ

ಇಂದಿನ ಶಿಕ್ಷಣ ಪದ್ಧತಿ ಸುಧಾರಿಸಬೇಕಿದೆ. ಒಬ್ಬೊಬ್ಬರಿಗೆ ಒಂದೊಂದು ವಿಷಯದಲ್ಲಿ ಆಸಕ್ತಿ ಇರುತ್ತದೆ. ಅಂತಹ ವಿಷಯವನ್ನಷ್ಟೇ ಓದುವ, ಅದರಲ್ಲಿ ಕೌಶಲ ತೋರಿಸುವ ಅವಕಾಶ ಕಲ್ಪಿಸಿದರೆ ವಿದ್ಯಾರ್ಥಿಗಳು ಇನ್ನಷ್ಟು ಸಾಧನೆ ಮಾಡಲು ಸಾಧ್ಯವಿದೆ ಎಂದು ನಟ, ನಿರೂಪಕ ಮಾಸ್ಟರ್ ಆನಂದ ಹೇಳಿದರು. ಪಟ್ಟಣದ ನವಚೇತನ ಶಿಕ್ಷಣ ಸಂಸ್ಥೆಯ ಜೇಸಿ ಇಂಗ್ಲೀಷ್ ಮಾಧ್ಯಮ ಶಾಲೆಯಲ್ಲಿ ಹಮ್ಮಿಕೊಂಡ ವಿದ್ಯಾರ್ಥಿಗಳೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮಕ್ಕಳು ದೇವರ ಸಮಾನ. ಜೀವನ, ಸಮಾಜವನ್ನು ರೂಪಿಸುವ ಶಕ್ತಿ ಶಾಲೆಗಳಿಗಿದೆ. ದೇವಸ್ಥಾನಕ್ಕೆ ಇಲ್ಲದ ಬೇಧಭಾವ ಶಾಲೆಗಳಿಗೂ ಇರುವುದಿಲ್ಲ. ಹೀಗಾಗಿ, ಶಾಲೆಗಳೇ ದೇವಸ್ಥಾನವಿದ್ದಂತೆ, ವಿದ್ಯಾರ್ಥಿಗಳು ಆಟ, ಪಾಠದಲ್ಲಿ ಸಮಾನವಾಗಿ ಬೆರೆಯಬೇಕು ಎಂದರು.

### ರೈತರ ಕಷ್ಟಕ್ಕೆ ಸ್ಪಂದಿಸದ ಸರ್ಕಾರ ರಸ್ತೆ ತಡೆದು ಪ್ರತಿಭಟನೆ

• ಉದಯವಾಹಿನಿ, ನರಗುಂದ

ಅತಿವೃಷ್ಟಿಯಿಂದಾಗಿ ಹೆಸರು, ಗೋವಿನಜೋಳ, ಹತ್ತಿ, ಈರುಳ್ಳಿ ಬೆಳೆಗಳು ಸಂಪೂರ್ಣ ಹಾಳಾಗಿವೆ. ಪರಿಹಾರ ನೀಡುವಂತೆ ಹಲವಾರು ಬಾರಿ ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ. ಸರ್ಕಾರ ರೈತರ ಕಷ್ಟಕ್ಕೆ ಸ್ಪಂದಿಸುತ್ತಿಲ್ಲ ಎಂದು ಕಳಸಾಬಂಡೂರಿ ಹೋರಾಟ ಸಮಿತಿ ಅಧ್ಯಕ್ಷ ವಿಜಯ ಕುಲಕರ್ಣಿ ಆಕ್ರೋಶ ಹೊರಹಾಕಿದರು.

ಬೆಳೆಹಾನಿ ಸಮೀಕ್ಷೆ ನಡೆಸಿ ವಾರ ಕಳೆದರೂ ಪರಿಹಾರ ನೀಡಿಲ್ಲ ಎಂದು ಆರೋಪಿಸಿ ಕಳಸಾಬಂಡೂರಿ ಹೋರಾಟ ಸಮಿತಿ ಹಾಗೂ ತಾಲ್ಲೂಕು ಕೃಷಿಕ ಸಮಾಜದ ಆಶ್ರಯದಲ್ಲಿ ಪಟ್ಟಣದ ಶಿವಾಜಿ ವೃತ್ತದಲ್ಲಿ ಹುಬ್ಬಳ್ಳಿ- ವಿಜಯಪುರ ರಾಷ್ಟ್ರೀಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದ ಸಂದರ್ಭದಲ್ಲಿ ಮಾತನಾಡಿದರು. ಸರ್ಕಾರ ಯೂರಿಯಾ ಗೊಬ್ಬರದ ದಾಸ್ತಾನನ್ನು ಸಕಾಲಿಕವಾಗಿ ಮಾಡಲಾರದೇ ಗೋವಿನಜೋಳ ಬೆಳೆ ಹಾಳಾಯಿತು. ರೈತರಿಗೆ ನಷ್ಟ ಉಂಟಾಯಿತು. ಎಲ್ಲಾ ಬೆಳೆಗಳ ನಷ್ಟಕ್ಕೆ ಸರ್ಕಾರವೇ ನೇರ ಹೊಣೆಯಾಗಿದೆ ಎಂದು ಆರೋಪ ಮಾಡಿದರು. ಹೆಸರು ಇಳುವರಿ ತುಂಬ ಕಡಿಮೆಯಾಗಿದೆ. ಬೆಲೆ ಕುಸಿದಿರುವ ಕಾರಣ ಅದನ್ನು ಮಾರಲಾರದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಆದ್ದರಿಂದ ಶೀಘ್ರವಾಗಿ ಖರೀದಿ ಕೇಂದ್ರ ಪ್ರಾರಂಭಿಸಬೇಕು. ಎಲ್ಲಾ ರೈತರ ಹೆಸರು ಕಾಳನ್ನು ಕಡ್ಡಾಯವಾಗಿ ಖರೀದಿಸಬೇಕು ಎಂದು ಒತ್ತಾಯಿಸಿದರು. ಬೆಳೆ ನಷ್ಟ ಪರಿಹಾರ ವಿತರಣೆಗೆ ಸರ್ಕಾರ ಶೀಘ್ರ ಕ್ರಮವಹಿಸಬೇಕು. ಪ್ರತಿ ಎಕರೆಗೆ 25 ಸಾವಿರ ಪರಿಹಾರ ನೀಡಬೇಕು. ಇಲ್ಲವಾದರೆ ಅಹೋರಾತ್ರಿ ಧರಣಿ ನಡೆಸಲಾಗುವುದು ಎಂದು ಎಚ್ಚರಿಸಿದರು.

### ಕಳವಾಗಿದ್ದ ಮಗು 12 ಗಂಟೆಗಳೊಳಗೆ ತಾಯಿ ಮಡಿಲಿಗೆ: ನಾಲ್ವರ ಸೆರೆ

• ಉದಯವಾಹಿನಿ, ಬಳ್ಳಾರಿ

ಬಳ್ಳಾರಿಯಲ್ಲಿ ನಡೆದಿದ್ದ ಒಂದೂವರೆ ತಿಂಗಳ ಮಗು ಕಳ್ಳತನ ಪ್ರಕರಣವನ್ನು ಒಂದೇ ದಿನದಲ್ಲಿ ಭೇದಿಸಿರುವ ಬ್ರೂಸಪೇಟೆ ಪೊಲೀಸರು, ಶಿಶುವನ್ನು ಪೋಷಕರ ಮಡಿಲಿಗೆ ಒಪ್ಪಿಸುವಲ್ಲಿ ಯಶಸ್ವಿಯಾಗಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಶಮೀಮ್ (25), ಎಚ್.ಎಂ ಇಸ್ಮಾಯಿಲ್ ಸಾಬ್ (65), ಬಾಷ (55), ಬಸವರಾಜ ಮಹಾಂತಪ್ಪ (43) ಎಂಬುವವರನ್ನು ಬಂಧಿಸಲಾಗಿದೆ. ಕಳ್ಳತನ ನಡೆದ ಕೇವಲ 12 ಗಂಟೆಯ ಒಳಗಾಗಿ ಮಗುವನ್ನು ರಕ್ಷಿಸಲಾಗಿದೆ. ಬ್ರೂಸ್ ಪೇಟೆ ಠಾಣೆ ಪೊಲೀಸರ ಕಾರ್ಯವನ್ನು ಬಳ್ಳಾರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಶೋಭಾರಾಣಿ ವಿ.ಜೆ ಶ್ಲಾಘಿಸಿದ್ದಾರೆ. ಈ ಕುರಿತು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಅಪರಿಚಿತ ಮಹಿಳೆಯೊಬ್ಬರು ತನ್ನ ಒಂದೂವರೆ ತಿಂಗಳ ಮಗುವನ್ನು ಕಳ್ಳತನ ಮಾಡಿಕೊಂಡು ಹೋಗಿರುವುದಾಗಿ ಬೆಣಕಲ್ಲು ಗ್ರಾಮದ ಶ್ರೀದೇವಿ ಎಂಬುವವರು ಬ್ರೂಸ್‌ಪೇಟೆ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ದೂರಿನ ಪ್ರಕಾರ ಜುಲೈ 28ರಂದು ಮಹಿಳೆಗೆ ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ಗಂಡು ಮಗು ಜನಿಸಿತ್ತು.

ಮಗುವಿನ ಜನ್ಮ ಪ್ರಮಾಣಪತ್ರ ಪಡೆದುಕೊಳ್ಳಲೆಂದು ಮತ್ತೆ ಆಸ್ಪತ್ರೆಗೆ ಹೋಗಿದ್ದರು. ಈ ವೇಳೆ ಅಲ್ಲಿಗೆ ಬಂದ ಮಹಿಳೆಯೊಬ್ಬರು ಪ್ರಮಾಣಪತ್ರವನ್ನು ಮಹಾನಗರ ಪಾಲಿಕೆ ಕಚೇರಿಯಲ್ಲಿ ಕೊಡುತ್ತಾರೆ ಎಂದು ಹೇಳಿ ನಂಬಿಸಿ ಅಲ್ಲಿಗೆ ಕರೆದೊಯ್ದಿದ್ದಾರೆ. ಪಾಲಿಕೆ ಕಚೇರಿಯಲ್ಲಿ ಬಹುಕಾಲ ಒಂದೇ ಸ್ಥಳದಲ್ಲಿ ಶ್ರೀದೇವಿಯನ್ನು ಕೂರಿಸಿಕೊಂಡಿದ್ದರು. ಶ್ರೀದೇವಿ ಶೌಚಾಲಯಕ್ಕೆ ಹೋಗಲೆಂದು ಮಗುವನ್ನು ಅಪರಿಚಿತ ಮಹಿಳೆ ಬಳಿ ಕೊಟ್ಟು ಹೋಗಿದ್ದಾರೆ. ಶೌಚಾಲಯದಿಂದ ಬಂದು ನೋಡಿದಾಗ ಮಗು ಇರಲಿಲ್ಲ ಎಂದು ತಾಯಿ ದೂರು ನೀಡಿದ್ದರು ಎಂದು ತಿಳಿಸಿದರು.

ಅಧಿಕಾರದ ದಾಹವಿಲ್ಲ; 6 ತಿಂಗಳಲ್ಲಿ ಭ್ರಷ್ಟಾಚಾರ ನಿರ್ಮೂಲನೆ ಮಾಡಿ , ಜವಾಬ್ದಾರಿ ಹಸ್ತಾಂತರಿಸುತ್ತೇನೆ

# ಭ್ರಷ್ಟಾಚಾರದ ವಿರುದ್ಧ ಹೋರಾಡುವ ಪಣ ತೊಟ್ಟ ಸುಶೀಲಾ ಕಾರ್ಕಿ

**ಅಧಿಕಾರದ ಚುಕ್ಕಾಣಿ ಹಿಡಿದಿಲ್ಲ**



**ಕಠ್ಮಂಡು:** ನೇಪಾಳದ ಹಂಗಾಮಿ ಪ್ರಧಾನಿಯಾಗಿ ಸುಪ್ರೀಂ ಕೋರ್ಟ್ ನಿವೃತ್ತ ಮುಖ್ಯ ನ್ಯಾಯಮೂರ್ತಿ ಸುಶೀಲಾ ಕಾರ್ಕಿ ಅವರು ಅಧಿಕೃತವಾಗಿ ಅಧಿಕಾರ ವಹಿಸಿಕೊಂಡಿದ್ದಾರೆ. ನೇಪಾಳದ ಮಧ್ಯಂತರ ಪ್ರಧಾನಿಯಾಗಿ ಅಧಿಕೃತವಾಗಿ ಅಧಿಕಾರ ವಹಿಸಿಕೊಂಡ ನಂತರ ಸುಶೀಲಾ ಕಾರ್ಕಿ ಮಾತನಾಡಿ, ಭ್ರಷ್ಟಾಚಾರದ ವಿರುದ್ಧ ಹೋರಾಡಿ, ಆರು ತಿಂಗಳೊಳಗೆ ಹೊಸ ಸಂಸತ್ತಿಗೆ ಅಧಿಕಾರ ಹಸ್ತಾಂತರಿಸಲಾಗುತ್ತದೆ. ನನಗೆ ಅಧಿಕಾರದ ದಾಹವಿಲ್ಲ ಎಂದು ಹೇಳಿದ್ದಾರೆ. ದೇಶದ ಸುಪ್ರೀಂ ಕೋರ್ಟ್‌ನ ಮೊದಲ ಮಹಿಳಾ ಮುಖ್ಯ ನ್ಯಾಯಮೂರ್ತಿ ಆಗಿದ್ದ ಸುಶೀಲಾ ಕಾರ್ಕಿ ಅವರು ಈಗ ನೇಪಾಳದ ಮೊದಲ ಮಹಿಳಾ ಪ್ರಧಾನಿ ಎಂಬ ಗೌರವಕ್ಕೆ ಪಾತ್ರವಾಗಿದ್ದಾರೆ. ಕೆ.ಪಿ.ಶರ್ಮಾ ಓಲಿ ರಾಜೀನಾಮೆ ಕಾರಣ ಆಗಿದ್ದ ಜನರೇಷನ್ ಝಡ್ ಮುಖಂಡರ ಜತೆ ಹೊಸ ನಾಯಕತ್ವದ ಬಗ್ಗೆ ಸಭೆ ನಡೆಸಲಾಗಿತ್ತು. ಹೋರಾಟಗಾರರ ಎರಡು ಗುಂಪುಗಳ ಮನವೊಲಿಸಿ ಸುಶೀಲಾ ಕಾರ್ಕಿ ಅವರನ್ನು ಮಧ್ಯಂತರ ಸರಕಾರದ ಮುಖ್ಯಸ್ಥರಾಗಿ ಒಮ್ಮತದಿಂದ ಆಯ್ಕೆ ಮಾಡಲಾಯಿತು.

**ಆರು ತಿಂಗಳಷ್ಟೇ ಅಧಿಕಾರದಲ್ಲಿರುತ್ತೇವೆ:** ನಾನು ಮತ್ತು ನಮ್ಮ ಮಧ್ಯಂತರ ಆಸೆಗಾಗಿ ಅಧಿಕಾರದ ಚುಕ್ಕಾಣಿ ಹಿಡಿದಿಲ್ಲ. ನಾವು ಆರು ತಿಂಗಳಿಗಿಂತ ಹೆಚ್ಚು ಕಾಲ ಇರುವುದಿಲ್ಲ. ಇರುವಷ್ಟು ದಿನದಲ್ಲಿ ಭ್ರಷ್ಟಾಚಾರ ನಿರ್ಮೂಲನೆ ಮಾಡುವ ಗುರಿಹೊಂದಿದ್ದೇವೆ. ಆನಂತರ ಹೊಸ ಸಂಸತ್ತಿಗೆ ಜವಾಬ್ದಾರಿಯನ್ನು ಹಸ್ತಾಂತರಿಸುತ್ತೇವೆ. ಜನರೇಷನ್ ಝಡ್ ಗುಂಪಿನ ಪ್ರತಿನಿಧಿಗಳ ಚಿಂತನೆಗೆ ಅನುಸಾರವಾಗಿ ನಮ್ಮ ನಿರ್ಧಾರ ತೆಗೆದುಕೊಳ್ಳುತ್ತೇವೆ. ನಿಮ್ಮ ಬೆಂಬಲವಿಲ್ಲದೆ ನಾವು ಯಶಸ್ವಿಯಾಗಲು ಸಾಧ್ಯವಿಲ್ಲ ಎಂದು ನೇಪಾಳದ ಹಂಗಾಮಿ ಪ್ರಧಾನ ಮಂತ್ರಿ ಸುಶೀಲಾ ಕಾರ್ಕಿ ಹೇಳಿದರು.

**ಆರ್ಥಿಕ ಸದೃಢ ರಾಷ್ಟ್ರ ಮಾಡುವುದು ಗುರಿ:** ನೇಪಾಳದಲ್ಲಿ ಭ್ರಷ್ಟಾಚಾರದ ವಿರುದ್ಧ ಹೋರಾಡಿ, ಮೃತಪಟ್ಟ ಜೆನ್ ಜಿ ಗುಂಪಿನ ಯುವಕರನ್ನು ಹುತಾತ್ಮರೆಂದು ಪರಿಗಣಿಸಲಾಗುವುದು. ಸಂತ್ರಸ್ತ ಕುಟುಂಬಗಳಿಗೆ ಪರಿಹಾರ ನೀಡಲಾಗುವುದು. ಆರ್ಥಿಕ ಸಂಕಷ್ಟದಲ್ಲಿರುವ ನೇಪಾಳವನ್ನು ಪುನರ್‌ನಿರ್ಮಿಸುವುದು, ಆರ್ಥಿಕ ಸ್ಥಿರತೆಯನ್ನು ಕಾಪಾಡುವುದು ಸರ್ಕಾರದ ಮುಖ್ಯ ಗುರಿಯಾಗಿದೆ.

### ನೇಪಾಳದಲ್ಲಿ ಹಿಂಸಾಚಾರ

**ಸೆಪ್ಟೆಂಬರ್ 8 ರಂದು ಭ್ರಷ್ಟಾಚಾರದ ವಿರುದ್ಧ ಯುವಕರು ಬೀದಿಗಿಳಿದು ಪ್ರತಿಭಟನೆ ನಡೆಸಿದರು. ಈ ಪ್ರತಿಭಟನೆಗಳು ಸರ್ಕಾರ ಬದಲಾವಣೆಗೆ ಕಾರಣ ಆಗಿವೆ. ಜೆನ್ ಜೀ ಎಂದು ಕರೆದುಕೊಳ್ಳುವ ಯುವ ಪ್ರತಿಭಟನಾಕಾರರು ಸುಶೀಲಾ ಕಾರ್ಕಿಯವರನ್ನು ಹಂಗಾಮಿ ನಾಯಕಿಯಾಗಿ ಆಯ್ಕೆ ಮಾಡಿದ್ದಾರೆ. ಸಾರ್ವತ್ರಿಕ ಚುನಾವಣೆ ನಡೆಯುವವರೆಗೆ ಮತ್ತು ಹೊಸ ಸರ್ಕಾರ ಅಧಿಕಾರಕ್ಕೆ ಬರುವವರೆಗೆ ಸುಶೀಲಾ ಕಾರ್ಕಿ ಅವರ ನೇತೃತ್ವದ ಸರ್ಕಾರ ಆಡಳಿತ ನಡೆಸಲಿದೆ.**

**ನೇಪಾಳದ ಮಧ್ಯಂತರ ಸರ್ಕಾರದ ಪ್ರಧಾನಿಯಾಗಿ ಸುಪ್ರೀಂ ಕೋರ್ಟ್‌ನ ನಿವೃತ್ತ ಮುಖ್ಯ ನ್ಯಾಯಮೂರ್ತಿ ಸುಶೀಲಾ ಕಾರ್ಕಿ ಅಧಿಕೃತವಾಗಿ ಅಧಿಕಾರ ಸ್ವೀಕರಿಸಿದ್ದಾರೆ. ಅವರು ಭ್ರಷ್ಟಾಚಾರ ನಿರ್ಮೂಲನೆಗೆ ಆರು ತಿಂಗಳು ಗಡುವು ಕೊಟ್ಟುಕೊಂಡಿದ್ದಾರೆ. 2026ರಲ್ಲಿ ಹೊಸ ಸಂಸತ್ತಿಗೆ ಅಧಿಕಾರ ಹಸ್ತಾಂತರಿಸುವುದಾಗಿ ಅವರು ಹೇಳಿದ್ದಾರೆ. ಮಾರ್ಚ್ 5ರಂದು ಸಾರ್ವತ್ರಿಕ ಚುನಾವಣೆ ನಡೆಯುವ ಬಗ್ಗೆ ಸ್ಪಷ್ಟಪಡಿಸಿದ್ದಾರೆ. ಅಲ್ಲಿಯವರೆಗೆ ಕಾರ್ಕಿ ಮಧ್ಯಂತರ ಸರ್ಕಾರವನ್ನು ಮುನ್ನಡೆಸಲಿದ್ದಾರೆ.**

ಎಂದು ಕಾರ್ಕಿ ಭರವಸೆ ನೀಡಿದರು. 2026ರ ಮಾ. 5ರಂದು ನೇಪಾಳದಲ್ಲಿ ಸಾರ್ವತ್ರಿಕ ಚುನಾವಣೆ ನಡೆಸಲಾಗುವುದು. ಹೀಗಾಗಿ ನಾನು ಮತ್ತು ನನ್ನ ಮಧ್ಯಂತರ ಸರ್ಕಾರದ ತಂಡವು ಹೆಚ್ಚು ಕಾಲ ಅಧಿಕಾರದಲ್ಲಿ ಇರೋದಿಲ್ಲ. ಹಂಗಾಮಿ ಪ್ರಧಾನಿ ಸುಶೀಲಾ ಕಾರ್ಕಿ ಅವರಿಗೆ ಪ್ರಮಾಣವಚನ ಬೋಧಿಸಿದರು. ಮುಂದಿನ ಸಂಸತ್ ಚುನಾವಣೆ ನಡೆಯುವ ತನಕ ಕಾರ್ಕಿ ಅವರು ಮಧ್ಯಂತರ ಸರಕಾರವನ್ನು ಮುನ್ನಡೆಸಲಿದ್ದಾರೆ.

## ಭೂಕುಸಿತದಲ್ಲಿ ಸಮಾಧಿಯಾದ ಅಧ್ಯಕ್ಷ

**ಗ್ಯಾಂಗ್ಟಾಕ್:** ಸಿಕ್ಕಿಂನ ಗ್ಯಾಲ್ಶಿಂಗ್ ಜಿಲ್ಲೆಯಲ್ಲಿ ನಿರಂತರ ಮಳೆಯಿಂದಾಗಿ ಉಂಟಾದ ಭೂಕುಸಿತದಲ್ಲಿ 47 ವರ್ಷದ ಪಂಚಾಯತ್ ಅಧ್ಯಕ್ಷರೊಬ್ಬರು ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಸಂಜೆ ಈ ಘಟನೆ ಸಂಭವಿಸಿದ್ದು, ಸರ್ದುಂಗ್ ಲುಂಗ್ಜಿಕ್ ಗ್ರಾಮ ಪಂಚಾಯತ್ ಘಟಕದ ಅಧ್ಯಕ್ಷ ರಾಜೇನ್ ಗುರುಂಗ್ ಅವರನ್ನು ಅವರ ನಿವಾಸದ ಬಳಿಯೇ ಬೃಹತ್ ಭೂಕುಸಿದಲ್ಲಿ ಸಮಾಧಿಯಾಗಿದ್ದಾರೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಭೂಕುಸಿತ ಸಂಭವಿಸಿದಾಗ ಅವರು



ತಮ್ಮ ನಿವಾಸದ ಬಳಿಯ ಒಳಚರಂಡಿ ವ್ಯವಸ್ಥೆಯನ್ನು ನೋಡುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ತಡರಾತ್ರಿ ತಮ್ಮ ನಿವಾಸದ ಬಳಿ ಭೂಕುಸಿತದಿಂದ ಸಾವನ್ನಪ್ಪಿದ ಗುರುಂಗ್ ಅವರ ಅಕಾಲಿಕ ನಿಧನದ ಸುದ್ದಿ ತಿಳಿದು ಮುಖ್ಯಮಂತ್ರಿ ಪಿ.ಎಸ್. ತಮಾಂಗ್ ಅವರು ತೀವ್ರ ದುಃಖಿತರಾಗಿದ್ದಾರೆ.

ಈ ತೀವ್ರ ದುಃಖದ ಕ್ಷಣದಲ್ಲಿ, ನಾನು ದುಃಖಿತ ಕುಟುಂಬಕ್ಕೆ ನನ್ನ ಹೃತ್ಪೂರ್ವಕ ಸಂತಾಪ ಸೂಚಿಸುತ್ತೇನೆ ಮತ್ತು ಅಗಲಿದ ಆತ್ಮಕ್ಕೆ ಶಾಶ್ವತ ಶಾಂತಿ ಸಿಗಲಿ ಎಂದು ಪ್ರಾರ್ಥಿಸುತ್ತೇನೆ ಎಂದಿದ್ದಾರೆ. ದಿವಂಗತ ಗುರುಂಗ್ ಅವರ ಸಮುದಾಯಕ್ಕೆ ನಿಸ್ವಾರ್ಥ ಸೇವೆ ಮತ್ತು ಜನರ ಕಲ್ಯಾಣಕ್ಕಾಗಿ ಅವರ ಅವಿಶ್ರಾಂತ ಕೊಡುಗೆಗಳನ್ನು ಆಳವಾದ ಗೌರವ ಮತ್ತು ಕೃತಜ್ಞತೆಯಿಂದ ಸ್ಮರಿಸಲಾಗುವುದು ಎಂದು ಮುಖ್ಯಮಂತ್ರಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಈ ಸರಿಪಡಿಸಲಾಗದ ನಷ್ಟದ ಸಮಯದಲ್ಲಿ ದುಃಖಿತ ಕುಟುಂಬದೊಂದಿಗೆ ರಾಜ್ಯ ಸರ್ಕಾರ ಮತ್ತು ಸಿಕ್ಕಿಂ ಜನರ ಪರವಾಗಿ ತಾವು ಒಗ್ಗಟ್ಟಿನಿಂದ ನಿಲ್ಲುವುದಾಗಿ ಮುಖ್ಯಮಂತ್ರಿ ಹೇಳಿದರು. ಜಿಲ್ಲಾಡಳಿತ ಮತ್ತು ಸಂಬಂಧಪಟ್ಟ ಅಧಿಕಾರಿಗಳು ತಕ್ಷಣವೇ ಪರಿಹಾರ ಸೂಚಿಸಿದ್ದಾರೆ ಎಂಬುದನ್ನು ಗಮನಿಸುವುದು ಸಮಾಧಾನಕರವಾಗಿದೆ ಎಂದು ತಮಾಂಗ್ ಹೇಳಿದರು.

# ರ‍್ಯಾಲಿ ವೇಳೆ ಪೊಲೀಸರೊಂದಿಗೂ ಸಂಘರ್ಷ

## ವಲಸೆ ನೀತಿ ವಿರೋಧಿಸಿ ಲಂಡನ್‌ನಲ್ಲಿ ಬೃಹತ್ ಪ್ರತಿಭಟನೆ: ಪೊಲೀಸರ ಮೇಲೆ ಹಲ್ಲೆ

**ಲಂಡನ್:** ವಲಸೆ ನೀತಿಗಳ ವಿರುದ್ಧ ಲಂಡನ್‌ನಲ್ಲಿ ಬೃಹತ್ ಪ್ರತಿಭಟನೆ ನಡೆದಿದೆ. ಬಲ ಪಂಥೀಯ ಹೋರಾಟಗಾರ ಟಾಮಿ ರಾಬಿನ್‌ಸನ್ ನೇತೃತ್ವದಲ್ಲಿ ಲಕ್ಷಕ್ಕೂ ಹೆಚ್ಚು ಜನರು 'ಯುನೈಟ್ ದ ಕಿಂಗ್‌ಡಮ್' ರ‍್ಯಾಲಿ ನಡೆಸಿದರು. ಸರ್ಕಾರವು ವಲಸೆ ನೀತಿಗಳನ್ನು ಹೆಚ್ಚು ಕಠಿಣಗೊಳಿಸಬೇಕು ಎಂದು ಆಗ್ರಹಿಸಿ, ಪ್ರತಿಭಟನಾಕಾರರು ತಮ್ಮ ಅಸಮಾಧಾನವನ್ನು ವ್ಯಕ್ತಪಡಿಸಲು ರಸ್ತೆಗಳಲ್ಲಿ ಬೃಹತ್ ಮೆರವಣಿಗೆ ನಡೆಸಿದರು ಮತ್ತು ಘೋಷಣೆಗಳನ್ನು ಕೂಗಿದರು.

ವಲಸೆಯು ಸ್ಥಳೀಯ ಉದ್ಯೋಗಾವಕಾಶಗಳ ಮೇಲೆ ಪರಿಣಾಮ ಬೀರಬಹುದು, ಸಾಮಾಜಿಕ ಸೇವೆಗಳ ಮೇಲೆ ಒತ್ತಡ ಹೇರಬಹುದು ಮತ್ತು ಸಾಂಸ್ಕೃತಿಕ ಬದಲಾವಣೆಗಳಿಗೆ ಕಾರಣವಾಗಬಹುದು ಎಂಬುದು ಪ್ರತಿಭಟನಾಕಾರರ ಕಳವಳ.

ರ‍್ಯಾಲಿ ವೇಳೆ ಪೊಲೀಸರೊಂದಿಗೆ ಅಲ್ಲಲ್ಲಿ ಘರ್ಷಣೆ ಉಂಟಾಯಿತು. ಅಭಿವ್ಯಕ್ತಿ ಸ್ವಾತಂತ್ರ್ಯದ ಹಬ್ಬ ಎಂದು ಕರೆಯಲ್ಪಟ್ಟ ಈ ಕಾರ್ಯಕ್ರಮಕ್ಕಾಗಿ ಪ್ರತಿಭಟನಾಕಾರರು ರೈಲು ಮತ್ತು ಬಸ್ ಮೂಲಕ ಲಂಡನ್‌ಗೆ ಬಂದರು.

ಕೆಲವು ಕಡೆಗಳಲ್ಲಿ ಪ್ರತಿಭಟನೆಗಳು ಹಿಂಸಾತ್ಮಕ ತಿರುವು ಪಡೆದವು. ವರದಿಗಳ ಪ್ರಕಾರ, ಕೆಲವು ಪ್ರತಿಭಟನಾಕಾರರು ಪೊಲೀಸರ ಮೇಲೆ ಹಲ್ಲೆ ನಡೆಸಿದರು ಇದರಿಂದಾಗಿ



ಪರಿಸ್ಥಿತಿಯನ್ನು ನಿಯಂತ್ರಿಸಲು ಪೊಲೀಸರು ಮಧ್ಯ ಪ್ರವೇಶಿಸಬೇಕಾಯಿತು. ಪೊಲೀಸರ ಮೇಲೆ ಹಲ್ಲೆ ನಡೆಸಿದ ಮತ್ತು ಗಲಭೆ ಸೃಷ್ಟಿಸಿದ ಹಲವಾರು ಪ್ರತಿಭಟನಾಕಾರರನ್ನು ಬಂಧಿಸಲಾಯಿತು. ಪ್ರತಿಭಟನೆಯಲ್ಲಿ ಯುರೋಪಿನ ಬಲ ಪಂಥೀಯ ರಾಜಕಾರಣಿಗಳು, ಎಲಾನ್ ಮಸ್ಕ್ ಕೂಡ ಭಾಗವಹಿಸಿದ್ದರು. ವಲಸೆ ನೀತಿಗಳ ಬಗ್ಗೆ ಟೀಕೆಗಳು ವ್ಯಕ್ತವಾದವು.

ಟೆಸ್ಲಾ ಸಿಇಒ ಎಲಾನ್ ಮಸ್ಕ್ ಯುಕೆ ಸರ್ಕಾರ ವನ್ನು ಟೀಕಿಸಿದರು. ಬ್ರಿಟಿಷ್ ಆಗಿರುವುದರಲ್ಲಿ ಏನೋ ಒಂದು ಸೌಂದರ್ಯವಿದೆ. ಆದರೆ ಇಲ್ಲಿ ಏನು ನಡೆಯುತ್ತಿದೆ ಎಂದರೆ ಬ್ರಿಟನ್‌ನ ನಾಶ. ಆರಂಭದಲ್ಲಿ ನಿಧಾನಗತಿಯ ಸವೆತ, ಆದರೆ ಬೃಹತ್ ಅನಿಯಂತ್ರಿತ ವಲಸೆಯಿಂದ ಬ್ರಿಟನ್ ವೇಗವಾಗಿ ನಾಶವಾಗುತ್ತಿದೆ ಎಂದು ಅವರು ಹೇಳಿದರು. ಇನ್ನು ರ‍್ಯಾಲಿಯಾದ್ಯಂತ ಬೋಟ್‌ಗಳನ್ನು ತಡೆಯಿರಿ, ಅವರವರ ಊರಿಗೆ ಕಳುಹಿಸಿ, ಇಷ್ಟು ಸಾಕು ನಮ್ಮ ಮಕ್ಕಳನ್ನು ರಕ್ಷಿಸಿ ಎಂಬೆಲ್ಲಾ ಘೋಷಣೆ ಇರುವ ಫಲಕಗಳನ್ನು ಪ್ರದರ್ಶಿಸಲಾಗಿದೆ.

### ನಮಗೆ ನಮ್ಮ ದೇಶ ಬೇಕು

**ಯುನೈಟ್ ದಿ ಕಿಂಗ್‌ಡಮ್ ಮೆರವಣಿಗೆಯಲ್ಲಿ ಭಾಗವಹಿಸಿದವರು ಸೇಂಟ್ ಜಾರ್ಜ್ ಧ್ವಜಗಳು ಮತ್ತು ಯೂನಿಯನ್ ಜ್ಯಾಕ್ ಅನ್ನು ಹಿಡಿದು ನಮಗೆ ನಮ್ಮ ದೇಶ ಬೇಕು ಎಂದು ಘೋಷಣೆಗಳನ್ನು ಕೂಗಿದರು. ಇತ್ತೀಚಿನ ತಿಂಗಳುಗಳಲ್ಲಿ ಯುಕೆಯಾದ್ಯಂತ ಧ್ವಜಗಳು ಹೆಚ್ಚಾಗಿ ಕಾಣಿಸಿಕೊಳ್ಳುತ್ತಿವೆ. ಕೆಲವರು ಇದನ್ನು ರಾಷ್ಟ್ರೀಯ ಹೆಮ್ಮೆ ಎಂದು ನೋಡುತ್ತಾರೆ. ಆದರೆ ಇತರರು ಬೆಳೆಯುತ್ತಿರುವ ರಾಷ್ಟ್ರೀಯತೆಯ ಸಂಕೇತವೆಂದು ಪರಿಗಣಿಸುತ್ತಾರೆ.**

# ನಾಶಗೊಂಡ ಲಷ್ಕರ್ ಉಗ್ರರ ಕೇಂದ್ರ ಕಚೇರಿ ನಿರ್ಮಾಣಕ್ಕೆ ''ಪಾಪಿ''ಸ್ತಾನ ಆಸರೆ

**ಇಸ್ಲಾಮಾಬಾದ್:** ಆಪರೇಷನ್ ಸಿಂಧೂರ್ ಕಾರ್ಯಾಚರಣೆಯಲ್ಲಿ ಭಾರತ ನಾಶ ಪಡಿಸಿದ್ದ ಲಷ್ಕರ್-ಎ-ತೈಬಾ ಸಂಘಟನೆಯ ಕಟ್ಟಡದ ಪುನರ್ ನಿರ್ಮಾಣಕ್ಕೆ ಪಾಕಿಸ್ತಾನ ಹಣ ನೀಡಿರುವ ಅಂಶ ಗೊತ್ತಾಗಿದೆ. ಈ ಸುದ್ದಿಯು ಭಾರತದ ಗುಪ್ತಚರ ಸಂಸ್ಥೆಗಳು, ತಜ್ಞರಿಗೆ ಕಳವಳಕಾರಿ ವಿಷಯವಾಗಿದೆ, ಏಕೆಂದರೆ ಇದು ಭಯೋತ್ಪಾದನೆಯ ವಿರುದ್ಧ ಪಾಕಿಸ್ತಾನದ ಬದ್ಧತೆಯ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಏಪ್ರಿಲ್ 22, 2025 ರಂದು, ಜಮ್ಮು ಮತ್ತು ಕಾಶ್ಮೀರದ ಪೆಹಲ್ಗಾಮ್‌ನಲ್ಲಿ ಭೀಕರ ಭಯೋತ್ಪಾದಕ ದಾಳಿ ನಡೆಯಿತು. 26 ಅಮಾಯಕ ಪ್ರವಾಸಿಗರು ಸಾವನ್ನಪ್ಪಿದ್ದರು.ದಾಳಿಗೆ ಭಾರತವು ಪಾಕಿಸ್ತಾನ ಮೂಲದ ಭಯೋತ್ಪಾದಕ ಗುಂಪು ದಿ ರೆಸಿಸ್ಟೆನ್ಸ್ ಫ್ರಂಟ್ ಅನ್ನು ದೂಷಿಸಿತ್ತು, ಇದು ಎಲ್‌ಇಟಿಯ ಭಾಗವಾಗಿದೆ. ಎಲ್‌ಇಟಿಯ ನಾಯಕ ಹಫೀಜ್ ಸಯೀದ್ 2008 ರ ಮುಂಬೈ ದಾಳಿಯಂತಹ ಅನೇಕ ದಾಳಿಗಳನ್ನು ನಡೆಸಿದ್ದ. ಭಾರತವು ಮೇ 7, 2025 ರಂದು ಆಪರೇಷನ್ ಸಿಂಧೂರ್ ಅನ್ನು ಪ್ರಾರಂಭಿಸಿತು. ಇದು ಭಾರತೀಯ ವಾಯುಪಡೆಯು ಕ್ಷಿಪಣಿಗಳು ಮತ್ತು ಡ್ರೋನ್‌ಗಳನ್ನು ಬಳಸಿದ



ನಿಖರವಾದ ಮಿಲಿಟರಿ ಕಾರ್ಯಾಚರಣೆಯಾಗಿತ್ತು. ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರ ಸೇರಿದಂತೆ ಒಟ್ಟು 9 ಸ್ಥಳಗಳ ಮೇಲೆ ದಾಳಿ ಮಾಡಲಾಯಿತು. ಇವುಗಳಲ್ಲಿ ಎಲ್‌ಇಟಿ ಮತ್ತು ಜೈಶ್-ಎ-ಮೊಹಮ್ಮದ್ ಅಡಗುತಾಣಗಳು ಸೇರಿದ್ದವು.

ಈ ದಾಳಿಯಲ್ಲಿ ಲಾಹೋರ್‌ನಿಂದ ಕೇವಲ 30 ಕಿಲೋಮೀಟರ್ ದೂರದಲ್ಲಿರುವ ಮರ್ಕಜ್ ತೈಬಾ ಎಂಬ ಹೆಸರಿನ ಸಂಕೀರ್ಣವಿದ್ದು, ಇದು ಎಲ್‌ಇಟಿಯ ಪ್ರಧಾನ ಕಚೇರಿಯಾಗಿದೆ. ಇದು 200 ಎಕರೆಗಳಷ್ಟು ವಿಸ್ತೀರ್ಣದಲ್ಲಿ ಹರಡಿಕೊಂಡಿದ್ದು, ಮದರಸಾ, ಆಸ್ಪತ್ರೆ, ವಸತಿ, ತರಬೇತಿ ಕೇಂದ್ರ ಮತ್ತು ಶಸ್ತ್ರಾಸ್ತ್ರಗಳ ಸಂಗ್ರಹಣಾ ಕೇಂದ್ರವನ್ನು ಒಳಗೊಂಡಿದೆ.

ದಾಳಿಯಲ್ಲಿ ಮುಖ್ಯ ಕಟ್ಟಡಗಳು ಹಾನಿಗೊಳಗಾಗಿದ್ದವು. ಯೂಸುಫ್ ಅಜರ್, ಅಬ್ದುಲ್ ಮಲಿಕ್ ರೌಫ್, ಮುದಾಸಿರ್ ಅಹ್ಮದ್ ನಂತಹ 80-100 ಭಯೋತ್ಪಾದಕರು ಈ ದಾಳಿಯಲ್ಲಿ ಸಾವನ್ನಪ್ಪಿದ್ದಾರೆ ಎಂದು ಭಾರತ ಹೇಳಿಕೊಂಡಿತ್ತು. ಮುರಿಡ್ಕೆಯ ಮರ್ಕಜ್ ತೈಬಾ ಕಟ್ಟಡವು ಅವಶೇಷಗಳಾಗಿ ಮಾರ್ಪಟ್ಟಿತು. ಆದರೆ ಆಗಸ್ಟ್ 2025 ರಲ್ಲಿ ಪುನರ್ನಿರ್ಮಾಣ ಪ್ರಾರಂಭವಾಯಿತು. ಎಲ್ ಇಟಿ 5 ಜೆಸಿಬಿ ಯಂತ್ರಗಳನ್ನು ನಿಯೋಜಿಸಿ ಹಾನಿಗೊಳಗಾದ ಕಟ್ಟಡಗಳನ್ನು ಕೆಡವಲು ಪ್ರಾರಂಭಿಸಿತು. ಸೆಪ್ಟೆಂಬರ್ 4, 2025 ರ ಹೊತ್ತಿಗೆ, ಉಮ್-ಉಲ್-ಕುರಾದ ಹಳದಿ ಕಟ್ಟಡವನ್ನು ಸಂಪೂರ್ಣವಾಗಿ ಕೆಡವಲಾಯಿತು. ಈಗ ಹೊಸ ಕಟ್ಟಡಗಳನ್ನು ನಿರ್ಮಿಸಲು ಸಿದ್ಧತೆಗಳು ನಡೆಯುತ್ತಿವೆ. ಫೆಬ್ರವರಿ 5, 2026 ರ ಮೊದಲು ಪುನರ್ನಿರ್ಮಾಣವನ್ನು ಪೂರ್ಣಗೊಳಿಸಬೇಕೆಂದು ಎಲ್‌ಇಟಿ ಬಯಸುತ್ತದೆ. ಪ್ರತಿ ವರ್ಷ ಈ ದಿನದಂದು ಎಲ್ ಇಟಿ ಕಾಶ್ಮೀರ ಕೇಂದ್ರಿತ ಜಿಹಾದ್ ಕಾರ್ಯಕ್ರಮವನ್ನು ಆಯೋಜಿಸುವುದರಿಂದ ಈ ದಿನಾಂಕವು ವಿಶೇಷವಾಗಿದೆ. ಎಲ್ ಇಟಿಯ ಹಿರಿಯ ಸದಸ್ಯರಾದ ನಿರ್ದೇಶಕ ಮರ್ಕಜ್ ತೈಬಾ, ಮುಖ್ಯ ತರಬೇತುದಾರ ಮೌಲಾನಾ ಅಬುಜರ್, ಕಮಾಂಡರ್ ಯೂನಸ್ ಶಾ ಬುಖಾರಿ ಇದರ ಮೇಲ್ವಿಚಾರಣೆ ನಡೆಸುತ್ತಿದ್ದಾರೆ. ಎಲ್‌ಇಟಿ ಪ್ರಧಾನ ಕಚೇರಿಯ ಪುನರ್ನಿರ್ಮಾಣಕ್ಕೆ ಪಾಕಿಸ್ತಾನ ಸರ್ಕಾರ ಹಣಕಾಸು ಒದಗಿಸುವುದಾಗಿ ಭರವಸೆ ನೀಡಿದೆ. ಪ್ರಧಾನಿ ಶಹಬಾಜ್ ಷರೀಫ್ ಮತ್ತು ಸೇನಾ ಮುಖ್ಯಸ್ಥ ಜನರಲ್ ಅಸಿಮ್ ಮುನೀರ್ ಅವರು ತಮ್ಮ ವೈಯಕ್ತಿಕ ಸಂಪನ್ಮೂಲಗಳಿಂದ ಮಸೀದಿಯನ್ನು ನಿರ್ಮಿಸಲಾಗುವುದು ಎಂದು ಹೇಳಿದ್ದರು. ಐಎಂಎಫ್‌ನಿಂದ 2 ಬಿಲಿಯನ್ ಡಾಲರ್ ನೆರವನ್ನು ಭಾರತ ಪ್ರಶ್ನಿಸಿದ ಬೆನ್ನಲ್ಲೇ ಈ ನಿರ್ಧಾರ ಬಂದಿದೆ. ಭಯೋತ್ಪಾದನಾ ನಿಗ್ರಹ ಪ್ರಯತ್ನಗಳ ವಿರುದ್ಧವಾಗಿ ಭಯೋತ್ಪಾದನಾ ಮೂಲಸೌಕರ್ಯಕ್ಕಾಗಿ ಹಣವನ್ನು ಖರ್ಚು ಮಾಡಲಾಗುತ್ತಿದೆ ಎಂದು ಭಾರತ ಹೇಳಿದೆ.

## ಚಳಿಗಾಲದ ಅಧಿವೇಶನದಲ್ಲಿ ವಿಮಾ ತಿದ್ದುಪಡಿ ಮಸೂದೆ

**ನವದೆಹಲಿ:** ವಿಮಾ ಕ್ಷೇತ್ರದಲ್ಲಿ ಶೇ. 100 ರಷ್ಟು ಎಫ್‌ಡಿಐ ಅನ್ನು ಪ್ರಸ್ತಾಪಿಸುವ ವಿಮಾ ತಿದ್ದುಪಡಿ ಮಸೂದೆಯನ್ನು ಚಳಿಗಾಲದ ಅಧಿವೇಶನದಲ್ಲಿ ಸಂಸತ್ತಿನಲ್ಲಿ ಮಂಡಿಸುವ ಸಾಧ್ಯತೆಯಿದೆ ಎಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಸಂಸತ್ತಿನ ಚಳಿಗಾಲದ ಅಧಿವೇಶನ ಸಾಮಾನ್ಯವಾಗಿ ನವೆಂಬರ್ ದ್ವಿತೀಯಾರ್ಧದಲ್ಲಿ ಪ್ರಾರಂಭವಾಗಿ ಕ್ರಿಸ್‌ಮಸ್‌ಗೆ ಮುಂಚಿತವಾಗಿ ಮುಕ್ತಾಯಗೊಳ್ಳುತ್ತದೆ.

ವಿಮಾ ಕ್ಷೇತ್ರದಲ್ಲಿ ಎಫ್‌ಡಿಐ ಅನ್ನು ಮತ್ತಷ್ಟು ಉದಾರಗೊಳಿಸುವ ಮಸೂದೆಯನ್ನು ಮುಂಬರುವ ಚಳಿಗಾಲದ ಅಧಿವೇಶನದಲ್ಲಿ ಸಂಸತ್ತಿನಲ್ಲಿ ಮಂಡಿಸಬಹುದೇ ಎಂದು ಕೇಳಿದಾಗ, ನಾನು ಆಶಿಸುತ್ತೇನೆ ಎಂದು ಅವರು ಪಿಟಿಐಗೆ ತಿಳಿಸಿದರು. ಈ ವರ್ಷದ ಬಜೆಟ್ ಭಾಷಣದಲ್ಲಿ ಹಣಕಾಸು ಸಚಿವರು, ಹೊಸ ಪೀಳಿಗೆಯ ಹಣಕಾಸು ವಲಯದ ಸುಧಾರಣೆಗಳ ಭಾಗವಾಗಿ ವಿಮಾ ಕ್ಷೇತ್ರದಲ್ಲಿ ವಿದೇಶಿ




ಹೂಡಿಕೆ ಮಿತಿಯನ್ನು ಅಸ್ತಿತ್ವದಲ್ಲಿರುವ ಶೇ. 74 ರಿಂದ ಶೇ. 100 ಕ್ಕೆ ಹೆಚ್ಚಿಸಲು ಪ್ರಸ್ತಾಪಿಸಿದರು.

ಈ ವರ್ಧಿತ ಮಿತಿ ಭಾರತದಲ್ಲಿ ಸಂಪೂರ್ಣ ಪ್ರೀಮಿಯಂ ಅನ್ನು ಹೂಡಿಕೆ ಮಾಡುವ ಕಂಪನಿಗಳಿಗೆ ಲಭ್ಯವಿರುತ್ತದೆ. ವಿದೇಶಿ ಹೂಡಿಕೆಗೆ ಸಂಬಂಧಿಸಿದ ಪ್ರಸ್ತುತ ಗಾರ್ಡ್‌ರೈಲ್‌ಗಳು ಮತ್ತು ಷರತ್ತುಗಳನ್ನು ಪರಿಶೀಲಿಸಲಾಗುತ್ತದೆ ಮತ್ತು ಸರಳೀಕರಿಸಲಾಗುತ್ತದೆ ಎಂದು ಅವರು ಹೇಳಿದ್ದರು.ಇಲ್ಲಿಯವರೆಗೆ, ವಿಮಾ ವಲಯವು ವಿದೇಶಿ ನೇರ ಹೂಡಿಕೆ ಮೂಲಕ ರೂ. 82,000 ಕೋಟಿಗಳನ್ನು ಆಕರ್ಷಿಸಿದೆ. ವಿಮಾ ಕಾಯ್ದೆ, 1938ರ ವಿವಿಧ ನಿಬಂಧನೆಗಳನ್ನು ತಿದ್ದುಪಡಿ ಮಾಡಲು ಹಣಕಾಸು ಸಚಿವಾಲಯ ಪ್ರಸ್ತಾಪಿಸಿದೆ, ಇದರಲ್ಲಿ ವಿಮಾ ವಲಯದಲ್ಲಿ ವಿದೇಶಿ ನೇರ ಹೂಡಿಕೆ ಅನ್ನು ಶೇಕಡಾ 100 ಕ್ಕೆ ಹೆಚ್ಚಿಸುವುದು, ಪಾವತಿಸಿದ ಬಂಡವಾಳದಲ್ಲಿ ಕಡಿತ ಮತ್ತು ಸಂಯೋಜಿತ ಪರವಾನಗಿಗೆ ಅವಕಾಶ ಸೇರಿವೆ. ವಿಮಾ ಕಾಯ್ದೆ, 1956 ರ ಸಮಗ್ರ, ಶಾಸಕಾಂಗ ವ್ಯಾಯಾಮದ ಭಾಗವಾಗಿ, ಜೀವ ವಿಮಾ ನಿಗಮ ಕಾಯ್ದೆ, 1999 ಮತ್ತು ವಿಮಾ ನಿಯಂತ್ರಣ ಮತ್ತು ಅಭಿವೃದ್ಧಿ ಪ್ರಾಧಿಕಾರ ಕಾಯ್ದೆ, 1938 ರ ವಿಮಾ ಕಾಯ್ದೆಯೊಂದಿಗೆ ತಿದ್ದುಪಡಿ ಮಾಡಲಾಗುವುದು.

ಎಲ್‌ಐಸಿ ಕಾಯ್ದೆಗೆ ತಿದ್ದುಪಡಿಗಳು ಶಾಖೆ ವಿಸ್ತರಣೆ ಮತ್ತು ನೇಮಕಾತಿಯಂತಹ ಕಾರ್ಯಾಚರಣೆಯ ನಿರ್ಧಾರಗಳನ್ನು ತೆಗೆದುಕೊಳ್ಳಲು ಅದರ ಮಂಡಳಿಗೆ ಅಧಿಕಾರ ನೀಡಲು ಪ್ರಸ್ತಾಪಿಸುತ್ತವೆ. ಈ ವಲಯದಲ್ಲಿ ಹೆಚ್ಚಿನ ಆಟಗಾರರ ಪ್ರವೇಶವು ಒಳಹೊಕ್ಕುಗೆ ಉತ್ತೇಜನ ನೀಡುವುದಲ್ಲದೆ, ದೇಶಾದ್ಯಂತ ಹೆಚ್ಚಿನ ಉದ್ಯೋಗ ಸೃಷ್ಟಿಗೆ ಕಾರಣವಾಗುತ್ತದೆ.

## ವಿದ್ಯಾರ್ಥಿಗಳ ಕಣ್ಣಿಗೆ ಫೆವಿಕ್ವಿಕ್ ಸುರಿದ ಸಹಪಾಠಿಗಳು

**ಒಡಿಶಾ:** ವಿದ್ಯಾರ್ಥಿಗಳು ಮಲಗಿದ್ದ ಸಂದರ್ಭದಲ್ಲಿ ಎಂಟು ವಿದ್ಯಾರ್ಥಿಗಳ ಕಣ್ಣಿಗೆ ಫೆವಿಕ್ವಿಕ್ ಹಾಕಿರುವ ಘಟನೆ ಒಡಿಶಾದ ಕಂಧಮಾಲ್ ಜಿಲ್ಲೆಯಲ್ಲಿ ನಡೆದಿದೆ. ಫಿರಿಂಗಿಯಾ ಬ್ಲಾಕ್‌ನ ಸಲಗುಡದಲ್ಲಿರುವ ಸೇವಾಶ್ರಮ್ ಶಾಲೆಯ ಹಾಸ್ಟೆಲ್‌ನಲ್ಲಿ ತಡರಾತ್ರಿ ಈ ಘಟನೆ ನಡೆದಿದ್ದು, ವಿದ್ಯಾರ್ಥಿಗಳು ಬೆಳಗಾಗುವಷ್ಟರಲ್ಲಿ ಕಣ್ಣು ತೆರೆಯಲು ಸಾಧ್ಯವಾಗಲಿಲ್ಲ ಎನ್ನಲಾಗಿದೆ. ಮೊದಲು ಅವರನ್ನು ಗೋಚಪದ ಆಸ್ಪತ್ರೆಗೆ ಕರೆದೊಯ್ಯಲಾಯಿತು, ನಂತರ ಹೆಚ್ಚಿನ ಚಿಕಿತ್ಸೆಗಾಗಿ ಫುಲ್ಬಾನಿಯಲ್ಲಿರುವ ಜಿಲ್ಲಾ ಕೇಂದ್ರ ಆಸ್ಪತ್ರೆಗೆ ಸ್ಥಳಾಂತರಿಸಲಾಯಿತು. ಫೆವಿಕ್ವಿಕ್ ಕಣ್ಣಿಗೆ ಹಾನಿಯನ್ನುಂಟುಮಾಡಿದೆ ಎಂದು ವೈದ್ಯರು ಹೇಳಿದ್ದಾರೆ. ಆದರೆ ಸಮಯಕ್ಕೆ ಸರಿಯಾಗಿ ಚಿಕಿತ್ಸೆ ನೀಡಿದ್ದಕ್ಕಾಗಿ ಮುಂದೆ ಸಂಭವಿಸಬಹುದಾದ ದೊಡ್ಡ ಅಪಾಯವನ್ನು ತಪ್ಪಿಸಲಾಗಿದೆ ಎಂದು ವೈದ್ಯರು ಹೇಳಿದ್ದಾರೆ.

ಒಬ್ಬ ವಿದ್ಯಾರ್ಥಿಯನ್ನು ಬಿಡುಗಡೆ ಮಾಡಲಾಗಿದೆ, ಆದರೆ ಇತರ ಏಳು ಮಂದಿಯನ್ನು ನಿಗಾದಲ್ಲಿರಿಸಲಾಗಿದೆ. ಘಟನೆಯ ನಂತರ, ಜಿಲ್ಲಾಡಳಿತವು ಶಾಲಾ ಮುಖ್ಯೋಪಾಧ್ಯಾಯ



ಮನೋರಂಜನ್ ಸಾಹು ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತುಗೊಳಿಸಲಾಗಿದೆ. ಹಾಸ್ಟೆಲ್ ಒಳಗೆ ಘಟನೆ ಹೇಗೆ ಸಂಭವಿಸಿತು ಎಂಬುದನ್ನು ಕಂಡುಹಿಡಿಯಲು ಮತ್ತು ವಾರ್ಡನ್‌ಗಳು, ಸೂಪರಿಂಟೆಂಡೆಂಟ್ ಸೇರಿದಂತೆ ಸಿಬ್ಬಂದಿ ಸದಸ್ಯರ ಪಾತ್ರವನ್ನು ಪರಿಶೀಲಿಸಲು ತನಿಖೆಯನ್ನು ಪ್ರಾರಂಭಿಸಲಾಗಿದೆ.ಮಕ್ಕಳು ಕ್ಯಾಂಪಸ್ ಒಳಗೆ ಅಂಟು ಹೇಗೆ ಸಂಗ್ರಹಿಸಿದರು ಮತ್ತು ಈ ಕೃತ್ಯದ ಹಿಂದಿನ ಉದ್ದೇಶದ ಬಗ್ಗೆಯೂ ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ.

ಕಂಧಮಲ್‌ನ ಕಲ್ಯಾಣ ಅಧಿಕಾರಿ ಆಸ್ಪತ್ರೆಯಲ್ಲಿ ಗಾಯಗೊಂಡ ವಿದ್ಯಾರ್ಥಿಗಳನ್ನು ಭೇಟಿ ಮಾಡಿದರು, ಆದರೆ ಜಿಲ್ಲಾಧಿಕಾರಿ ಈ ವಿಷಯದ ಬಗ್ಗೆ ವಿವರವಾದ ತನಿಖೆಗೆ ಆದೇಶಿಸಿದ್ದಾರೆ.

# ಬದಲಾಗುತ್ತಿದೆ ದೇಶದ ಜನಸಂಖ್ಯಾಶಾಸ್ತ್ರ: ಪ್ರಧಾನಿ ಮೋದಿ ಕಳವಳ

## ಒಳನುಗ್ಗುವವರಿಂದ ದೇಶವನ್ನು ರಕ್ಷಿಸುವುದು ಮತ್ತು ದೇಶದ ಸಮಗ್ರತೆಯನ್ನು ಪುನಃಸ್ಥಾಪಿಸುವುದು ಬಿಜೆಪಿಯ ಉದ್ದೇಶ

**ದರ್‍ರಾಂಗ್:** ಗಡಿಯಲ್ಲಿ ಒಳ ನುಸುಳುವವರಿಗೆ ಸಹಾಯ ಮಾಡುವ ಮೂಲಕ ಜನಸಂಖ್ಯಾಶಾಸ್ತ್ರವನ್ನು ಬದಲಾಯಿಸುವ ಪಿತೂರಿಗಳು ನಡೆಯುತ್ತಿವೆ. ಇದು ರಾಷ್ಟ್ರೀಯ ಭದ್ರತೆಗೆ ಅಪಾಯಕಾರಿಯಾಗಿದ್ದು, ದೇಶದಲ್ಲಿ ಜನಸಂಖ್ಯಾಶಾಸ್ತ್ರ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಗುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಅಸ್ಸಾಂಗೆ ಭೇಟಿ ನೀಡಿದ ಅವರು ದರ್‍ರಾಂಗ್‌ನಲ್ಲಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ಒಳನುಗ್ಗುವವರಿಂದ ದೇಶವನ್ನು ರಕ್ಷಿಸುವುದು ಮತ್ತು ದೇಶದ ಸಮಗ್ರತೆಯನ್ನು ಪುನಃಸ್ಥಾಪಿಸುವುದು ಬಿಜೆಪಿಯ ಉದ್ದೇಶವಾಗಿದೆ.

ಒಳನುಗ್ಗುವವರನ್ನು ರಕ್ಷಿಸುವ ರಾಜಕಾರಣಿಗಳು ಮುಂದೆ ಬಂದು ಈ ಸಮಸ್ಯೆಯನ್ನು ಎದುರಿಸಬೇಕೆಂದು ನಾನು ಸವಾಲು ಹಾಕುತ್ತೇನೆ. ಒಳನುಸುಳುವವರನ್ನು ತೆರವು ಮಾಡಲು ನಾವು ಸತತ ಪ್ರಯತ್ನ ಮಾಡಿದ್ದೇವೆ. ಇದಕ್ಕೆ ಎದುರಾಗಿ ಬೇರೆ ಪಕ್ಷಗಳು ಯಾವ ಪ್ರಯತ್ನವನ್ನು ಮಾಡಿಲ್ಲ. ಮುಂದಿನ ದಿನಗಳಲ್ಲಿ ಒಳನುಸುಳುವವರಿಗೆ ಆಶ್ರಯ ನೀಡುವವರು ತಕ್ಕ ಬೆಲೆ ಪಾವತಿಸಬೇಕಾಗುತ್ತದೆ. ರಾಷ್ಟ್ರ ಎಂದಿಗೂ ಅವರನ್ನು ಕ್ಷಮಿಸುವುದಿಲ್ಲ ಎಂದು ಕಿಡಿಕಾರಿದ್ದಾರೆ. ಪ್ರಧಾನಿಯವರು ಇದೇ ಸಂದರ್ಭದಲ್ಲಿ 18,530 ಕೋಟಿ ರೂ.ಗಳ ಯೋಜನೆಗಳನ್ನು ಲೋಕಾರ್ಪಣೆ ಮಾಡಿದರು. ಬಳಿಕ ದರ್‍ರಾಂಗ್ ವೈದ್ಯಕೀಯ ಕಾಲೇಜು, ಆಸ್ಪತ್ರೆ, ಜಿಎನ್‌ಎಂ ಶಾಲೆ, ಬಿ.ಎಸ್‌ಸಿ. ನರ್ಸಿಂಗ್ ಕಾಲೇಜು, ಗುವಾಹಟಿ



**ರಾಷ್ಟ್ರೀಯ ಭದ್ರತೆಗೆ ಅಪಾಯ**

ರಿಂಗ್ ರೋಡ್ ಯೋಜನೆ, ಬ್ರಹಪುತ್ರ ನದಿಯ ಮೇಲಿನ ಕುರುವಾ-ನರೇಂಗಿ ಸೇತುವೆಯನ್ನು ಪರಿಶೀಲಿಸಿದರು. ಕಾಮಗಾರಿಗಳಿಗೆ ರಿಮೋಟ್ ಮೂಲಕ ಚಾಲನೆ ನೀಡಿದ ಅವರು, ಇದು ನನ್ನ ರಿಮೋಟ್ ಕಂಟ್ರೋಲ್. ನಾನು ಯಾರ ರಿಮೋಟ್ ಕಂಟ್ರೋಲ್‌ನಲ್ಲಿ ಇಲ್ಲ. 140 ಕೋಟಿ ದೇಶವಾಸಿಗಳು ನನ್ನನ್ನು ರಿಮೋಟ್ ಕಂಟ್ರೋಲ್ ಮಾಡುತ್ತಿದ್ದಾರೆ ಎಂದರು.

ನನ್ನನ್ನು ಎಷ್ಟೇ ನಿಂದಿಸಿದರೂ ಪರವಾಗಿಲ್ಲ, ನಾನು ಶಿವನ ಭಕ್ತ, ನಾನು ಎಲ್ಲಾ ವಿಷವನ್ನು ಹೊರಹಾಕುತ್ತೇನೆ ಆದರೆ ಬೇರೆಯವರಿಗೆ ಅವಮಾನವಾದಾಗ, ನಾನು ಅದನ್ನು ಸಹಿಸುವುದಿಲ್ಲ. ನೀವು ಹೇಳಿ, ಭೂಪೇನ್ ದಾ ಅವರಿಗೆ ಭಾರತ ರತ್ನ ನೀಡಿ ಗೌರವಿಸುವ ನನ್ನ ನಿರ್ಧಾರ ಸರಿಯೋ ತಪ್ಪೋ? ಭಾರತ ರತ್ನ ನೀಡಿ ಗೌರವಿಸಿದ್ದಕ್ಕಾಗಿ ಕಾಂಗ್ರೆಸ್ ಪಕ್ಷ ಮಾಡಿದ ಅವಮಾನ ಸರಿಯೋ ತಪ್ಪೋ? ನಾವು ಈಗಾಗಲೇ ಭಾರತ ರತ್ನ ಸುಧಾಕಾಂತ ಭೂಪೇನ್ ಹಜಾರಿಕಾ ಜಿ ಅವರ ಜನ್ಮದಿನವನ್ನು ಆಚರಿಸಿದ್ದೇವೆ. ಅವರ ಗೌರವಾರ್ಥವಾಗಿ ನಿನ್ನೆ ಆಯೋಜಿಸಲಾದ ಒಂದು ದೊಡ್ಡ ಕಾರ್ಯಕ್ರಮದಲ್ಲಿ ಭಾಗವಹಿಸಲು ನನಗೆ ಅವಕಾಶ ಸಿಕ್ಕಿತು. ಮುಖ್ಯಮಂತ್ರಿಗಳು ಕಾಂಗ್ರೆಸ್ ಪಕ್ಷದ ಅಧ್ಯಕ್ಷರ ವಿಡಿಯೋವನ್ನು ನನಗೆ ತೋರಿಸಿದರು, ಅದನ್ನು ನೋಡಿ ನನಗೆ ತುಂಬಾ ನೋವಾಯಿತು. ಭಾರತ ಸರ್ಕಾರವು ಈ ದೇಶದ ಮಹಾನ್ ಪುತ್ರ, ಅಸ್ಸಾಂನ ಹೆಮೆ ಭೂಪೇನ್ ಹಜಾರಿಕಾ ಜಿ ಅವರಿಗೆ ಭಾರತ ರತ್ನ ನೀಡಿದ ದಿನ. ಕಾಂಗ್ರೆಸ್ ಪಕ್ಷದ ಅಧ್ಯಕ್ಷರು ಮೋದಿ ನೃತ್ಯಗಾರರು ಮತ್ತು ಗಾಯಕರಿಗೆ ಭಾರತ ರತ್ನ ನೀಡುತ್ತಿದ್ದಾರೆ ಎಂದು ಹೇಳಿದ್ದರು.

ಪಂಡಿತ್ ನೆಹರು ಹೇಳಿದಂತೆ, ಈಶಾನ್ಯ ಜನರ ಆ ಗಾಯಗಳು ಇಂದಿಗೂ ಗುಣವಾಗಿಲ್ಲ ಎಂದು ಮೋದಿ ಹೇಳಿದರು. ಆಪರೇಷನ್ ಸಿಂಧೂರ್ ನಂತರ ನಿನ್ನೆ ಅಸ್ಸಾಂಗೆ ನನ್ನ ಮೊದಲ ಭೇಟಿಯಾಗಿತ್ತು. ಮಾತೆ ಕಾಮಾಕ್ಯ ಅವರ ಆಶೀರ್ವಾದದಿಂದ ಆಪರೇಷನ್ ಸಿಂಧೂರ್ ಭಾರಿ ಯಶಸ್ಸನ್ನು ಕಂಡಿತು. ಇಂದು, ಮಾತೆ ಕಾಮಾಖ್ಯರ ಭೂಮಿಗೆ ಬಂದಿರುವುದರಿಂದ ನನಗೆ ವಿಭಿನ್ನವಾದ ಪವಿತ್ರ ಅನುಭವವಾಗುತ್ತಿದೆ.

**ನವರಾತ್ರಿಯ ಮೊದಲ ದಿನದಂದು, ಜಿಎಸ್‌ಟಿ ದರಗಳು ಗಮನಾರ್ಹವಾಗಿ ಕಡಿಮೆಯಾಗಲಿವೆ, ಇದು ಜನರಿಗೆ ಗಣನೀಯ ಪ್ರಯೋಜನಗಳನ್ನು ತರುತ್ತದೆ. ಜಿಎಸ್‌ಟಿ ಕಡಿತವು ಸಿಮೆಂಟ್, ವಿಮೆ, ಮೋಟಾರ್ ಸೈಕಲ್‌ಗಳು ಮತ್ತು ಕಾರುಗಳ ಬೆಲೆಗಳಲ್ಲಿ ಗಣನೀಯ ಇಳಿಕೆಗೆ ಕಾರಣವಾಗುತ್ತದೆ. ನೀವು ಈಗ ಖರೀದಿಸುವ ಯಾವುದೇ ವಸ್ತು ಸ್ವದೇಶಿ ಆಗಿರುತ್ತದೆ ಎಂದು ನಾನು ನನಗೆ ಭರವಸೆ ನೀಡುತ್ತೇನೆ. ಸ್ವದೇಶಿಯ ವ್ಯಾಖ್ಯಾನ ನನಗೆ ಸರಳವಾಗಿದೆ. ಕಂಪನಿಯು ಪ್ರಪಂಚದ ಯಾವುದೇ ಭಾಗದಿಂದ ಬಂದಿರಬಹುದು, ಆದರೆ ಬೆವರು ನನ್ನ ದೇಶದ ಯುವ ಸೈನಿಕರದ್ದಾಗಿರಬೇಕು. ಭಾರತದಲ್ಲಿ ಏನೇ ತಯಾರಾದರೂ, ಅದು ನನ್ನ ಭಾರತೀಯ ಮಣ್ಣಿನ ವಾಸನೆಯನ್ನು ಹೊಂದಿರಬೇಕು.**

**-ನರೇಂದ್ರ ಮೋದಿ, ಪ್ರಧಾನಿ**

ಈ ಪ್ರದೇಶದಲ್ಲಿ ಜನಾಷ್ಟಮಿ ಆಚರಿಸುತ್ತಿರುವುದು ಒಂದು ವಿಶೇಷ. ಕೆಂಪು ಕೋಟೆಯಿಂದ, ನಾನು ಚಕ್ರಧಾರಿ ಮೋಹನನನ್ನು ನೆನಪಿಸಿಕೊಂಡೆ ಎಂದು ಹೇಳಿದ್ದೆ. ನಾನು ಶ್ರೀಕೃಷ್ಣನನ್ನು ನೆನಪಿಸಿಕೊಂಡೆ. ಭವಿಷ್ಯದ ಭದ್ರತಾ ನೀತಿಯಲ್ಲಿ ಸುದರ್ಶನ ಚಕ್ರದ ಕಲ್ಪನೆಯನ್ನು ಜನರ ಮುಂದೆ ಮಂಡಿಸಿದ್ದೇನೆ ಎಂದಿದ್ದಾರೆ.

## ಮಿನಿ ನ್ಯೂಸ್

### ಫ್ಲೈಓವರ್‌ನಿಂದ ರೈಲು ಹಳಿಗಳ ಮೇಲೆ ಹಾರಿ ಬಿದ್ದ ಕಾರು

**ನವದೆಹಲಿ:** ಭಾನುವಾರ ಬೆಳಿಗ್ಗೆ ವ್ಯಕ್ತಿಯೊಬ್ಬ ತನ್ನ ಕಾರಿನ ನಿಯಂತ್ರಣ ಕಳೆದುಕೊಂಡು, ಉತ್ತರ ದೆಹಲಿಯ ಹೊರವಲಯದ ಮುಖರ್ಬಾ ಚೌಕ್ ಫ್ಲೈಓವರ್‌ನಿಂದ ಹೈದರ್ಪುರ್ ಮೆಟ್ರೋ ನಿಲ್ದಾಣದ ಬಳಿಯ ರೈಲ್ವೆ ಹಳಿಗಳ ಮೇಲೆ ಬಿದ್ದಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಆದರೆ, ಗಾಜಿಯಾಬಾದ್ ನಿವಾಸಿ ಸಚಿನ್ ಚೌಧರಿ (35) ಅವರ ಭುಜ ಮತ್ತು ಮುಖದ ಮೇಲೆ ಸಣ್ಣಪುಟ್ಟ ಗಾಯಗಳಾಗಿವೆ.ಸಮಯ್‌ಪುರ್ ಬದ್ಲಿ ಪೊಲೀಸ್ ಠಾಣೆಯಲ್ಲಿ ಬೆಳಿಗ್ಗೆ ಘಟನೆಯ ಬಗ್ಗೆ ಪೊಲೀಸರಿಗೆ ಮಾಹಿತಿ ಸಿಕ್ಕಿತು.ಘಟನೆಯ ನಂತರ ಸ್ಥಳಕ್ಕೆ ಧಾವಿಸಿದ ತಂಡವು ರಿಂಗ್ ರಸ್ತೆಯ ಕೆಳಗೆ ಹಳಿಗಳ ಮೇಲೆ ಕಾರು ಉರುಳಿ ಬಿದ್ದಿರುವುದನ್ನು ಕಂಡುಕೊಂಡಿತು ಎಂದು ಪೊಲೀಸ್ ಉಪ ಆಯುಕ್ತ (ಉತ್ತರ) ಹರೇಶ್ವರ ಸ್ವಾಮಿ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಪೀರಗಢಿಯಿಂದ ಗಾಜಿಯಾಬಾದ್‌ಗೆ ಪ್ರಯಾಣಿಸುತ್ತಿದ್ದಾಗ, ಫ್ಲೈಓವರ್‌ನ ರೈಲು ಮಾರ್ಗಗಳನ್ನು ದಾಟುವಾಗ ವಾಹನದ ನಿಯಂತ್ರಣ ಕಳೆದುಕೊಂಡಿದ್ದಾಗಿ ಚೌಧರಿ ಪೊಲೀಸರಿಗೆ ತಿಳಿಸಿದ್ದಾರೆ ಎಂದು ಅಧಿಕಾರಿ ಹೇಳಿದರು.ಕಾರು ಪಾದಚಾರಿ ಮಾರ್ಗಕ್ಕೆ ಡಿಕ್ಕಿ ಹೊಡೆದು, ಕಂಬಿಬೇಲಿಯನ್ನು ದಾಟಿ, ಹುಲ್ಲಿನ ಇಳಿಜಾರಿನಲ್ಲಿ ಉರುಳಿ, ಹಳಿಗಳ ಮೇಲೆ ತಲೆಕೆಳಗಾಗಿ ಬಿತ್ತು ಎಂದು ಅಧಿಕಾರಿ ಹೇಳಿದರು. ರೈಲ್ವೆ ಹಳಿಯನ್ನು ತೆರವುಗೊಳಿಸಲು ವಾಹನವನ್ನು ತಕ್ಷಣವೇ ತೆಗೆದುಹಾಕಲಾಯಿತು. ಚಾಲಕನನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಲಾಗುತ್ತಿದೆ ಎಂದು ಅವರು ಹೇಳಿದರು. ಹಳಿಯನ್ನು ತ್ವರಿತವಾಗಿ ತೆರವುಗೊಳಿಸಿದ್ದರಿಂದ ಯಾವುದೇ ರೈಲು ಸಂಚಾರಕ್ಕೆ ತೊಂದರೆಯಾಗಿಲ್ಲ ಮತ್ತು ಬೇರೆ ಯಾವುದೇ ಗಾಯಗಳಾಗಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ. ಏತನ್ಮಧ್ಯೆ, ಸ್ಥಳದಲ್ಲಿ ನೀಲಿ ಬಣ್ಣದ ಮೋಟಾರ್ ಸೈಕಲ್ ಕೂಡ ಪತ್ತೆಯಾಗಿದೆ. ಪೊಲೀಸರ ಪ್ರಕಾರ, ಶನಿವಾರದಿಂದ ದ್ವಿಚಕ್ರ ವಾಹನ ಅಲ್ಲಿಯೇ ಬಿದ್ದಿತ್ತು ಆದರೆ ಕಾರು ಅಪಘಾತಕ್ಕೂ ಅದಕ್ಕೆ ಸಂಬಂಧವಿಲ್ಲ. ಬೈಕ್ ಕದ್ದಿದೆಯೇ ಎಂದು ಖಚಿತಪಡಿಸಿಕೊಳ್ಳಲು ಮಾಲೀಕರನ್ನು ಪತ್ತೆ ಮಾಡಲಾಗುತ್ತಿದೆ.ಇವು ಎರಡು ಪ್ರತ್ಯೇಕ ಮತ್ತು ಸಂಬಂಧವಿಲ್ಲದ ಎರಡು ಘಟನೆಗಳು. ಮೋಟಾರ್ ಸೈಕಲ್‌ಗೆ ಸಂಬಂಧಿಸಿದಂತೆ ಯಾವುದೇ ಅಪಘಾತ ವರದಿಯಾಗಿಲ್ಲ ಎಂದು ಅಧಿಕಾರಿ ಸ್ಪಷ್ಟಪಡಿಸಿದರು. ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

### 12 ಕೋಟಿ ಮೌಲ್ಯದ ಪಾಕ್‌ನ ಖರ್ಜೂರ, ಸೌಂದರ್ಯವರ್ಧಕ ಸೀಜ್

**ಮುಂಬೈ:** ನವಿ ಮುಂಬೈನ ನವಾ ಶೇವಾ ಬಂದರಿನಲ್ಲಿ ಸುಮಾರು 12 ಕೋಟಿ ರೂ. ಮೌಲ್ಯದ ಪಾಕಿಸ್ತಾನ ಮೂಲದ ಸೌಂದರ್ಯವರ್ಧಕಗಳು ಮತ್ತು ಒಣ ಖರ್ಜೂರವನ್ನು ಸಾಗಿಸುತ್ತಿದ್ದ 28 ಕಂಟೇನರ್‌ಗಳನ್ನು ಡಿಆರ್‌ಐ ವಶಪಡಿಸಿಕೊಂಡಿದ್ದು,ಈ ಸಂಬಂಧ ಇಬ್ಬರು ವ್ಯಕ್ತಿಗಳನ್ನು ಬಂಧಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪಾಕಿಸ್ತಾನ ಮೂಲದ ಸರಕುಗಳ ಆಮದಿಗೆ ಸರ್ಕಾರ ವಿಧಿಸಿರುವ ನಿಷೇಧಗಳನ್ನು ಸ್ಪಷ್ಟವಾಗಿ ಉಲ್ಲಂಘಿಸಿ ಮೂವರು ಭಾರತೀಯ ಆಮದುದಾರರು ಈ ಸರಕುಗಳನ್ನು ಖರೀದಿಸಿದ್ದಾರೆ ಎಂದು ಕಂದಾಯ ಗುಪ್ತಚರ ನಿರ್ದೇಶನಾಲಯ ಅಧಿಕಾರಿಗಳು ತಿಳಿಸಿದ್ದಾರೆ. ಕಮಿಷನ್ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ದುಬೈ ಮೂಲದ ಭಾರತೀಯ ಪ್ರಜೆಯೊಬ್ಬರು ನಕಲಿ ಇನ್‌ವಾಯ್ಸ್‌ಗಳನ್ನು ನೀಡುವ ಮೂಲಕ ಪಾಕಿಸ್ತಾನದಿಂದ ಒಣ ಖರ್ಜೂರವನ್ನು ಸಾಗಿಸಲು ಅನುಕೂಲ ಮಾಡಿ ಕೊಟ್ಟರು. ಸಮುದ್ರ ಸಾರಿಗೆ ಹಾದಿಯನ್ನು ಮರೆಮಾಚಲು ಅವರು ತಮ್ಮ ಸಂಸ್ಥೆಗಳನ್ನು ಬಳಸಿಕೊಂಡಿದ್ದಾರೆ ಎಂದು ಆರೋಪಿಸಲಾಗಿದೆ.

ಕಂಟೇನರ್‌ಗಳನ್ನು ಯುಎಇ ಮೂಲದವರು ಎಂದು ತಪ್ಪಾಗಿ ಘೋಷಿಸುವ ಮೂಲಕ ದುಬೈನ ಜೆಬೆಲ್ ಅಲಿ ಬಂದರಿನ ಮೂಲಕ ಸಾಗಿಸಲಾಯಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಆಪರೇಷನ್ ಡೀಪ್ ಮ್ಯಾನಿಫೆಸ್ಟ್ ಅಡಿಯಲ್ಲಿ, ಭಾರತದ ಉನ್ನತ ಕಳ್ಳಸಾಗಣೆ ವಿರೋಧಿ ಘಟಕವು 800 ಟನ್ ಸೌಂದರ್ಯವರ್ಧಕಗಳು ಮತ್ತು ಪಾಕಿಸ್ತಾನ ಮೂಲದ ಒಣ ಖರ್ಜೂರವನ್ನು ತುಂಬಿದ 28 ಕಂಟೇನರ್‌ಗಳನ್ನು ವಶಪಡಿಸಿಕೊಂಡಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

### ವಲಸೆ ವಿರೋಧಿ ಪ್ರತಿಭಟನೆಯಲ್ಲಿ 1 ಲಕ್ಷಕ್ಕೂ ಅಧಿಕ ಮಂದಿ ಭಾಗಿ, ಸಂಘರ್ಷ

**ಲಂಡನ್:** ಬ್ರಿಟನ್‌ನಲ್ಲಿ ವಲಸೆ ವಿರೋಧಿ ಪ್ರತಿಭಟನೆಯಲ್ಲಿ ಒಂದು ಲಕ್ಷಕ್ಕೂ ಅಧಿಕ ಮಂದಿ ಪಾಲ್ಗೊಂಡಿದ್ದಾರೆ. ಈ ಸಂದರ್ಭದಲ್ಲಿ ಸಂಘರ್ಷದ ವಾತಾವರಣ ನಿರ್ಮಾಣವಾಗಿತ್ತು ಎಂದು ವರದಿಯಾಗಿದೆ. ಟಾಮಿ ರಾಬಿನ್ಸನ್ ನೇತೃತ್ವದಲ್ಲಿ ವಲಸೆ ವಿರೋಧಿ ಪ್ರತಿಭಟನಾಕಾರರು ಲಂಡನ್ ನಗರದಲ್ಲಿ ಬೃಹತ್ ಪ್ರತಿಭಟನಾ ರ‍್ಯಾಲಿಯನ್ನು ಹಮ್ಮಿಕೊಂಡಿದ್ದರು. ಪ್ರತಿಭಟನಾಕಾರರನ್ನು ಲಂಡನ್‌ನ ಮೆಟ್ರೊಪಾಲಿಟನ್ ಪೊಲೀಸರು ತಡೆಯಲು ಯತ್ನಿಸಿದಾಗ ಸಂಘರ್ಷ ಉಂಟಾಯಿತು. ಘರ್ಷಣೆಗೆ ಸಂಬಂಧಿಸಿದಂತೆ ಈವರೆಗೆ 25 ಮಂದಿಯನ್ನು ಬಂಧಿಸಲಾಗಿದ್ದು, ಮತ್ತಷ್ಟು ಮಂದಿಯನ್ನು ಬಂಧಿಸುವ ಸಾಧ್ಯತೆಯಿದೆ.

ಘಟನೆಯಲ್ಲಿ 26 ಪೊಲೀಸ್ ಸಿಬ್ಬಂದಿ ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕಾನೂನುಬದ್ಧವಾಗಿ ಪ್ರತಿಭಟಿಸಲು ಬಂದವರನ್ನು ಹತ್ತಿಕ್ಕುವುದಿಲ್ಲ. ಆದರೆ ಅಲ್ಲಿ ಕೆಲವರು ಹಿಂಸಾಚಾರ ಮಾಡುವ ಹುನ್ನಾರವನ್ನು ಹೊಂದಿದ್ದರು ಎಂದು ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ.

### ರಷ್ಯಾದಿಂದ ತೈಲ ಖರೀದಿ ನಿಲ್ಲಿಸಲು ನ್ಯಾಟೊಗೆ ಟ್ರಂಪ್ ಒತ್ತಾಯ

**ವಾಷಿಂಗ್ಟನ್:** ಚೀನಾದ ಮೇಲೆ ಶೇ 50ರಿಂದ 100ರಷ್ಟು ಸುಂಕ ವಿಧಿಸುವುದಾಗಿ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಸಿದ್ದಾರೆ. ಅಲ್ಲದೆ ನ್ಯಾಟೊ ರಾಷ್ಟ್ರಗಳು ರಷ್ಯಾದಿಂದ ತೈಲ ಖರೀದಿ ಮಾಡುವುದನ್ನು ನಿಲ್ಲಿಸಬೇಕೆಂದು ಒತ್ತಾಯಿಸಿದ್ದಾರೆ. ಹಾಗಾದಲ್ಲಿ ಮಾತ್ರ ರಷ್ಯಾ ಹಾಗೂ ಉಕ್ರೇನ್ ನಡುವಣ ಯುದ್ಧವನ್ನು ನಿಲ್ಲಿಸಲು ಸಾಧ್ಯ ಎಂದಿದ್ದಾರೆ.

ಸಾಮಾಜಿಕ ಜಾಲತಾಣ ಟ್ರುಥ್‌ನಲ್ಲಿ ಈ ಕುರಿತು ಪೋಸ್ಟ್ ಮಾಡಿರುವ ಟ್ರಂಪ್, ನ್ಯಾಟೊ ರಾಷ್ಟ್ರಗಳು ರಷ್ಯಾದಿಂದ ತೈಲ ಖರೀದಿ ಮಾಡುತ್ತಿರುವುದು ನಿಜಕ್ಕೂ ಆಘಾತಕಾರಿ. ಇದು ರಷ್ಯಾ ಜೊತೆಗಿನ ಸಂಧಾನವನ್ನು ದುರ್ಬಲಗೊಳಿಸುತ್ತದೆ ಎಂದು ಹೇಳಿದ್ದಾರೆ. ರಷ್ಯಾದಿಂದ ತೈಲ ಖರೀದಿಗೆ ನ್ಯಾಟೊ ನಿಷೇಧ, ಚೀನಾದ ಮೇಲಿನ ಅಧಿಕ ಸುಂಕ ಹೇರಿಕೆಯಿಂದ ಈ ಘೋರ ಯುದ್ಧವನ್ನು ಕೊನೆಗೊಳಿಸಬಹುದಾಗಿದೆ ಎಂದು ಟ್ರಂಪ್ ಹೇಳಿದ್ದಾರೆ. ರಷ್ಯಾದ ಮೇಲೆ ಚೀನಾ ನಿಯಂತ್ರಣವನ್ನು ಹೊಂದಿದೆ. ಸುಂಕ ವಿಧಿಸುವುದರಿಂದ ಈ ಹಿಡಿತವನ್ನು ದುರ್ಬಲಗೊಳಿಸಬಹುದಾಗಿದೆ ಎಂದು ಅವರು ಉಲ್ಲೇಖಿಸಿದ್ದಾರೆ.

ಇದು ಟ್ರಂಪ್ ಅವರ ಯುದ್ಧವಲ್ಲ. ಅಮೆರಿಕದ ಮಾಜಿ ಅಧ್ಯಕ್ಷ ಜೋ ಬೈಡನ್ ಹಾಗೂ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್‌ಸ್ಕಿ ಅವರ ಯುದ್ಧವಾಗಿದೆ. ನಾನು ಇಲ್ಲಿ ಯುದ್ಧವನ್ನು ಕೊನೆಗೊಳಿಸಲು ಬಯಸುತ್ತೇನೆ. ಸಾವಿರಾರು ಜೀವಗಳನ್ನು ಉಳಿಸಲು ಯತ್ನಿಸುತ್ತಿದ್ದೇನೆ ಎಂದು ಹೇಳಿದ್ದಾರೆ. ನಾನು ಹೇಳಿದ್ದನ್ನು ನ್ಯಾಟೊ ಮಾಡಿದ್ದಲ್ಲಿ ಯುದ್ಧ ಆದಷ್ಟು ಬೇಗ ಕೊನೆಗೊಳ್ಳಲಿದೆ. ಇಲ್ಲದಿದ್ದರೆ ನನ್ನ, ಅಮೆರಿಕದ ಸಮಯ, ಶಕ್ತಿ, ಹಣವನ್ನು ವ್ಯರ್ಥ ಮಾಡುತ್ತಿದ್ದೀರಿ ಎಂದು ಹೇಳಿದ್ದಾರೆ.

